ಸಂಪುಟ: ೦೭/ ಸಂಚಿಕೆ: ೧೯೫/ ಮಂಗಳವಾರ ದಿನಾಂಕ : ೨೩-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 195/ TUESDAY Date : 23-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



ನವರಾತ್ರಿ ಉತ್ಸವದ ಮೊದಲ ದಿನವಾದ ಇಂದು ಧಾರವಾಡ ಶಾಂತಿ ನಿಕೇತನ ನಗರದ ಶ್ರೀ ಕರಿಯಮ್ಮ ದೇವಿಗೆ ಶ್ರೀ ರೇಣುಕಾ ಯಲ್ಲಮ್ಮ ದೇವಿ ಅಲಂಕಾರ ಮಾಡಲಾಗಿತ್ತು.


## ಅಧಿದೇವತೆ ಚಾಮುಂಡೇಶ್ವರಿ ಮೂರ್ತಿಗೆ ಬಾನು ಮುಷ್ತಾಕ್‌ರಿಂದ ಪುಷ್ಪಾರ್ಚನೆ

# ವಿಶ್ವಖ್ಯಾತ ದಸರಾಗೆ ಚಾಲನೆ

**ಮೈಸೂರು:** ವಿಶ್ವಖ್ಯಾತ ಮೈಸೂರು ದಸರಾಗೆ ಬೂಕರ್ ಪ್ರಶಸ್ತಿ ಪುರಸ್ಕೃತೆ, ಸಾಹಿತಿ ಬಾನು ಮುಷ್ತಾಕ್ ಅವರು ಅಧಿದೇವತೆ ಚಾಮುಂಡೇಶ್ವರಿ ಉತ್ಸವ ಮೂರ್ತಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಸಂಪ್ರದಾಯಬದ್ಧವಾಗಿ ದಸರಾಗೆ ವಿದ್ಯುಕ್ತ ಚಾಲನೆ ನೀಡಿದರು.

ಸೋಮವಾರ ಬೆಳಿಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಮಹದೇವಪ್ಪ ಸೇರಿದಂತೆ ಮತ್ತಿತರ ಗಣ್ಯರೊಂದಿಗೆ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ದೇವಾಲಯದ ಆವರಣದಲ್ಲಿರುವ ವಿಘ್ನ ನಿವಾರಕ ಗಣೇಶನಿಗೆ ನಮಿಸಿ ನಂತರ ಅಧಿದೇವತೆ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿದರು. ಇದಕ್ಕೂ ಮುನ್ನ ತಾಯಿ ಚಾಮುಂಡೇಶ್ವರಿಗೆ ಇಂದು ಬೆಳಿಗ್ಗಿನಿಂದಲೇ ದೇವೀ ಕೆರೆಯಿಂದ ಜಲವನ್ನು ತಂದು ಅಭಿಷೇಕವನ್ನು ಮಾಡಿ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ ನೆರವೇರಿಸಿದರು.

ದೇವಾಲಯವನ್ನು ವಿವಿಧಹೂ ಹಾಗೂ ಕಬ್ಬಿನ ಜಲ್ಲೆಯಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ದೇವಿಗೆ ಇಂದು ಬ್ರಾಹ್ಮಿ ಅಲಂಕಾರ ಮಾಡಲಾಗಿದ್ದು, ಪ್ರಧನ ಅರ್ಚಕರಾದ ಶಶಿಶೇಖರ ದೀಕ್ಷಿತ್‌ರವರು ಸಂಕಲ್ಪವನ್ನು ಮಾಡಿ ಮಹಾಮಂಗಳಾರತಿ ನೆರವೇರಿಸಿದರು. ಮಂಗಳಾರತಿ ಸ್ವೀಕರಿಸಿದ ವೇಳೆ ಬಾನು ಮುಷ್ತಾಕ್‌ರವರು ಭಾವುಕರಾದರು.



ನಂತರ ಉದ್ಘಾಟನಾ ಕಾರ್ಯಕ್ರಮಕ್ಕೆ ಮುಷ್ತಾಕ್‌ರವರು ಅರ್ಚಕರಿಂದ ಹೂವಿನ ಹಾರವನ್ನು ಸ್ವೀಕರಿಸಿದರು. ದೇವಿ ಪೂಜೆ ಹಾಗೂ ದಸರಾ ಉದ್ಘಾಟನೆಗೆ ಅರಿಶಿನ ಬಣ್ಣದ ಸೀರೆ ಹಾಗೂ ಹಸಿರು ಬಣ್ಣದ ರವಿಕೆ ತೊಟ್ಟು, ಹೂ ಮುಡಿದಿದ್ದು ವಿಶೇಷವಾಗಿತ್ತು.

ನಂತರ ದೇವಾಲಯದ ಆವರಣದಲ್ಲಿ ನಿರ್ಮಾಣ ಮಾಡಲಾಗಿದ್ದ ಬೃಹತ್ ವೇದಿಕೆಯತ್ತ ಆಗಮಿಸಿದ ಬಾನು ಮುಷ್ತಾಕ್‌ರವರಿಗೆ ಮೈಸೂರು ಪೇಟ ಹಾಗೂ ಶಾಲು ಹೊದಿಸಿ ಹಾಗೂ ಮರದ ಅಂಬಾರಿಯ ಸ್ಮರಣಿಕೆಯನ್ನು ನೀಡಿ ಸನ್ಮಾನಿಸಲಾಯಿತು.

ಬೆಳಿಗ್ಗೆ 10.10 ರಿಂದ 10.40ರ ವೃಶ್ಚಿಕ ಲಗ್ನದಲ್ಲಿ ಬೆಳ್ಳಿರಥದಲ್ಲಿ ಅಲಂಕೃತಗೊಂಡಿದ್ದ ತಾಯಿ ಚಾಮುಂಡೇಶ್ವರಿ ಉತ್ಸವ ಮೂರ್ತಿಗೆ ಸಾಹಿತಿ ಬಾನು ಮುಷ್ತಾಕ್ ಅವರು ಪುಷ್ಪಾರ್ಚನೆ ಮಾಡುವ ಮೂಲಕ ದಸರಾಗೆ ವಿದ್ಯುಕ್ತ ಚಾಲನೆ ನೀಡಿದರು.

ವೇದಿಕೆ ಕಾರ್ಯಕ್ರಮದಲ್ಲಿ ಸಚಿವರುಗಳಾದ ವೆಂಕಟೇಶ್, ಮುನಿಯಪ್ಪ, ಎಚ್.ಸಿ.ಮಹದೇವಪ್ಪ, ಶಿವರಾಜ್ ತಂಗಡಗಿ, ಎಚ್.ಕೆ.ಪಾಟೀಲ್, ಶಾಸಕರಾದ ಜಿ.ಟಿ.ದೇವೇಗೌಡ, ತನ್ವೀರ್ ಸೇಠ್, ಶ್ರೀವತ್ಸ, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಸೇರಿದಂತೆ ಮತ್ತಿತರ ಗಣ್ಯರು, ಅಧಿಕಾರಿಗಳು ಪಾಲ್ಗೊಂಡಿದ್ದರು.

# ಜಾತಿಗಣತಿಯಲ್ಲ, ಸಾಮಾಜಿಕ ನ್ಯಾಯ ಒದಗಿಸುವ ಸಮೀಕ್ಷೆ

**ಹೊಸದಿಲ್ಲಿ:** ರಾಜ್ಯ ಸರಕಾರದ 'ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ' ಮೇಲೆ ಯಾರಿಗೂ ಸಂಶಯ ಬೇಡ. ಇದು ಕೇವಲ ಜಾತಿಗಳ ಗಣತಿಯಲ್ಲ. ಬದಲಿಗೆ ಸಾಮಾಜಿಕ ನ್ಯಾಯ ಒದಗಿಸುವ ಸಮೀಕ್ಷೆ. ಇದರ ಬಗ್ಗೆ ಎಲ್ಲ ಸಮುದಾಯದವರು ಎಚ್ಚೆತ್ತುಕೊಂಡು, ಇದರ ಉಪಯೋಗ ಪಡೆಯಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ ಮಾಡಿದ್ದಾರೆ.



ರವಿವಾರ ದಿಲ್ಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಜಾತಿಗಣತಿ ವಿಚಾರವಾಗಿ ಕ್ರೈಸ್ತ ಜಾತಿಗಳನ್ನು ಹಿಂದುಳಿದ ವರ್ಗಗಳ ಆಯೋಗವು ಕೈಬಿಡಲು ನಿರ್ಧರಿಸಿದೆ. ಈ ಮಧ್ಯೆ ವೀರಶೈವ ಲಿಂಗಾಯತರ ಸಂಖ್ಯೆ ಕಡಿಮೆ ತೋರಿಸುವ ಸಾಧ್ಯತೆ ಇದೆ ಎಂಬುದು ಸರಿಯಲ್ಲ. ಕಳೆದ ಸಮೀಕ್ಷೆ ನಡೆಸಿ 10 ವರ್ಷ ಕಳೆದಿರುವ ಕಾರಣ, ಮರುಸಮೀಕ್ಷೆ ಮಾಡಲಾಗುತ್ತಿದೆ. ಈ ಬಾರಿ ಮಾಹಿತಿ ನೀಡಲು ಎಲ್ಲ ಸಮಾಜದವರಿಗೂ ಸಂಪೂರ್ಣ ಅವಕಾಶ ನೀಡಿದ್ದೇವೆ. ಎಲ್ಲರೂ ಈ ಸಮೀಕ್ಷೆ ವಿಚಾರದಲ್ಲಿ ಜಾಗೃತರಾಗಿ, ತಪ್ಪದೇ ಭಾಗವಹಿಸಬೇಕು ಎಂದು ಕರೆ ನೀಡಿದರು. ಕರ್ನಾಟಕ ರಾಜ್ಯದ 7 ಕೋಟಿ ಕನ್ನಡಿಗರು, ಪ್ರಪಂಚದ ಯಾವುದೇ ದೇಶದಲ್ಲಿರುವ ಕನ್ನಡಿಗರು ಆನ್‌ಲೈನ್ ಮೂಲಕ ತಮ್ಮ ಮಾಹಿತಿ ಸಲ್ಲಿಸಬಹುದು. ಜೊತೆಗೆ ನೀವು ಆಕ್ಷೇಪ ಸಲ್ಲಿಸಲು ಅವಕಾಶ ಕಲ್ಪಿಸಿದ್ದೇವೆ. ನಿಮ್ಮ ಮಾಹಿತಿಯನ್ನು ನಿಮ್ಮ ಮೊಬೈಲ್‌ನಲ್ಲೇ ಪಡೆಯುವ ಅವಕಾಶವಿದೆ. ನೀವು ನಿಮ್ಮ ಕುಟುಂಬದವರ ವಿವರ ಬರೆಸಿ ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷನಾಗಿ ನಾನು ಎಲ್ಲ ಸಮಾಜದವರಲ್ಲಿ ಮನವಿ ಮಾಡಿಕೊಳ್ಳುತ್ತೇನೆ ಎಂದು ಶಿವಕುಮಾರ್ ಕೋರಿದರು. ಸಮಾಜದಲ್ಲಿನ ಎಲ್ಲರಿಗೂ ನ್ಯಾಯ ಒದಗಿಸಿ ಕೊಡಬೇಕು ಎಂದು ನಮ್ಮ ಸರಕಾರ ಈ ತೀರ್ಮಾನ ಮಾಡಿದೆ. ವೀರಶೈವ ಸಮಾಜಕ್ಕೆ ತೊಂದರೆಯಾಗಲಿದೆ ಎಂದು ರಂಭಾಪುರಿ ಶ್ರೀಗಳು ಆತಂಕಪಡುವ ಅಗತ್ಯವಿಲ್ಲ. ನೀವು ನಿಮ್ಮ ಸಮುದಾಯದ ಜನರಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಿ. ಅದೇ ರೀತಿ ಎಲ್ಲರೂ ತಮ್ಮ-ತಮ್ಮ ಸಮುದಾಯಗಳಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಅವರು ಕರೆ ನೀಡಿದರು.

# ರಾಜ್ಯಸಭಾ ಸದಸ್ಯೆ ಸುಧಾಮೂರ್ತಿಗೆ ಸೈಬರ್ ವಂಚಕರ ಬೆದರಿಕೆ

**ಬೆಂಗಳೂರು:** ರಾಜ್ಯಸಭಾ ಸಂಸದೆ ಹಾಗೂ ಇನ್ಫೋಸಿಸ್ ಫೌಂಡೇಶನ್ ಚೇರ್ಮನ್ ಆಗಿರುವ ಸುಧಾಮೂರ್ತಿ ಅವರಿಗೆ ಸೈಬರ್ ವಂಚಕನೊಬ್ಬ ಕರೆ ಮಾಡಿ ಬೆದರಿಕೆ ಹಾಕಿರುವ ಘಟನೆ ನಡೆದಿದೆ. ಮೂಲಗಳ ಪ್ರಕಾರ ಬೆಳಗ್ಗೆ 9.40ರ ವೇಳೆಗೆ ಸೈಬರ್ ವಂಚಕ ಸುಧಾಮೂರ್ತಿ ಅವರಿಗೆ ಕರೆ ಮಾಡಿದ್ದು, ತಾನು ಟೆಲಿಕಾಂ ಸಚಿವಾಲಯದ ಸಿಬ್ಬಂದಿ... ನಿಮ್ಮ ಮೊಬೈಲ್ ಫೋನ್ ಸಂಖ್ಯೆಯನ್ನು ಅಶ್ಲೀಲ ವೀಡಿಯೊಗಳನ್ನು ಪ್ರಸಾರ ಮಾಡಲು ಬಳಸಲಾಗುತ್ತಿದೆ. ಮಧ್ಯಾಹ್ನ 12 ಗಂಟೆಯೊಳಗೆ ಫೋನ್ ಸಂಖ್ಯೆಯ ಸಂಪರ್ಕ ಕಡಿತಗೊಳಿಸಲಾಗುವುದು ಎಂದು ಹೇಳಿದ್ದಾನೆ.

ಇನ್ನು ಸುಧಾಮೂರ್ತಿ ಅವರು ಈ ಸಂಖ್ಯೆಯನ್ನು ಟ್ರೂ ಕಾಲರ್‌ನಲ್ಲಿ ಪರಿಶೀಲಿಸಿದಾಗ ಅದು ಟೆಲಿಕಾಂ ವಿಭಾಗ ಎಂದು ಸೂಚಿಸಿತ್ತು. ಹೀಗಾಗಿ ಸುಧಾಮೂರ್ತಿ ಅವರು ಫೋನ್ ರಿಸೀವ್ ಮಾಡಿದ್ದಾರೆ. ಇದೀಗ ಈ ಕುರಿತು ಸುಧಾಮೂರ್ತಿ ಬೆಂಗಳೂರು ಸೈಬರ್ ಕ್ರೈಂ ಪೊಲೀಸರಿಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ವಂಚಕನ ಫೋನ್ ನಂಬರ್ ಸೇರಿದಂತೆ ಹಲವು ಮಾಹಿತಿಗಳನ್ನು ಪಡೆದುಕೊಂಡಿದ್ದಾರೆ. ಸುಧಾ ಮೂರ್ತಿಗೆ ಕರೆ ಮಾಡಿ ವಂಚಿಸಲು ಯತ್ನಿಸಿದ ಆರೋಪಿ ಪತ್ತೆಗಾಗಿ ಬಲೆಬೀಸಿದ್ದಾರೆ.

# ಜಿಎಸ್‌ಟಿ ಸುಧಾರಣೆ ಶ್ಲಾಘಿಸಿದ ಪ್ರಧಾನಿ ನರೇಂದ್ರ ಮೋದಿ

**ಗುವಾಹಟಿ:** ಪ್ರಧಾನಿ ನರೇಂದ್ರ ಮೋದಿ ಸೋಮವಾರ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳನ್ನು ಶ್ಲಾಘಿಸಿದ್ದು, ಇದರ ಪ್ರಯೋಜನಗಳು ಜನರ ಜೀವನದ ಮೇಲೆ ಗಮನಾರ್ಹ ಪರಿಣಾಮ ಬೀರುತ್ತವೆ ಎಂದು ಹೇಳಿದ್ದಾರೆ. ಸೋಮವಾರ ಅರುಣಾಚಲ ಪ್ರದೇಶದ ರಾಜಧಾನಿ ಇಟಾನಗರದಲ್ಲಿ 5,100 ಕೋಟಿ ರೂ.ಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಿಲಾನ್ಯಾಸ ನೆರವೇರಿಸಿ ಮಾತನಾಡಿದ ಪ್ರಧಾನಿ ಮೋದಿ, ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಈಶಾನ್ಯ ರಾಜ್ಯಗಳನ್ನು ನಿರ್ಲಕ್ಷಿಸಿದೆ ಎಂದು ಆರೋಪಿಸಿದರು.

"ಜಿಎಸ್ ಟಿ ಕಡಿತ ಮಾಡಿರುವುದರಿಂದ ಅಡುಗೆ ಸಾಮಗ್ರಿಗಳು, ಮಕ್ಕಳಿಗೆ ಶೈಕ್ಷಣಿಕ ಸಾಮಗ್ರಿಗಳು, ಪಾದರಕ್ಷೆಗಳು ಮತ್ತು ಬಟ್ಟೆಗಳಂತಹ ಅಗತ್ಯ ವಸ್ತುಗಳು ಹೆಚ್ಚು ಕೈಗೆಟುಕುವಂತಾಗಿವೆ. ಇದರಿಂದ ಕುಟುಂಬಗಳು ಈಗ ತಮ್ಮ ಮಾಸಿಕ ಬಜೆಟ್‌ನಲ್ಲಿ ಗಣನೀಯ ಉಳಿತಾಯ ಮಾಡಲಿವೆ" ಎಂದು ಹೇಳಿದರು.ವರ್ಷಗಳಿಂದ ಪ್ರಮುಖ ಸವಾಲುಗಳನ್ನು ಎದುರಿಸುತ್ತಿದ್ದರೂ, ತಮ್ಮ ಸರ್ಕಾರ ನಿರಂತರವಾಗಿ ಆದಾಯ ತೆರಿಗೆ ದರಗಳನ್ನು ಕಡಿಮೆ ಮಾಡಿದೆ ಎಂದು ಪ್ರಧಾನಿ ಹೇಳಿದರು.

# ನನ್ನನ್ನು ಉಚ್ಚಾಟಿಸುವ ಅಧಿಕಾರ ಯಾರಿಗೂ ಇಲ್ಲ

**ಬಾಗಲಕೋಟೆ:** ಪಂಚಮಸಾಲಿ ಪೀಠದಿಂದ ಉಚ್ಚಾಟನೆ ವಿಚಾರ ಸಂಬಂಧ ಬಸವ ಜಯಮೃತ್ಯುಂಜಯ ಸ್ವಾಮೀಜಿ ಕೂಡಲಸಂಗಮದಲ್ಲಿಂದು ತಮ್ಮ ಅಭಿಮಾನಿಗಳೊಂದಿಗೆ ಸಭೆ ನಡೆಸಿದರು.

ಸಭೆಯ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ನನ್ನನ್ನು ಉಚ್ಚಾಟನೆ ಮಾಡುವ ಅಧಿಕಾರ ಈ ಜಗತ್ತಿನಲ್ಲಿ ಯಾರಿಗೂ ಇಲ್ಲ. ಸೃಷ್ಟಿಕರ್ತ ಪರಮಾತ್ಮನಿಗೆ ಬಿಟ್ಟರೆ ಪರಮಾತ್ಮನ ಸ್ವರೂಪಿಯಾದ ಭಕ್ತರಿಗೆ ಮಾತ್ರ ಉಚ್ಚಾಟಿಸುವ ಅಧಿಕಾರ ಇದೆ. ನಾನು ಭಕ್ತರ ಹೃದಯದಲ್ಲಿ ಪೀಠ ಕಟ್ಟಿದ್ದೇನೆ. ಪೀಠಕ್ಕೂ ಟ್ರಸ್ಟ್‌ಗೂ ಯಾವುದೇ ಸಂಬಂಧ ಇಲ್ಲ. ಪೀಠವನ್ನು ಯಾವುದೇ ಕಲ್ಲು ಮಣ್ಣಿನಲ್ಲಿ ಕಟ್ಟಿಲ್ಲ. ಭಕ್ತರ ತೀರ್ಮಾನವೇ ಅಂತಿಮ" ಎಂದರು.

"ಸಮಾಜ ಬಾಂಧವರನ್ನು ಕೂಡಿಸುತ್ತೇನೆ. ಎಲ್ಲರೂ ಹೇಗೆ ಹೇಳುತ್ತಾರೋ ಹಾಗೆ ಮಾಡುತ್ತೇನೆ. ನಾನು ಕೂಡಲಸಂಗಮದಲ್ಲೇ ಇರುತ್ತೇನೆ. ಇಲ್ಲಿಂದಲೇ ಸಮಾಜ ಸಂಘಟನೆ ಮಾಡುತ್ತೇನೆ. ಕೂಡಲಸಂಗಮ ಮತ್ತು ದಾವಣಗೆರೆಯಲ್ಲಿ ಭಕ್ತರು ಕೊಟ್ಟ ಜಾಗೆ ಮಾತ್ರ ನನ್ನ ಹೆಸರಲ್ಲಿದೆ. ಮತ್ತೆಲ್ಲೂ ನನ್ನ ಹೆಸರಲ್ಲಿ ಜಾಗ ಇಲ್ಲ. ಒಂದು ವೇಳೆ ಜಾಗ ಮಾಡಬೇಕು ಅಂತ ಮನಸ್ಸು ಮಾಡಿದ್ರೆ ಜಿಲ್ಲೆಗೊಂದು ಅಲ್ಲ, ಪ್ರತಿ ಗ್ರಾಮಕ್ಕೊಂದು ಮಾಡುತ್ತಿದ್ದೆ" ಎಂದು ಹೇಳಿದರು.

"ಇತ್ತೀಚಿನ ಎಐ ತಂತ್ರಜ್ಞಾನ ಬಳಸಿ ವಿಡಿಯೋ ಕ್ರಿಯೇಟ್ ಮಾಡಿರಬಹುದು. ಅದಕ್ಕೆ ನಾವು ಹೆದರುವುದಿಲ್ಲ, ಕುಗ್ಗುವುದಿಲ್ಲ. ಈ ಘಟನೆಯಿಂದ



ನನ್ನ ಭಕ್ತರಿಗೆ ನೋವಾಗಿದೆ ಅಂತ ನನಗೆ ನೋವಾಗಿದೆ ವಿನಃ ಉಚ್ಚಾಟನೆ ಮಾಡಿದರು ಅಂತ ನಾನು ನೊಂದಿಲ್ಲ. ಇದೀಗ ಇನ್ನಷ್ಟು ಸ್ವತಂತ್ರನಾಗಿದ್ದೇನೆ ಎಂಬ ಖುಷಿ ಇದೆ. ಪರ್ಯಾಯ ಪೀಠ ಕಟ್ಟಿಲ್ಲ, ಇದೇ ಪೀಠ ಇರುತ್ತೆ. ಟ್ರಸ್ಟ್ ಮಾತ್ರ ಅವರಿಗೆ ಸಂಬಂಧಿಸಿದ್ದು, ಪೀಠ ಇದ್ದೇ ಇರುತ್ತದೆ. ಹೊಸ ಮಠ ಕಟ್ಟುವ ಬಗ್ಗೆ ಹಿರಿಯರ ಸಭೆ ಕರೆಯುತ್ತೇನೆ. ನಂತರ ರಾಜ್ಯ ಮಟ್ಟದ ಭಕ್ತರ ಸಭೆ ಕರೆದು, ಅವರು ಏನು ಹೇಳುತ್ತಾರೆ ಅದನ್ನು ಮಾಡುತ್ತೇನೆ. ಭಕ್ತರ ನಿರ್ಧಾರವೇ ಅಂತಿಮ" ಎಂದು ಸ್ಪಷ್ಟಪಡಿಸಿದರು.

ಕೂಡಲಸಂಗಮದಲ್ಲಿ ಪಂಚಮಸಾಲಿ ಪೀಠದಲ್ಲಿ ನಡೆದ ಸಭೆಯ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಮ್ಮ ಎಲ್ಲ ಧರ್ಮದರ್ಶಿಗಳು, ಸಮುದಾಯದವರು ಸೇರಿ ಒಂದು ತತ್ವ ಆದರ್ಶದ ಮೇಲೆ ಈ ಪೀಠವನ್ನು ಕಟ್ಟಲಾಗಿತ್ತು. ಇವತ್ತಿನವರೆಗೂ ನಾವು ಬಸವತತ್ವದ ಮೇಲೆ ನಡೆದುಕೊಂಡು ಬಂದಿದ್ದೆವು ಎಂದಿದ್ದರು.

# ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ

## ರಾಜ್ಯಾದ್ಯಂತ ಸುಸೂತ್ರವಾಗಿ ನಡೆದ ಮೊದಲ ದಿನದ ಸಮೀಕ್ಷೆ

**ಬೆಂಗಳೂರು:** ಪ್ರಬಲ ಜಾತಿಗಳ ವಿರೋಧಕ್ಕೆ ಮಣಿಯದೇ ರಾಜ್ಯ ಸರಕಾರವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸೋಮವಾರದಿಂದ ಆರಂಭಿಸಿದ್ದು, ಮೊದಲನೆ ದಿನ ರಾಜ್ಯದ ಬಹು ಭಾಗಗಳಲ್ಲಿ ಯಾವುದೇ ಗೊಂದಲಗಳಿಲ್ಲದೆ, ಸುಸೂತ್ರವಾಗಿ ಸಮೀಕ್ಷೆಯು ನಡೆದಿದೆ. ಆದರೆ ಕೆಲವು ಭಾಗಗಳಲ್ಲಿ ತಾಂತ್ರಿಕ ಸಮಸ್ಯೆಗಳು ಎದುರಾಗಿದೆ.

ಗಣತಿಯಲ್ಲಿ ಪಾಲ್ಗೊಳ್ಳುವ ಸಿಬ್ಬಂದಿಗಳಿಗೆ ಬ್ಯಾಗ್, ಗಣತಿ ಕಿಟ್, ಐಡಿ ಕಾರ್ಡ್, ಬಿಸಿಲು, ಮಳೆಗೆ ಆಸರೆಯಾಗಿ ಕ್ಯಾಪ್ ವಿತರಿಸಲಾಯಿತು. ನಂತರ ಗಣತಿದಾರರು ಮಾಹಿತಿಯನ್ನು ಕಲೆ ಹಾಕಲು ತೆರಳಿದರು. ಸಮೀಕ್ಷೆಯ ನಡೆಸುವ ತಂತ್ರಾಂಶದಲ್ಲಿ ಕಾಲನಿಗಳು, ಅಪಾರ್ಟ್‌ಮೆಂಟ್‌ಗಳು ಹಾಗೂ ವಾಸಸ್ಥಳಗಳನ್ನು ಗುರುತಿಸಲಾಗಿದ್ದು, ಗಣತಿದಾರರು ಪ್ರತಿ ಮನೆಗೆ ಭೇಟಿ ನೀಡಿ, ಸಮೀಕ್ಷಯನ್ನು ಪೂರ್ಣಗೊಳಿಸಿದ ಮನೆಗಳಿಗೆ ಯುಎಚ್‌ಐಡಿ ಸ್ಟಿಕ್ಕರ್ಗಳನ್ನು ಅಂಟಿಸಿದರು.

ಸಮೀಕ್ಷೆಯು 60 ಪ್ರಶ್ನಾವಳಿಗಳನ್ನು ಹೊಂದಿದ್ದು, ರಾಜ್ಯಾದ್ಯಂತ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಅಸಮಾನತೆಗಳನ್ನು ಹೋಗಲಾಡಿಸಲು, ಯೋಜನೆಗಳನ್ನು ರೂಪಿಸಲು ಸಮೀಕ್ಷೆಯು ಸಹಕರಿಯಾಗಲಿದೆ. ಹೀಗಾಗಿ ಸಾರ್ವಜನಿಕರು ಗಣತಿದಾರರಿಗೆ ಮಾಹಿತಿಯನ್ನು ನೀಡುತ್ತಿದ್ದಾರೆ ಎಂದು ಗಣತಿದಾರರು ಮಾಹಿತಿಯನ್ನು ಹಂಚಿಕೊಂಡಿದ್ದಾರೆ.

ಈ ಸಮೀಕ್ಷೆಯ ಮುನ್ನ ಬೆಸ್ಕಾಂ ವಿದ್ಯುತ್ ಮೀಟರ್ ರೀಡರ್‌ಗಳ ಆರ್.ಆರ್.ನಂ ಮೂಲಕ ಮನೆಮನೆಗಳಿಗೆ ಭೇಟಿ ನೀಡಿ ಜಿಯೋ ಟ್ಯಾಗಿಂಗ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದ್ದು, ಮನೆಗಳ ಪಟ್ಟಿಯ ಮಾಹಿತಿಯನ್ನು ಇಡಿಸಿಎಸ್ ಸರ್ವರ್ ಗಳಲ್ಲಿ ಅಪ್‌ಲೋಡ್ ಮಾಡಲಾಗಿದೆ. ಹೀಗಾಗಿ ಸಮೀಕ್ಷೆಯು ಸುಸೂತ್ರವಾಗಿ ನಡೆಯಿತು.

ರಾಜ್ಯದ ಕೆಲ ಭಾಗಗಳಲ್ಲಿ ಶಿಕ್ಷಕರಿಗೆ ಸಮಯಕ್ಕೆ ಸರಿಯಾಗಿ ಸಮೀಕ್ಷೆಯ ಕಿಟ್ ಸಿಕ್ಕಿಲ್ಲ. ಸಮೀಕ್ಷೆಯನ್ನು ನಡೆಸಲು ತರಬೇತಿಯೂ ನೀಡಿಲ್ಲ. ಸಮೀಕ್ಷೆಯನ್ನು ನಡೆಸಲು ಸಿದ್ಧಪಡಿಸಿರುವ ಮೊಬೈಲ್ ತಂತ್ರಾಂಶವೂ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಎಲ್ಲಿ ಹೋಗಿ ಸರ್ವೆ ಮಾಡಬೇಕು ಎಂಬ ಬಗ್ಗೆ ಮಾಹಿತಿಯನ್ನು ಕೊಟ್ಟಿಲ್ಲ ಎಂದು ಕೆಲ ಶಿಕ್ಷಕರು ಆರೋಪಿಸಿದ್ದಾರೆ. ಶಿವಮೊಗ್ಗದಲ್ಲಿ ಸಮೀಕ್ಷೆಯ ಕಿಟ್ ಪಡೆಯಲು ಶಿಕ್ಷಕರು ಬಂದಿದ್ದರು, ಆದರೆ ಸಮಯಕ್ಕೆ ಸರಿಯಾಗಿ ಸಮೀಕ್ಷೆಯ ಕಿಟ್ ಸಿಕ್ಕಿಲ್ಲ. ಈ ವೇಳೆ ಬಿಇಒ ಕಚೇರಿಗೆ ಆಗಮಿಸಿದ ಸಚಿವ ಮಧು ಬಂಗಾರಪ್ಪ, ಗೊಂದಲ ನಿವಾರಿಸಿ ಜಾತಿಗಣತಿಗೆ ಚಾಲನೆ ನೀಡಿದರು. ನಂತರ ಗಣತಿದಾರರಿಗೆ ಸಮೀಕ್ಷೆ ಕಿಟ್ ವಿತರಿಸಿದರು. ಬಳ್ಳಾರಿಯಲ್ಲೂ ಸರಕಾರದ ಮೊಬೈಲ್ ತಂತ್ರಾಂಶ ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಹೀಗಾಗಿ ಅಧಿಕೃತ ಚಾಲನೆಗಾಗಿ ಹಿಂದುಳಿದ ವರ್ಗಗಳ ಕಲ್ಯಾಣಧಿಕಾರಿಗಳು ಕಾದು ಕುಳಿತಿದ್ದ ಘಟನೆ ಕಂಡು ಬಂದಿತು. ಹಾವೇರಿಯಲ್ಲೂ ತಾಂತ್ರಿಕ ಸಮಸ್ಯೆ ಎದುರಾಗಿತ್ತು. ಮನೆ ಮೇಲೆ ಅಂಟಿಸಿರುವ ಯುಹೆಚ್‌ಐಡಿ ನಂಬರ್ ಅನ್ನ ಮೊಬೈಲ್ ತಂತ್ರಾಂಶದಲ್ಲಿ ಹಾಕಿದಾಗ ಅಡಚಣೆ ಉಂಟಾಗಿ ಶಿಕ್ಷಕರು ಪರದಾಡಿದರು.

ಚಿತ್ರದುರ್ಗದಲ್ಲಿ ಸಚಿವ ಡಿ. ಸುಧಾಕರ್ ಸಮೀಕ್ಷೆಗೆ ಚಾಲನೆ ನೀಡಿದ್ದು, ತಾಂತ್ರಿಕ ಸಮಸ್ಯೆ ಉಂಟಾಗಿ ಸಮೀಕ್ಷೆ ವಿಳಂಬವಾಯಿತು. ಶಿಕ್ಷಕರಿಗೆ ಬೀದಿಗಳು, ಮನೆಗಳನ್ನು ಹಂಚಿಕೆ ಮಾಡುವುದು ಸೇರಿದಂತೆ ಹಲವು ಸಮಸ್ಯೆ ಎದುರಾಗಿತ್ತು.

## ದೀಪವನ್ನು ಬೆಳಗಿಸುವ ಮೂಲಕ ಘಟಸ್ಥಾಪನೆ ಕಾರ್ಯಕ್ರಮಕ್ಕೆ ಚಾಲನೆ

# ಯಲ್ಲಮ್ಮನ ಸನ್ನಿಧಿಯಲ್ಲಿ ನವರಾತ್ರಿ ವೈಭವ

**ಉಗರಗೋಳ:** ಸಮೀಪದ ಯಲ್ಲಮ್ಮನಗುಡ್ಡದಲ್ಲಿ ಸೋಮವಾರ ರಂದು. ಒಂಭತ್ತು ದಿನಗಳ ಕಾಲ ವೈಭವದಿಂದ ನೆರವೇರಲಿರುವ ನವರಾತ್ರಿ ಉತ್ಸವಕ್ಕೆ ಯಲ್ಲಮ್ಮ ದೇವಿ ದೇವಸ್ಥಾನ ಗರ್ಭಗುಡಿ ಮುಂಭಾಗದಲ್ಲಿರುವ ದೀಪವನ್ನು ಬೆಳಗಿಸುವ ಮೂಲಕ ಘಟಸ್ಥಾಪನೆ ಕಾರ್ಯಕ್ರಮಕ್ಕೆ ಕಾಗ್ರೇಸ್ ಯುವ ಧುರೀಣ ಅಶ್ವತ್ ವೈದ್ಯ ಚಾಲನೆ ನೀಡಿದರು.

ರಾಜ್ಯ ಹಾಗೂ ಹೊರರಾಜ್ಯಗಳಿಂದ ಅಪಾರ ಸಂಖ್ಯೆಯಲ್ಲಿ ಬಂದಿದ್ದ ಭಕ್ತರು, ಮೊದಲ ದಿನವೇ ದೇವಿ ದರ್ಶನ ಪಡೆದರು. ಯಲ್ಲಮ್ಮ ದೇವಿ ದೇವಸ್ಥಾನ ಪ್ರಾಂಗಣದಲ್ಲಿ ಅಳವಡಿಸಿದ್ದ ದೀಪಗಳಿಗೆ ಎಣ್ಣೆ ಹಾಕಿ, 'ನಮ್ಮ ಬದುಕು ದೀಪದಂತೆ ಬೆಳಗುತ್ತಿರಲಿ' ಎಂದು ಪ್ರಾರ್ಥಿಸಿದರು.

ಘಟಸ್ಥಾಪನೆಗೆ ಚಾಲನೆ ನೀಡಿ ಮಾತನಾಡಿದ ಅಶ್ವತ್ ವೈದ್ಯ ಶ್ರೀಗುರುವಿನ ಕೃಪೆಯಿಂದ ಭಕ್ತರ ಬಾಳಿನ ಜ್ಯೋತಿ ನಿರಂತರವಾಗಿ ದೀಪದಂತೆ ಬೆಳಗಲಿ. ಕಾಲಕಾಲಕ್ಕೆ ಉತ್ತಮ ಮಳೆಯಾಗಲಿ. ಸರ್ವರ ಬಾಳು ಸಮೃದ್ಧವಾಗಲಿ. ದೇಶದ ಜನತೆಯ ಜೀವನ ಸುಖಮಯವಾಗಲಿ. ಸಕಲ ಜೀವರಾಶಿಗೆ ಒಳಿತಾಗಲಿ ಎಂದು ದೇವಿಯಲ್ಲಿ ಪ್ರಾರ್ಥಿಸಿರುವುದಾಗಿ ಹೇಳಿದರು.

ನವರಾತ್ರಿ ಅಂಗವಾಗಿ ಶ್ರೀಕ್ಷೇತ್ರ ಯಲ್ಲಮ್ಮನಗುಡ್ಡ ಭಕ್ತ ಸಾಗರದಿಂದ ತುಂಬಿತ್ತು, ಯಲ್ಲಮ್ಮನ ಗುಡ್ಡಕ್ಕೆ ಸಂಪರ್ಕ ಕಲ್ಪಸುವ



ಯಲ್ಲಮ್ಮ ದೇವಿ ದೇವಸ್ಥಾನ ಗರ್ಭಗುಡಿ ಮುಂಭಾಗದಲ್ಲಿ ದೀಪ ಬೆಳಗಿಸುವ ಮೂಲಕ ಘಟಸ್ಥಾಪನೆ ಕಾರ್ಯಕ್ರಮಕ್ಕೆ ಅಶ್ವತ್ ವೈದ್ಯ ಚಾಲನೆ ನೀಡಿದರು.

ಉಗರಗೋಳ, ಜೋಗಳಭಾವಿ ಸತ್ಯಮ್ಮ, ಮತ್ತು ಸವದತ್ತಿ ನೂಲಿನ ಗಿರಣಿ ಮಾರ್ಗಗಳಲ್ಲಿ ಕಾಲ್ನಡಿಗೆಯಿಂದ ಬರುವಂತ ಭಕ್ತರು ದೀಡ ನಮಸ್ಕಾರ ಮತ್ತು ಉಟಿಗೆ ಉಟ್ಟವರು, ಜೋಗತಿ ಜೋಗಪ್ಪಗಳ ಚೌಡಕಿ ನಿನಾದ ಮತ್ತು ವಾಹನಗಳ ಸಂಖ್ಯೆ ಹೆಚ್ಚಿತ್ತು.

ದೇವಸ್ಥಾನ ಪ್ರಾಧಿಕಾರದ ಕಾರ್ಯಧರ್ಶಿ ಅಶೋಕ ದುಡಗುಂಟಿ, ಸಿದ್ದನಗೌಡ ಗೂಡರಾಶಿ, ತಹಶೀಲ್ಧಾರ ಮಲ್ಲಿಕಾರ್ಜುನ ಹೆಗ್ಗನ್ನವರ, ದೇವಸ್ಥಾನ ಉಪಕಾರ್ಯಧರ್ಶಿ ನಾಗರತ್ನಾ ಚೋಳಿನ, ಆಶಾತಾಯಿ ಕೋರೆ, ಪ್ರೀತಿ ದೊಡವಾಡ, ವರ್ಷಾ ಗಾಂವಕರ. ಸಿಪಿಆಯ್ ಧರ್ಮಾಕರ ಧರ್ಮಟ್ಟಿ, , ಪಿಎಸ್‌ಆಯ್ ಕಲ್ಮೇಶ ಬನ್ನೂರ,ಲಕ್ಷ್ಮಣ ಗೌಡಿ,ಎಎಸ್‌ಆಯ್ ಬಿ ಆರ್ ಸಣ್ಣಮಾಳಗಿ, ಶಿವಾನಂದ ನೇಸರಗಿ, ಸಿ ಎನ್ ಕುಲಕರ್ಣಿ, ಬಿ ಎನ್ ಪ್ರಭುನವರ, ರೇಣುಕಾ ಶಿಂತ್ರಿ, ಬಿ ಎನ್ ಎಂ ಮುದಗೌಡ್ರ, ಅಲ್ಲಮಪ್ರಭು ಪ್ರಭುನವರ, ಆರ್ ಎಚ್ ಸವದತ್ತಿ, ಭೀಮಣ್ಣಾ ಬಾರ್ಕಿ, ಶಿವು ಮಂಗಳಾರ್ತಿ, ರೇಣಪ್ಪ ಮಂಗಳಾರ್ತಿ, ಗುರನಗೌಡ ರೇಣ್ಕಿಗೌಡ್ರ, ಮತ್ತು ದೇವಸ್ಥಾನ ಅರ್ಚಕರು, ಪಂಡಿತರು ಹಾಗೂ ದೇವಸ್ಥಾನ ಸಿಬ್ಬಂದಿ ಹಾಗೂ ಅಪಾರ ಭಕ್ತ ಸಮೂಹ ಇದ್ದರು.

## ಮಧ್ಯಂತರ ತಡೆ ಕುರಿತು ಇಂದು ಹೈಕೋರ್ಟ್‌ನಲ್ಲಿ ವಿಚಾರಣೆ


# ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಪ್ರಶ್ನಿಸಿ ಅರ್ಜಿ

**ಬೆಂಗಳೂರು:** ರಾಜ್ಯದಲ್ಲಿ ಸೋಮವಾರದಿಂದ (ಸೆಪ್ಟೆಂಬರ್ 22) ಆರಂಭವಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ ಸಮೀಕ್ಷೆಗೆ ತಡೆ ನೀಡುವಂತೆ ಕೋರಲಾಗಿರುವ ಮಧ್ಯಂತರ ಮನವಿಯ ಕುರಿತು ಮಂಗಳವಾರ ವಿಚಾರಣೆ ನಡೆಸುವುದಾಗಿ ಹೈಕೋರ್ಟ್ ತಿಳಿಸಿದೆ.

ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ ಸಮೀಕ್ಷೆ ನಡೆಸಲು 2025ರ ಆಗಸ್ಟ್ 13ರಂದು ಸರ್ಕಾರ ಹೊರಡಿಸಿರುವ ಆದೇಶ ಪ್ರಶ್ನಿಸಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ರಘುನಾಥ್, ಅಖಿಲ ಭಾರತ ವೀರಶೈವ ಮಹಾಸಭೆಯ ಬಿ.ಆರ್. ಉದಯಶಂಕರ್ ಸೇರಿ 9 ಮಂದಿ ಹಾಗೂ ಹಿರಿಯ ವಕೀಲ ಕೆ.ಎನ್. ಸುಬ್ಬಾರೆಡ್ಡಿ ಸೇರಿ ನಾಲ್ವರು ಸಲ್ಲಿಸಿರುವ ಮೂರು ಪ್ರತ್ಯೇಕ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಅರ್ಜಿದಾರರ ಪರ ಹಿರಿಯ ವಕೀಲರಾದ ಪ್ರಭುಲಿಂಗ ಕೆ.ನಾವದಗಿ, ಅಶೋಕ ಹಾರನಹಳ್ಳಿ, ಜಯಕುಮಾರ್ ಎಸ್. ಪಾಟೀಲ್, ವಿವೇಕ್ ರೆಡ್ಡಿ, ಎಸ್. ಶ್ರೀರಂಗ ಹಾಗೂ ಎಸ್.ಎಂ. ಚಂದ್ರಶೇಖರ್ ಅವರ ವಾದ ಆಲಿಸಿದ ನ್ಯಾಯಪೀಠ, ಅರ್ಜಿದಾರರ ವಾದದಲ್ಲಿ ಹುರುಳಿರುವಂತಿದೆ. ಅದಾಗ್ಯೂ, ಎಲ್ಲ ಅರ್ಜಿದಾರರೂ ತಮ್ಮ ಲಿಖಿತ ಸಾರಾಂಶ ಸಲ್ಲಿಸಲಿ ಎಂದು ಸೂಚಿಸಿ, ವಿಚಾರಣೆಯನ್ನು ಮಂಗಳವಾರಕ್ಕೆ ಮುಂದೂಡಿತು.

**ಅರ್ಜಿದಾರರ ವಾದವೇನು?**




ಇದಕ್ಕೂ ಮುನ್ನ ಅರ್ಜಿದಾರರ ಪರ ವಕೀಲರು ವಾದ ಮಂಡಿಸಿ, ಇದು ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಅಲ್ಲ. ಅದರ ಹೆಸರಿನಲ್ಲಿ ನಡೆಸಲಾಗುತ್ತಿರುವ ಜನರ ಜಾತಿಗಣತಿ. ಜನಗಣತಿ ನಡೆಸುವ ಅಧಿಕಾರ ರಾಜ್ಯ ಸರ್ಕಾರಕ್ಕಿಲ್ಲ. ಅದೇನಿದ್ದರೂ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಒಳಪಟ್ಟ ವಿಚಾರ. ರಾಜ್ಯದ ಜನರ ಸ್ಥಿತಿಗತಿ ಪರಿಶೀಲನೆ ಹಿಂದುಳಿದ ವರ್ಗಗಳ ಕರ್ತವ್ಯವಲ್ಲ. ಸರ್ಕಾರ ಸಮೀಕ್ಷೆಯ ಹೆಸರಿನಲ್ಲಿ ಹೊಸ ಜಾತಿಗಳನ್ನು ಸೃಷ್ಟಿ ಮಾಡುತ್ತಿದೆ ಎಂದು ಆಕ್ಷೇಪಿಸಿದರು. ರಾಜ್ಯ ಸರ್ಕಾರ ಜಾತಿ ಗಣತಿ ನಡೆಸುವುದಕ್ಕೆ ಸಂಬಂಧಿಸಿದಂತೆ ಯಾವುದೇ ವೈಜ್ಞಾನಿಕ ಅಧ್ಯಯನ ನಡೆಸಿಲ್ಲ. ರಾಜ್ಯ ಸರ್ಕಾರಕ್ಕೆ ಸೂಕ್ತ ಕಾರಣಗಳನ್ನು ನೀಡಿ ಯಾವುದಾದರು ಒಂದು ಜಾತಿಯನ್ನು ಹಿಂದುಳಿದ ವರ್ಗಗಳಿಗೆ ಸೇರ್ಪಡೆ ಮಾಡುವುದಕ್ಕೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾತ್ರ ಮಾಡಬಹುದಾಗಿದೆ. ಆದರೆ, ಬ್ರಾಹ್ಮಣ ಕ್ರಿಶ್ಚಿಯನ್, ಕುರುಬ ಕ್ರಿಶ್ಚಿಯನ್, ಒಕ್ಕಲಿಗ ಕ್ರಿಶ್ಚಿಯನ್ ಸೇರಿದಂತೆ ಹೊಸ ಜಾತಿಗಳನ್ನು ಸೇರ್ಪಡೆ ಮಾಡುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

**ಸರ್ಕಾರದ ವಾದವೇನು?**

ರಾಜ್ಯ ಸರ್ಕಾರದ ಪರ ವಿಡಿಯೊ ಕಾನ್ಫರೆನ್ಸ್ ಮುಖಾಂತರ ಹಾಜರಾಗಿದ್ದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ವಾದ ಮಂಡಿಸಿ, ಸರ್ಕಾರ ಕಳೆದ ಆಯವ್ಯಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸುವುದಕ್ಕೆ ಹಣ ಮೀಸಲಿರಿಸಿತ್ತು. ದಸರಾ ರಜೆಯ ಸಂದರ್ಭದಲ್ಲಿ ಸಮೀಕ್ಷೆ ನಡೆಸವುದಕ್ಕೆ ಆಶಾ ಕಾರ್ಯಕರ್ತರು, ಶಿಕ್ಷಕರು ಸೇರಿ ಸಾವಿರಾರು ಜನರನ್ನು ನಿಯೋಜಿಸಲಾಗಿದೆ. ಸಮೀಕ್ಷೆ ಸಂಬಂಧ ಆಗಸ್ಟ್ ತಿಂಗಳಲ್ಲೇ ಸರ್ಕಾರ ಅಧಿಸೂಚನೆ ಹೊರಡಿಸಿದ್ದರೂ, ಕೊನೇ ಘಳಿಗೆಯಲ್ಲಿ ಹೈಕೋರ್ಟ್‌ನಲ್ಲಿ ಪ್ರಶ್ನಿಸಲಾಗಿದೆ. ಸರ್ಕಾರದ ಕಲ್ಯಾಣ ಕಾರ್ಯಕ್ರಮ ಜಾರಿಗೆ ಅಂಕಿ-ಅಂಶ ಸಂಗ್ರಹಿಸಲಾಗುತ್ತಿದೆ. ಇದಕ್ಕೆ ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆ. ಸಾಮಾಜಿಕ ಹಾಗೂ ಆರ್ಥಿಕ ಹಿಂದುಳಿದಿರುವಿಕೆಯ ಅಂಕಿ-ಅಂಶ ಸಂಗ್ರಹಿಸುತ್ತೇವೆ. 2014ರ ಸಮೀಕ್ಷೆಯ ಅಂಕಿ-ಅಂಶಗಳನ್ನು ನವೀಕರಿಸುತ್ತಿದ್ದೇವೆ. ಸರ್ಕಾರ ಜನಗಣತಿ ಮಾಡುತ್ತಿಲ್ಲ. ಕೇವಲ ಸಮೀಕ್ಷೆ ನಡೆಸುತ್ತಿದೆ ಎಂದು ತಿಳಿಸಿದರಲ್ಲದೆ, ಇದೇ ರೀತಿಯ ಪ್ರಕರಣದಲ್ಲಿ ಹಿಂದೆಯೂ ಮಧ್ಯಂತರ ತಡೆ ನೀಡಿಲ್ಲ. ಆದ್ದರಿಂದ, ಯಾವುದೇ ಮಧ್ಯಂತರ ತಡೆ ನೀಡಬಾರದು ಎಂದು ಮನವಿ ಮಾಡಿದರು. ವಾದ ಪ್ರತಿವಾದ ಆಲಿಸಿದ ನ್ಯಾಯಪೀಠ, ಸಮೀಕ್ಷೆಗೆ ತಡೆ ನೀಡುವಂತೆ ಕೋರಲಾಗಿರುವ ಮಧ್ಯಂತರ ಮನವಿಯ ಕುರಿತು ಮಂಗಳವಾರ ವಿಚಾರಣೆ ನಡೆಸುವುದಾಗಿ ತಿಳಿಸಿ, ಅರ್ಜಿ ವಿಚಾರಣೆ ಮುಂದೂಡಿತು.

ಬೆಳಗಿನ ಸೂರ್ಯೋದಯ ಕನ್ನಡ ಪ್ರಾದೇಶಿಕ ದಿನಪತ್ರಿಕೆ
ಮಂಗಳವಾರ: 23-09-2025

# ಮೈಕ್ರೋ ಫೈನಾನ್ಸ್: ಸುಗ್ರೀವಾಜ್ಞೆಯಾದರೂ ತಪ್ಪದ ಕಿರುಕುಳ

## ಮನೆಗೆ ಬೀಗ ಹಾಕಿ ಗುಡಿ-ಗುಂಡಾರಗಳಲ್ಲಿ ಮಲಗುತ್ತಿರುವ ನೇಕಾರರು

**ವರದಿ ಮಲ್ಲಿಕಾರ್ಜುನ ತುಂಗಳ**

**ರಬಕವಿ–ಬನಹಟ್ಟಿ:** ಕಪ್ಪು ಹಣಕ್ಕೆ ಹಾಗು ಲೇವಾದೇವಿ ಮಾಫಿಯಾಗಳಿಂದ ಸಾಲ ಪಡೆದವರಿಗೆ ಉಂಟಾಗುವ ಕಿರುಕುಳ ತಪ್ಪಿಸುವ ವಿಧೇಯಕವನ್ನು ಕಳೆದ ಮಾರ್ಚ್ ತಿಂಗಳಲ್ಲಿ ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿದ್ದರೂ ರಬಕವಿ–ಬನಹಟ್ಟಿ ತಾಲೂಕಿನ ನೇಕಾರರಿಗೆ ಇದು ಅನ್ವಯವಿಲ್ಲವೆಂಬಂತೆ ಮೈಕ್ರೋ ಫೈನಾನ್ಸ್ ವ್ಯಕ್ತಿಗಳು ಈಗಲೂ ಕಿರುಕುಳ ಮುಂದುವರೆಸಿದ್ದಾರೆ.

ಹೌದು, ರಬಕವಿ–ಬನಹಟ್ಟಿ ತಾಲೂಕು ನೇಕಾರಿಕೆ ಜೀವನಮಟ್ಟ ಹೊಂದಿರುವ ಪ್ರದೇಶವಾಗಿರುವ ಕಾರಣ ಆರ್ಥಿಕವಾಗಿ ಅತ್ಯಂತ ಹಿಂದುಳಿದ ತಾಲೂಕಾಗಿದೆ. ಲಕ್ಷಾಂತರ ನೇಕಾರರು ಮೈಕ್ರೋ ಫೈನಾನ್ಸ್‌ನಲ್ಲಿ ಸಾಲ ಪಡೆದಿರುವದು ಸಾಮಾನ್ಯ. ಇದೀಗ ಕಿರುಕುಳದಿಂದ ಬೇಸತ್ತು ಹೋಗುವಲ್ಲಿ ಕಾರಣವಾಗಿದೆ.

**ಬೆಳ್ಳಂಬೆಳಿಗ್ಗೆ ಮನೆಗೆ:** ನಸುಕಿನ ಜಾವವೇ ನೇಕಾರ ಮನೆಗಳಿಗೆ ತೆರಳಿ ಬಡ್ಡಿ ಸಹಿತ ಅಸಲು ಈಗಲೇ ಬೇಕೆಂದು ಪೀಡಿಸುತ್ತ ನೇಕಾರರಿಗೆ ತೀವ್ರ ಸಂಕಷ್ಟ ತರುವಲ್ಲಿ ಕಾರಣವಾಗುತ್ತಿದ್ದಾರೆ. ಬನಹಟ್ಟಿಯ ಸದಾಶಿವ ಕಾಲನಿ, ಅಶೋಕ ಕಾಲನಿ, ನೀರಿನ ಟಾಕಿ ಸೇರಿದಂತೆ ಹಲವು ಪ್ರದೇಶಗಳಲ್ಲಿ ಅಷ್ಟಕಷ್ಟೇ ಬದುಕು ಕಟ್ಟಿಕೊಂಡಿರುವ ನೇಕಾರ ಸಮುದಾಯಕ್ಕಂತೂ ನುಂಗಲಾರದ ತುತ್ತಾಗಿದೆ.

> 'ಬಡಜನರ ರಕ್ತ ಹೀರುವ ಮೈಕ್ರೋ ಫೈನಾನ್ಸ್‌ಗಳ ಕಿರುಕುಳವಾದಲ್ಲಿ ತಕ್ಷಣೇ ಪೊಲೀಸ್ ಠಾಣೆ ಸಂಪರ್ಕಿಸಿ. ಸರ್ಕಾರ ಬೇರುಮಟ್ಟದಿಂದ ಇದನ್ನು ಕಿತ್ತು ಹಾಕಬೇಕು.
>
> **ಸಿದ್ದು ಸವದಿ,**
> **ಶಾಸಕರು ತೇರದಾಳ**

**ಮನೆ ಬಿಟ್ಟು ಹೋಗುತ್ತಿರುವ ನೇಕಾರರು:** ಮೈಕ್ರೋ ಫೈನಾನ್ಸ್‌ಗಳ ಕಿರುಕುಳದಿಂದ ಅಲ್ಲದೆ ಬೆಳಗಿನ ಜಾವವೇ ಮನೆಗೆ ಬರುತ್ತಿರುವದರಿಂದ ರಾತ್ರಿ ಹೊತ್ತು ಮನೆಗೆ ಕೀಲಿ ಹಾಕಿ ಮನೆಯಲ್ಲಿ ಮಲಗದೆ ಗುಡಿ–ಗುಂಡಾರಗಳಲ್ಲಿ ಮಲಗಿಗೊಂಡು ತಡವಾಗಿ ಮನೆ ಸೇರುವಲ್ಲಿ ಕಾರಣವಾಗುತ್ತಿದೆ.

ರಾಜ್ಯ ಸರ್ಕಾರದ ಸುಗ್ರೀವಾಜ್ಞೆಯಂತೆ ಮೈಕ್ರೋ ಫೈನಾನ್ಸ್‌ಗಳ ದಂಧೆ ಮಾಡುವವರನ್ನು ಬಗ್ಗು ಬಡಿಯಬಹುದಾಗಿತ್ತು. ಆದರೆ ಸುಗ್ರೀವಾಜ್ಞೆ ನಂತರ ಸಕಾರ ಸಂಪೂರ್ಣ ಕ್ರಮ ಕೈಗೊಳ್ಳುವಲ್ಲಿ ವಿಫಲಗೊಂಡಿದೆಯೇ ಎಂಬ ಅನುಮಾನ ಸುತ್ತು ಹಾಕುತ್ತಿದೆ.

ಈ ಮೊದಲು ಸಕಷ್ಟು ಬಡಜನರ ಪ್ರಾಣ ನಷ್ಟವಾಗಿದೆ. ಕಾನೂನನ್ನು ಕಟ್ಟುನಿಟ್ಟಾಗಿ ಪಾಲನೆಯೊಂದಿಗೆ ಸದ್ಯ ಆರ್ಥಿಕ ಸಂಕಷ್ಟದಲ್ಲಿರುವ ನೇಕಾರ ಕುಟುಂಬಗಳ ಬದುಕು ಸುಗಮಗೊಳಿಸುವಲ್ಲಿ ಸರ್ಕಾರ ಮಧ್ಯಸ್ಥಿಕೆವಹಿಸಬೇಕಿದೆ.

# ಸರ್ಕಾರಿ ಯೋಜನೆಗಳ ಸಾಲ ನೀಡಲು ವಿಳಂಬ ಮಾಡಬೇಡಿ




**ಕಾರವಾರ:** ಜಿಲ್ಲೆಯಲ್ಲಿ ವಿವಿಧ ಸರ್ಕಾರಿ ಯೋಜನೆಗಳಡಿಯಲ್ಲಿ ಬ್ಯಾಂಕ್ ಗಳಿಗೆ ಸಲ್ಲಿಕೆಯಾಗುವ ಸಾಲದ ಅರ್ಜಿಗಳನ್ನು ವಿಳಂಬಕ್ಕೆ ಆಸ್ಪದ ನೀಡದೇ ಶೀಘ್ರದಲ್ಲಿ ಸಲ ಮಂಜೂರು ಮಾಡುವಂತೆ ಎಲ್ಲಾ ಬ್ಯಾಂಕ್ ಗಳ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ನಿರ್ದೇಶನ ನೀಡಿದರು.

ಅವರು ಸೋಮವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಲೀಡ್ ಬ್ಯಾಂಕ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳಡಿಯಲ್ಲಿ ಸಂಬಂದಪಟ್ಟ ಇಲಾಖೆಗಳ ಮೂಲಕ ಬ್ಯಾಂಕ್ ಗಳಿಗೆ ಸಲ್ಲಿಕೆಯಾಗುವ ಅರ್ಜಿಗಳನ್ನು ವಿನಾ ಕಾರಣ ವಿಳಂಬ ಮಾಡದೇ ಮತ್ತು ದಾಖಲೆಗಳ ಕೊರತೆಯಿಂದ ಅರ್ಜಿಯನ್ನು ತಿರಸ್ಕರಿಸದೇ, ಅಗತ್ಯವಿರುವ ಹೆಚ್ಚುವರಿ ದಾಖಲೆಗಳನ್ನು ಫಲಾನುಭವಿಗಳಿಂದ ಪಡೆದು, ಸಾಲವನ್ನು ಮಂಜೂರು ಮಾಡುವ ಮೂಲಕ ಸರ್ಕಾರಿ ಯೋಜನೆಯ ನೆರವನ್ನು ಒದಗಿಸುವಂತೆ ಸೂಚನೆ ನೀಡಿದ ಅವರು, ಫಲಾನುಭವಿಗಳಿಂದ ಬ್ಯಾಂಕ್ ಗಳಿಗೆ ಸಲ್ಲಿಕೆಯಾದ ಅರ್ಜಿಗಳ ಪ್ರಗತಿ ಕುರಿತು ಸಂಬಂದಪಟ್ಟ ಇಲಾಖೆಗಳ ಅಧಿಕಾರಿಗಳು ನಿರಂತರವಾಗಿ ಪರಿಶೀಲಿಸಬೇಕು ಎಂದರು.

ಪ್ರಧಾನ ಮಂತ್ರಿ ಜೀವನ ಜ್ಯೋತಿ ಭಿಮಾ ಯೋಜನೆ ಮತ್ತು ಪ್ರಧಾನ ಮಂತ್ರಿ ಭಿಮಾ ಸುರಕ್ಷಾ ಯೋಜನೆಯ ಬಗ್ಗೆ ಗ್ರಾಹಕರಲ್ಲಿ ಹೆಚ್ಚಿನ ಅರಿವು ಮೂಡಿಸುವುದರ ಜೊತೆಗೆ ಇದರ ನೋಂದಣಿ ಸಂಖ್ಯೆಯನ್ನು ಹೆಚ್ಚಿಸಲು ಬ್ಯಾಂಕ್‌ಗಳಿಗೆ ಸೂಚಿಸಿರು.

ಎಲ್ಲಾ ಬ್ಯಾಂಕ್ ಗಳು ಸಾಲ ಮೇಳ ಆಯೋಜಿಸುವ ಮೂಲಕ ಸಾರ್ವಜನಿಕರಿಗೆ ಬ್ಯಾಂಕ್ ಗಳಲ್ಲಿರುವ ವಿವಿಧ ಯೋಜನೆಗಳ ಬಗ್ಗೆ ಮಾಹಿತಿ ನೀಡಬೇಕು, ಶೈಕ್ಷಣಿಕ ಮತ್ತು ವಸತಿ ವಲಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಸಾಲ ವಿತರಿಸಲು ಕ್ರಮ ಕೈಗೊಳ್ಳಬೇಕು. ಕ್ರೆಡಿಟ್ ಹಿಸ್ಟರಿ ಇಲ್ಲ ಎಂದು ಸಾಲದ ಅರ್ಜಿಗಳನ್ನು ತಿರಸ್ಕರಿಸಬಾರದು , ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆರ್ಥಿಕ ಸಾಕ್ಷರತಾ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಗ್ರಾಮೀಣ ಜನತೆಗೆ ಬ್ಯಾಂಕಿಂಗ್ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಪಿಎಂ ಜನಧನ ಯೋಜನೆಯಡಿ ಬ್ಯಾಂಕ್ ಖಾತೆಗಳಿಗೆ ಆಧಾರ್ ಸಿಡಿಂಗ್ ಕಾರ್ಯದಲ್ಲಿ ನಿಗಧಿತ ಗುರಿ ಸಾಧಿಸುವಂತೆ ಹಾಗೂ ಸರ್ಕಾರದ ವಿವಿಧ ಯೋಜನೆಗಳಾದ ಪಿಎಂ ಸ್ವನಿಧಿ, ಪಿಎಂ ಉದ್ಯೋಗ ಸೃಜನಾ ಯೋಜನೆ (ಪಿಎಂಇಜಿಪಿ), ಪಿಎಂಎಫ್ಎಂಇ, ಯೋಜನೆಗಳ ಬಗ್ಗೆ ಜನರಲ್ಲಿ ಹೆಚ್ಚಿನ ಅರಿವು ಮೂಡಿಸುವ ಮೂಲಕ ಸರ್ಕಾರದ ಯೋಜನೆಗಳ ಸೌಲಭ್ಯ ಅರ್ಹರಿಗೆ ತಲುಪಿಸುವ ಕಾರ್ಯ ಮಾಡಬೇಕು ಎಂದರು. ಸಭೆಯಲ್ಲಿ ಆರ್.ಬಿ.ಐ ಪ್ರತಿನಿಧಿ ಮಣಿರಾಜ್, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಕರೀಂ ಅಸದಿ, ನಬಾರ್ಡ್ ಡಿಡಿಎಂ ಸುಶೀಲ್ ನಾಯ್ಕ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಜಪ್ಪ, ವಿವಿಧ ಬ್ಯಾಂಕ್‌ಗಳ ವ್ಯವಸ್ಥಾಪಕರು ಹಾಗೂ ಜಿಲ್ಲಾ ಮಟ್ಟದಇಲಾಖೆಯ ಅಧಿಕಾರಿಗಳು ಇದ್ದರು.

# ಕ್ಷಯರೋಗ ನಿರ್ಮೂಲನೆಗೆ ಕೈ ಜೋಡಿಸಿ: ಇಟ್ನಾಳ್

**ಕೊಪ್ಪಳ:** ಜಿಲ್ಲೆಯ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ಸ್ವ ಇಚ್ಛೆಯಿಂದ ಜಿಲ್ಲಾ ಕ್ಷಯರೋಗ ನಿರ್ಮೂಲನ ಅಧಿಕಾರಿಗಳು, ಕೊಪ್ಪಳರವರ ಸಹಯೋಗದೊಂದಿಗೆ ಚಿಕಿತ್ಸೆಯನ್ನು ಪಡೆಯುತ್ತಿರುವ ಕ್ಷಯರೋಗಿಗಳನ್ನು 6 ತಿಂಗಳ ಕಾಲ ಪೌಷ್ಠಿಕ ಆಹಾರವನ್ನು ನೀಡುವ ಮೂಲಕ ದತ್ತು ಪಡೆದು ನಿಕ್ಷಯ್ ಮಿತ್ರರಾಗಿ ಕ್ಷಯರೋಗಿಗಳ ಮರಣ ಪ್ರಮಾಣ ಹಾಗೂ ಅನಾರೋಗ್ಯದ ಪ್ರಮಾಣವನ್ನು ಕಡಿಮೆಗೊಳಿಸುವ ಮೂಲಕ ಕೊಪ್ಪಳ ಜಿಲ್ಲೆಯನ್ನು ಕ್ಷಯಮುಕ್ತ ಜಿಲ್ಲೆಯನ್ನಾಗಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿರುತ್ತದೆ. ಈ ನಿಟ್ಟಿನಲ್ಲಿ ನಿಕ್ಷಯ್ ಮಿತ್ರರಾಗಿ ತಮ್ಮ ಸಹಾಯ ಮತ್ತು ಸಹಕಾರವನ್ನು ಕೋರುತ್ತಾ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮಕ್ಕೆ ಕೈ ಜೋಡಿಸುವಂತೆ ಜಿಲ್ಲಾಧಿಕಾರಿ ಸುರೇಶ ಬಿ.ಇಟ್ನಾಳ್ ಅವರು ಮನವಿ ಮಾಡಿದರು.



ಶನಿವಾರದಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕ್ಷಯ ರೋಗ ನಿರ್ಮೂಲನಾ ಅಧಿಕಾರಿಗಳ ಕಾರ್ಯಾಲಯದಿಂದ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮದ ಪ್ರಧಾನಮಂತ್ರಿ ಕ್ಷಯಮುಕ್ತ ಭಾರತ ಅಭಿಯಾನದಡಿಯಲ್ಲಿ ನಿಕ್ಷಯ್ ಮಿತ್ರ ಕಾರ್ಯಕ್ರಮ ಹಾಗೂ ಎನ್.ಟಿ.ಇ.ಪಿ. ಕಾರ್ಯಕ್ರಮದ ಮತ್ತೊಂದು ಮಹತ್ವಕಾಂಕ್ಷೆಯ ಯೋಜನೆಯಾದ ಸ್ವಸ್ಥ ನಾರಿ ಸಶಕ್ತ ಪರಿವಾರ ಆಂದೋಲನದ ಕುರಿತು ಅವರು ಮಾತನಾಡಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನ ಅಧಿಕಾರಿ ಡಾ.ಶಶಿಧರ ಆಲೂರು ಅವರು ಮಾತನಾಡಿ, ಸ್ವಸ್ಥ ನಾರಿ ಸಶಕ್ತ ಪರಿವಾರ ಆಂದೋಲನವು ಜಿಲ್ಲೆಯಲ್ಲಿ ಸೆ.17 ರಿಂದ ಆರಂಭವಾಗಿದ್ದು ಅಕ್ಟೋಬರ್ 2 ರವರೆಗೆ ನಡೆಯಲಿದ್ದು, 15 ದಿನಗಳ ಈ ಅಭಿಯಾನದಲ್ಲಿ ಸಾಂಕ್ರಾಮಿಕ ಮತ್ತು ಅಸಾಂಕ್ರಾಮಿಕ ರೋಗಗಳ ತಪಾಸಣೆ ಮತ್ತು ರೋಗ ಪತ್ತೆ ಮಾಡುವ ಉದ್ದೇಶವಾಗಿರುತ್ತದೆ. ಮತ್ತು ಎನ್.ಟಿ.ಇ.ಪಿ. ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿಕ್ಷಯ್ ಮಿತ್ರರನ್ನು ನೋಂದಾಯಿಸಲು ಕಾರ್ಯಚಟುವಟಿಕೆಗಳನ್ನು ಹಾಗೂ ಸ್ಥಳೀಯ ಜನ ಪ್ರತಿನಿಧಿಗಳನ್ನು ಬಳಸಿಕೊಳ್ಳುವ ಮೂಲಕ ಹೊಸದಾಗಿ ನಿಕ್ಷಯ್ ಮಿತ್ರರನ್ನು ಗುರುತಿಸಿ ನೋಂದಾಯಿಸುವುದು, ಒಪ್ಪಿಗೆ ನೀಡಿದ ಎಲ್ಲಾ ಕ್ಷಯರೋಗಿಗಳಿಗೆ ಕನಿಷ್ಠ ಒಂದು ಆಹಾರ ಕಿಟ್‌ಗಳನ್ನು ಪಡೆಯಲು ನಿಕ್ಷಯ್ ಮಿತ್ರರೊಂದಿಗೆ ಸಂಪರ್ಕ ಕಲ್ಪಿಸಲಾಗುವುದು. ಆಂದೋಲನವು ದುರ್ಬಲ ಗುಂಪಿನ ಮಹಿಳೆಯರಲ್ಲಿ ಅನಿಯಂತ್ರಿತ ಮಧುಮೇಹಿ, 60 ವರ್ಷಕ್ಕಿಂತ ಮೇಲ್ಪಟ್ಟ ವೃದ್ಧ, ಮೂತ್ರಪಿಂಡ ಕಾಯಿಲೆಯಿಂದ ಬಳಲುತ್ತಿರುವ Immunosuppressants Anti TNF therapy ಪಡೆಯುತ್ತಿರುವ ಮಹಿಳೆಯರು ಇರುತ್ತಾರೆ. ಇದರ ಜೊತೆಗೆ ಇತರೆ ಅಪಾಯದ ಗುಂಪುಗಳಲ್ಲಿ ಊಖಗಿ ಹೊಂದಿದ ಮಹಿಳೆಯರು, ಹಳೆಯ ಮಹಿಳಾ ಕ್ಷಯರೋಗಿಗಳು, ಕ್ಷಯರೋಗಿಗಳ ಸಮೀಪ ಮಹಿಳಾ ಸಂಪರ್ಕಿತರು, ಮಹಿಳಾ ಧೂಮಪಾನಿಗಳು ಹಾಗೂ ಮದ್ಯವ್ಯಸನಿಗಳು, ಬಿ.ಎಂ.ಐ. 18.5 ಕ್ಕಿಂತ ದೇಹದ ತೂಕ ಕಡಿಮೆ ಇರುವವರು ಹಾಗೂ ಗಣಿಗಾರಿಕೆ ಮತ್ತು ಜಲ್ಲಿಕಟ್ಟುವ ಕೆಲಸದಲ್ಲಿರುವ ಮಹಿಳೆಯರು ಈ ದುರ್ಬಲ ಗುಂಪಿಗೆ ಸೇರಿದವರಾಗಿರುತ್ತಾರೆ ಎಂದು ಕಾರ್ಯಕ್ರಮದ ಕುರಿತು ಮಾಹಿತಿ ನೀಡಿದರು. ಇದೇ ಸಂದರ್ಭ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಹಾಗೂ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳಾದ ರಾಮ್ ಎಲ್. ಅರಸಿದ್ದಿ ಅವರು ನಿಕ್ಷಯ್ ಮಿತ್ರರಾಗಿ ತಲಾ ಇಬ್ಬರಂತೆ ಒಟ್ಟು 6 ಕ್ಷಯರೋಗಿಗಳನ್ನು ಅವರ ಚಿಕಿತ್ಸೆ ಮುಗಿಯುವವರೆಗೆ 6 ತಿಂಗಳ ಕಾಲ ದತ್ತು ಪಡೆದು, ಅವರಿಗೆ ಪೌಷ್ಠಿಕ ಆಹಾರದ ಕಿಟ್ ಅನ್ನು ವಿತರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಲಿಂಗರಾಜು ಟಿ., ಹಾಗೂ ಎಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನ 61ನೇ ವರ್ಷದ ಮಹಾಸಭೆ



**ಮುದ್ದೆಬಿಹಾಳ:** ಪಟ್ಟಣದ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನ 61 ನೇ ವರ್ಷದ ವಾರ್ಷಿಕ ಮಹಾಸಭೆ ಜರುಗಿತು.

ಶುಕ್ರವಾರರಂದು ಬ್ಯಾಂಕ್ ಸಬಾಭವನದಲ್ಲಿ ಜರುಗಿದ ಈ ಸಭೆಯಲ್ಲಿ ಪಿಎಲ್‌ಡಿ ಬ್ಯಾಂಕ್ ಅದ್ಯಕ್ಷರಾದ ಬಿ.ಕೆ. ಬಿರಾದಾರ ಅವರು ಮಾತನಾಡಿ ಸಾಲವಸೂಲಾತಿಯಲ್ಲಿ ಮುದ್ದೇಬಿಹಾಳ ತಾಲೂಕ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಜಿಲ್ಲೆಗೆ ಹಲವಾರು ಬಾರಿ ಪ್ರಥಮ ಸ್ಥಾನ ಪಡೆಯುವದರೊಂದಿಗೆ ಮುನ್ನಡೆಯುತ್ತಿದೆ ರಾಜ್ಯದಲ್ಲಿಯೇ ಸಾಲ ವಸೂಲಾತಿಯಲ್ಲಿ 5 ನೇ ಸ್ಥಾನವನ್ನು ಪಡೆದಿದ್ದೇವೆ ಎಂದರು.ಕೃಷಿ ಚಟುವಟಿಕೆ ಹಾಗೂ ಕೃಷಿ ವಾಹನ ಸಾಲ, ಜಮೀನಿನ ಒಡ್ಡಿನ ಲೇವಲಿಂಗ್ ಸಾಲ ನೀಡಿದ್ದೇವೆ ಹಾಗೂ ಸಂಘದ ಸದಸ್ಯರಿಗೆ ಶೇ 3 ರಷ್ಟು ಬಡ್ಡಿ ದರದಲ್ಲಿ ಸಾಲವನ್ನು ನೀಡಲಾಗುತ್ತಿದೆ ಸಂಘದಲ್ಲಿ 4351 ಸದಸ್ಯರಿದ್ದು ಕಳೆದ 3 ವರ್ಷಗಳಲ್ಲಿ ಅತೀ ಹೆಚ್ಚು ಸಾಲವನ್ನು ರೈತರಿಗೆ ನೀಡಲಾಗಿದೆ ಕೃಷಿ ಬ್ಯಾಂಕ್ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಹಾಗೂ ಶಾಸಕ ಸಿ.ಎಸ್. ನಾಡಗೌಡ ಅವರ ಸಹಾಯ ಸಹಕಾರ ಮರೆಯಲಾಗದು ಎಂದರು. ವ್ಯವಸ್ಥಾಪಕ ಎ.ಜಿ. ಲಮಾಣಿ ವರದಿವಾಚಿಸಿದರು.

ಈ ಸಮಯದಲ್ಲಿ ಉಪಾದ್ಯಕ್ಷ ಜಿ.ಬಿ. ಕಮರಿ, ನಿರ್ದೇಶಕರಾದ ಡಾ. ಎನ್.ಎಸ್. ದೇಶಮುಖ, ಎಂ.ಎಸ್. ಮೇಟಿ, ಎಚ್.ಎಂ. ಮಠ, ಎನ್.ಎಸ್. ಬಪ್ಪರಗಿ, ಬಿ.ಎಸ್. ಬಗಲಿ, ಎಸ್.ಎಸ್. ಸೋಮನಾಳ, ಬಿ.ಜಿ. ನರೋಡಿ, ಎ.ಬಿ. ನಡಹಳ್ಳಿ, ಎಲ್.ಜಿ. ಪೂಜಾರಿ, ಆರ್.ಎಚ್. ಬಿರಾದಾರ, ಆರ್.ಜಿ. ನಾಯಕ, ಸಿ.ಎಸ್. ಭಂಗಿ, ಡಿ.ಎಸ್. ಸುಲ್ತಾನಪೂರ ಸಿಬ್ಬಂದಿಗಳಾದ ಸುಮಂಗಲಾ ಲಮಾಣಿ, ಹಾಗೂ ಸಂಘದ ಸದಸ್ಯರು ಉಪಸ್ತಿತರಿದ್ದರು.

# ಅರ್ಹರು ಮತದಾರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಿ



**ರಬಕವಿ–ಬನಹಟ್ಟಿ:** ಮತದಾನ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯನ್ನು ಚುನಾವಣಾ ಆಯೋಗ ಮಾಡುತ್ತಿದ್ದು ಯಾವೊಬ್ಬ ಅರ್ಹ ಪ್ರಜೆಯು ಮತದಾರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕಾಗಿದೆ. ಆ ಒಂದು ವಿಶ್ವಾಸಾರ್ಹ ಕಾರ್ಯವನ್ನು ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಯಶಸ್ವಿಗೊಳಿಸಬೇಕು ಎಂದು ಮತದಾರರ ನೋಂದಣಾಧಿಕಾರಿ ವಿರುಪಾಕ್ಷ ಬಾಣಕಾರ ಹೇಳಿದರು.

ಬನಹಟ್ಟಿಯ ಎಸ್ ಆರ್ ಎ ಪ್ರೌಢಶಾಲೆಯಲ್ಲಿ ನಡೆದ ರಬಕವಿ–ಬನಹಟ್ಟಿ ಭಾಗದ ಮತಗಟ್ಟೆ ಮಟ್ಟದ ಅಧಿಕಾರಿಗಳ ವಿಶೇಷ ಸಮಗ್ರ ಪರಿಷ್ಕರಣೆಯ ತರಬೇತಿಯನ್ನು ಉದ್ಘಾಟಿಸಿ ಮಾತನಾಡಿದರು. ಮತಗಟ್ಟೆ ಮಟ್ಟದ ಅಧಿಕಾರಿಗಳು ಪ್ರತಿ ಮನೆಗೆ ಭೇಟಿ ನೀಡುತ್ತಾರೆ. ಅಸ್ತಿತ್ವದಲ್ಲಿರುವ ಮತದಾರರಿಗೆ ಪೂರ್ವ ಮುದ್ರಿತ ಗಣತಿಯ ನಮೂನೆಗಳನ್ನು ದ್ವಿಪ್ರತಿಯಲ್ಲಿ ನೀಡುತ್ತಾರೆ. ನಮೂನೆಗಳನ್ನು ಭರ್ತಿ ಮಾಡಿ ಸಂಗ್ರಹಿಸುತ್ತಾರೆ ಎಂದು ಹೇಳಿದರು.

ತರಬೇತಿದಾರರಾಗಿ ಮಾತನಾಡಿದ ಶ್ರೀಶೈಲ ಬುರ್ಲಿ, ಮತಗಟ್ಟೆ ಮಟ್ಟದ ಅಧಿಕಾರಿಗಳು ಇಸಿಐ ನೆಟ್ ಮೊಬೈಲ್ ಅಪ್ಲಿಕೇಶನ್ ಮೂಲಕ ಸಂಗ್ರಹಿಸಿರುವ ಮತದಾರರ ಮಾಹಿತಿಯನ್ನು ಹಾಗೂ ದಾಖಲೆಗಳನ್ನು ಅಪ್ಲೋಡ್ ಮಾಡುತ್ತಾರೆ. ಎಲ್ಲಾ ಅರ್ಹ ಮತದಾರರನ್ನು ಮತದಾರ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲು ತುಂಬಾ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಇನ್ನೋರ್ವ ತರಬೇತಿದಾರ ಎಚ್. ವೈ. ಆಲಮೇಲ ಮಾತನಾಡಿ ಮತದಾರರ ಮನೆ ಭೇಟಿ ನೀಡುವ ಸಂದರ್ಭದಲ್ಲಿ ಸೌಜನ್ಯದಿಂದ ಹಾಗೂ ವಿನಮ್ರತೆಯಿಂದ ಮಾತನಾಡಿ ಮಾಹಿತಿ ಸಂಗ್ರಹಿಸಬೇಕು. ಯಾವುದೇ ಮನೆಯು ಬಿಟ್ಟು ಹೋಗದಂತೆ ನಿಗಾ ವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ಚುನಾವಣಾ ವಿಭಾಗದ ಸಿಬ್ಬಂದಿ ರವಿ ಹುಲ್ಲೆನ್ನವರ, ಗ್ರಾಮ ಆಡಳಿತ ಅಧಿಕಾರಿ ಸದಾಶಿವ ಕುಂಬಾರ, ರಾಜೇಂದ್ರ ಮೇಲಕೇರಿ, ತರಬೇತಿದಾರ ಎಂ. ಬಿ. ಶೆಟ್ಟಿ ಮೊದಲಾದವರು ಇದ್ದರು.

# ಸೆ.26 ರಂದು ಉದ್ಯೋಗ ಮೇಳ

**ಬೆಳಗಾವಿ:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬೆಳಗಾವಿ ಇವರ ವತಿಯಿಂದ ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಯಾವುದೇ ಪದವಿ ಮತ್ತು ಯಾವುದೇ ಸ್ನಾತಕೋತ್ತರ ಪದವಿ ಹೊಂದಿರುವ ಅಭ್ಯರ್ಥಿಗಳಿಗಾಗಿ ಸೆ.26, 2025 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ಹುಕ್ಕೇರಿ ತಾಲೂಕಿನ ಬೆಲ್ಲದ ಬಾಗೇವಾಡಿಯಲ್ಲಿರುವ ವಿ.ಎಮ್.ಕತ್ತಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಟ್ಸ್ ಕ್ಯಾಂಪಸ್ ಇಲ್ಲಿ “ಬೃಹತ ಉದ್ಯೋಗ ಮೇಳ” ವನ್ನು ಆಯೋಜಿಸಲಾಗಿದೆ. ಆಸಕ್ತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು https://forms.gle/WZMa7Cfs9bzacznD8 ವೆಬ್‌ಸೈಟನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 7090804026, 9739433791, 8147024218, 9964896226, 7975856566 ಗಳಿಗೆ ಸಂಪರ್ಕಿಸಬಹುದಾಗಿದೆ.

# ಸರ್ಕಾರಿ ಕಾಲೇಜಿನಲ್ಲಿ ಕಂಪ್ಯೂಟರ್ ಲ್ಯಾಬ್ ಉದ್ಘಾಟನೆ



**ಕಾರವಾರ:** ಕಾರವಾರದ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜಿನಲ್ಲಿ, ಕರ್ನಾಟಕ ಬ್ಯಾಂಕಿನ ಸಿಎಸ್‌ಆರ್ ಉಪಕ್ರಮದಡಿಯಲ್ಲಿ ಉದಾರವಾಗಿ ದೇಣಿಗೆ ನೀಡಿ ಹೊಸದಾಗಿ ಸ್ಥಾಪಿಸಲಾದ ಕಂಪ್ಯೂಟರ್ ಲ್ಯಾಬ್‌ನ್ನು ಕರ್ನಾಟಕ ಬ್ಯಾಂಕಿನ ಸಹಾಯಕ ಪ್ರಧಾನ ವ್ಯವಸ್ಥಾಪಕ ವಾದಿರಾಜ್ ಭಟ್ ಶುಕ್ರವಾರ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು , ಬಲವಾದ ಸಮುದಾಯಗಳನ್ನು ನಿರ್ಮಿಸುವಲ್ಲಿ ಮತ್ತು ಶಿಕ್ಷಣವನ್ನು ಬೆಂಬಲಿಸುವಲ್ಲಿ ಸಿಎಸ್‌ಆರ್ ಚಟುವಟಿಕೆಗಳ ಮಹತ್ವದ ಬಗ್ಗೆ ಹಾಗೂ 1924 ರಲ್ಲಿ ಸ್ಥಾಪನೆಯಾದ ಕರ್ನಾಟಕ ಬ್ಯಾಂಕಿನ ಬಗ್ಗೆ ವಿವರಿಸಿ, ಇದು 100 ವರ್ಷಗಳಿಗೂ ಹೆಚ್ಚು ಕಾಲ ಸಿಎಸ್‌ಆರ್ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಸಂಪ್ರದಾಯವನ್ನು ಹೊಂದಿದೆ. ಬ್ಯಾಂಕ್ ಆರ್ಥಿಕವಾಗಿ ಬಲಿಷ್ಠವಾಗಿದೆ. ಈ ಎಲ್ಲಾ ವರ್ಷಗಳಲ್ಲಿ ಉತ್ತಮ ಲಾಭ ಗಳಿಸುವ ಹೆಗ್ಗಳಿಕೆಯನ್ನು ಹೊಂದಿದೆ. ಇದು 19.75% ನಷ್ಟು ಬಂಡವಾಳದ ಸಮರ್ಪಕ ಅನುಪಾತ(CAR)ದೊಂದಿಗೆ ಸ್ಥಿರವಾಗಿದೆ ಮತ್ತು ರೂ.180000 ಕೋಟಿಗಳಿಗಿಂತ ಹೆಚ್ಚಿನ ಬಿಟಿಒ ಹೊಂದಿದೆ. ಕಾಲೇಜಿಗೆ ಕಂಪ್ಯೂಟರ್‌ಗಳನ್ನು ಒದಗಿಸುವ ಮೂಲಕ ಸಿಎಸ್‌ಆರ್ ಚಟುವಟಿಕೆಯ ಭಾಗವಾಗಲು ಸಂತಸ ವ್ಯಕ್ತಪಡಿಸಿದರು.

ಬಿಬಿಎ ವಿಭಾಗದ ಮುಖ್ಯಸ್ಥ ಮಹಮ್ಮದ್ ಫಯಾಝ್ ಮಾತನಾಡಿ, ಶಿಕ್ಷಣ ಸಂಸ್ಥೆಗಳನ್ನು ಉನ್ನತೀಕರಿಸುವಲ್ಲಿ ಸಿಎಸ್‌ಆರ್ ಕಾರ್ಯಕ್ರಮಗಳ ಮಹತ್ವವನ್ನು ಮತ್ತು ವಿಶೇಷವಾಗಿ ಗ್ರಾಮೀಣ ಮತ್ತು ಹಿಂದುಳಿದ ಹಿನ್ನೆಲೆಯ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಲ್ಯಾಬ್‌ನ ದೀರ್ಘಕಾಲೀನ ಪ್ರಯೋಜನಗಳನ್ನು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಪ್ರಾಂಶುಪಾಲೆ ಗೀತಾ ಎಸ್. ವಾಲಿಕರ್ ಮಾತನಾಡಿ, ಶಿಕ್ಷಣದ ಉದ್ದೇಶಕ್ಕಾಗಿ ಕರ್ನಾಟಕ ಬ್ಯಾಂಕ್ ನೀಡಿದ ಉದಾರ ಕೊಡುಗೆಗಾಗಿ ಕೃತಜ್ಞತೆಯನ್ನು ವ್ಯಕ್ತಪಡಿಸಿದರು ಮತ್ತು ಡಿಜಿಟಲ್ ಕಲಿಕೆಯನ್ನು ಹೆಚ್ಚಿಸಲು ಪ್ರಯೋಗಾಲಯವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯರು, ವಿದ್ಯಾರ್ಥಿಗಳು ಮತ್ತಿತರರು ಉಪಸ್ಥಿತರಿದ್ದರು. ಕುಮಟಾದ ಕರ್ನಾಟಕ ಬ್ಯಾಂಕ್ ಕಾರವಾರದ ಶಾಖಾ ವ್ಯವಸ್ಥಾಪಕ ಗೌತಮ್ ಶೆಟ್ಟಿ, ಕಂಪ್ಯೂಟರ್ ವಿಜ್ಞಾನ ವಿಭಾಗದ ಮುಖ್ಯಸ್ಥೆ ಸೌಮ್ಯ ನಾಯಕ್ ಸ್ವಾಗತಿಸಿದರು, ವಿದ್ಯಾರ್ಥಿ ಡೆಜ್ಲರ್ ನಿರೂಪಿಸಿದರು. ಪೀಟರ್ ಬಿರ್ಜಿ ವಂದಿಸಿದರು.

# ಸಮುದ್ರ ಮಾನವ ಜೀವನದ ಅವಿಭಾಜ್ಯ ಅಂಗ

**ಕಾರವಾರ:** ಸಮುದ್ರ ಮಾನವ ಜೀವನದ ಅವಿಭಾಜ್ಯ ಅಂಗ, ಸಮುದ್ರವಿಲ್ಲದೆ ಜೀವನವಿಲ್ಲ, ಜಗತ್ತಿನಲ್ಲಿ ಜೀವಿಗಳ ಉಗಮ ಆರಂಭವಾಗಿದ್ದೇ ಸಮುದ್ರದಿಂದ. ಜಗತ್ತಿನ ಹವಾಮಾನದಲ್ಲಿ ನಡೆಯುವ ಪ್ರತಿಯೊಂದು ಬದಲಾವಣೆಗೂ ಸಮುದ್ರ ಪ್ರಮುಖ ಕಾರಣವಾಗಿದ್ದು, ಅದನ್ನು ಉಳಿಸಿ, ರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ಹೇಳಿದರು.

ಅವರು ಶನಿವಾರ, ರವೀಂದ್ರನಾಥ್ ಠಾಗೂರ್ ಬೀಚ್ ಬಳಿಯ ತಿಮ್ಮಕ್ಕ ಟ್ರೀ ಪಾರ್ಕ್‌ನಲ್ಲಿ, ಪ್ರಾದೇಶಿಕ ನಿರ್ದೇಶಕರು (ಪರಿಸರ), ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಕಾರವಾರ ಮತ್ತು ಕಾರವಾರ ಅರಣ್ಯ ವಿಭಾಗದ ವತಿಯಿಂದ ಸೇವಾ ಪರ್ವ 2025 ಅಂತಾರಾಷ್ಟ್ರೀಯ ಕಡಲತೀರ ಸ್ವಚ್ಛತಾ ದಿನದ ಅಂಗವಾಗಿ ನಡೆದ ಬೀಚ್ ಸ್ವಚ್ಛತಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಗತ್ತಿನಲ್ಲಿ ಸಂಭವಿಸುವ ಪ್ರತಿಯೊಂದು ಹವಾಮಾನ ಬದಲಾವಣೆ, ವೈಪರೀತ್ಯಗಳು, ಮಳೆ ಇದೆಲ್ಲದಕ್ಕೂ ಸಮುದ್ರವೇ ಮುಖ್ಯ ಕಾರಣವಾಗಿದ್ದು, ಸಮುದ್ರ ಸ್ವಚ್ಛವಾಗಿದ್ದರೆ ಜಗತ್ತಿನಲ್ಲಿ ಉತ್ತಮ ಪರಿಸರ ನಿರ್ಮಾಣವಾಗಲಿದೆ ಇದೇ ಕಾರಣದಿಂದ ಸಿ.ಆರ್. ಝಡ್ ನಿಯಮಗಳನ್ನು ರೂಪಿಸಿ ಕಡಲತೀರವನ್ನು ರಕ್ಷಿಸುವ ಕೆಲಸ ನಡೆಯುತ್ತಿದೆ, ಸಮುದ್ರತೀರ ಚೆನ್ನಾಗಿದ್ದರೆ ನಾವೆಲ್ಲರೂ ಚೆನ್ನಾಗಿರುತ್ತೇವೆ ಆದ್ದರಿಂದ ನಾವೆಲ್ಲರೂ ಸೇರಿ ಇದನ್ನು ರಕ್ಷಿಸೋಣ ಎಂದರು.



ಸಮುದ್ರವು ಪ್ರಕೃತಿ ಮಾನವನಿಗೆ ನೀಡಿರುವ ಸುಂದರವಾದ ವರವಾಗಿದ್ದು, ಇದನ್ನು ನಿರ್ಲಕ್ಷಿಸದೇ ಕಾಪಾಡುವ ಹೊಣೆಗಾರಿಕೆ ಪ್ರತಿಯೊಬ್ಬರ ಮೇಲಿದೆ. ನಾವು ಸಮುದ್ರವನ್ನು ಕಲುಷಿತಗೊಳಿಸಿದರೆ ಅದರ ಹಲವು ಪಟ್ಟು ದುಷ್ಪರಿಣಾಮಗಳನ್ನು ನಾವೇ ಎದುರಿಸಬೇಕಾಗುತ್ತದೆ. ಕಡಲತೀರದ ಸ್ವಚ್ಛತೆಯ ಕಾರ್ಯಕ್ರಮ ಒಂದು ದಿನಕ್ಕೆ ಮಾತ್ರ ಸೀಮಿತವಾಗಿದೇ ವರ್ಷಪೂರ್ತಿ ನಿರಂತರವಾಗಿ ನಡೆಯಬೇಕು ಎಂದು ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾರವಾರ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ರವಿಶಂಕರ್ ಮಾತನಾಡಿ, ಇಡೀ ಜಗತ್ತಿನಲ್ಲಿ ಎಲ್ಲಾ ಜೀವಿ ಸಂಕುಲಕ್ಕೆ ಅತೀ ಹೆಚ್ಚಿನ ಆಮ್ಲಜನಕ ಸಮುದ್ರದಿಂದ ದೊರೆಯುತ್ತಿದೆ. ಆದರೆ ಪ್ರತಿ ನಿಮಿಷಕ್ಕೆ 1 ಟನ್ ಪ್ಲಾಸ್ಟಿಕ್ ತ್ಯಾಜ್ಯ ಸಮುದ್ರಕ್ಕೆ ಸೇರುತ್ತಿದೆ. ಒಂದು ವರದಿಯ ಪ್ರಕಾರ ಪ್ರತೀ ವರ್ಷ ಸಮುದ್ರವನ್ನು ಅವಲಂಬಿಸಿರುವ 10 ಲಕ್ಷ ಪಕ್ಷಿಗಳು ಮತ್ತು 1 ಲಕ್ಷ ಸಮುದ್ರ ಜೀವಿಗಳು ಮಾಲಿನ್ಯದಿಂದ ಸಾವನ್ನಪ್ಪುತ್ತಿದ್ದು ಅವುಗಳ ಮರಣೋತ್ತರ ಪರೀಕ್ಷೆಯಲ್ಲಿ ಪ್ಲಾಸ್ಟಿಕ್ ಕಂಡು ಬರುತ್ತಿದೆ. ಏಕ ಬಳಕೆಯ ಪ್ಲಾಸ್ಟಿಕ್‌ನ್ನು ಸಂಪೂರ್ಣ ನಿಷೇಧಿಸುವುದರ ಜೊತೆಗೆ ಪ್ಲಾಸ್ಟಿಕ್ ಬಳಕೆಯ ಕಡಿಮೆ ಮಾಡಬೇಕು, ಈ ನಿಟ್ಟಿನಲ್ಲಿ ಸಮುದ್ರ ಮತ್ತು ಕಡಲತೀರವನ್ನು ಮಾಲಿನ್ಯದಿಂದ ರಕ್ಷಿಸುವಲ್ಲಿ ಯುವ ಜನತೆಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಸೇವಾ ಪರ್ವ 2025 ಕಾರ್ಯಕ್ರಮದ ನೋಡಲ್ ಅಧಿಕಾರಿ ರಾಜೇಶ್ ಕುಮಾರ್, ಸಾಮಾಜಿಕ ಅರಣ್ಯ ವಿಭಾಗದ ಡಿ.ಎಫ್.ಓ ಮಂಜುನಾಥ್ ನಾವಿ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಭೂ ವಿಜ್ಞಾನಿ ಆಶಾ ಉಪಸ್ಥಿತರಿದ್ದರು. ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಸಿ.ಆರ್.ಝಡ್ ನ ಪ್ರಾದೇಶಿಕ ನಿರ್ದೇಶಕ ಪ್ರವೀಣ್ ಕುಮಾರ್ ಬಸ್ರೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ವಲಯ ಅರಣ್ಯಾಧಿಕಾರಿ ಕಿರಣ್ ಮಾನವಚಾರಿ ಸ್ವಾಗತಿಸಿದರು, ವಲಯ ಅರಣ್ಯಾಧಿಕಾರಿ ಗಜಾನನ ನಾಯ್ಕ ವಂದಿಸಿದರು.

ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಅರಣ್ಯ ಇಲಾಖೆಯ ಸಿಬ್ಬಂದಿಗಳು ಮತ್ತು ಸಾರ್ವಜನಿಕರಿಂದ ನಡೆದ ಕಡಲ ತೀರದ ಸ್ವಚ್ಛತಾ ಕಾರ್ಯದಲ್ಲಿ 1,500 ಕೆ.ಜಿ ಗೂ ಅಧಿಕ ತ್ಯಾಜ್ಯವನ್ನು ಸಂಗ್ರಹ ಮಾಡಲಾಯಿತು. ಅಂತಾರಾಷ್ಟ್ರೀಯ ಬೀಚ್ ಸ್ವಚ್ಛತಾ ದಿನದ ಅಂಗವಾಗಿ ಆಯೋಜಿಸಿದ್ದ ವಿವಿಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಮತ್ತು ಕಡಲ ತೀರ ರಕ್ಷಣೆ ಬಗ್ಗೆ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

## ಗುಮಾಸ್ತ, ಬೆರಳಚ್ಚುಗಾರ ಹುದ್ದೆಗೆ ಅರ್ಜಿ

**ಬಾಗಲಕೋಟೆ:** ಜಮಖಂಡಿ ಹಾಗೂ ಬೀಳಗಿ ತಾಲೂಕಾ ಕಾನೂನು ಸೇವಾ ಸಮಿತಿಯಲ್ಲಿ ಗುಮಾಸ್ತ ವ ಬೆರಳಚ್ಚುಗಾರ ತಲಾ ಒಂದು ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಹಾಗೂ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವವರು ಕಂಪ್ಯೂಟರ ಜ್ಞಾನ ಮತ್ತು ಪದವಿ ಹೊಂದಿರಬೇಕು. ಆಸಕ್ತರು ಸೆಪ್ಟೆಂಬರ 22 ರೊಳಗಾಗಿ ಕಚೇರಿ ಅವಧಿಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ಸದಸ್ಯ ಕಾರ್ಯದರ್ಶಿಗಳ ಕಾರ್ಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಎಡಿಆರ್. ಕಟ್ಟಡ ಜಿಲ್ಲಾ ನ್ಯಾಯಾಲಯಗಳ ಆವರಣ, ಬಾಗಲಕೋಟೆ ಇಲ್ಲಿ ಸಲ್ಲಿಸುವಂತೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

**ಬಾಗಲಕೋಟೆ:** ಜಿಲ್ಲೆಯಲ್ಲಿ ಪ್ರತಿ ವರ್ಷದಂತೆ ಮಹರ್ಷಿ ವಾಲ್ಮೀಕಿ ಜಯಂತಿ ವಿಜೃಂಭಣೆಯಿಂದ ಆಚರಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ 24 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವ ಸಿದ್ದತಾ ಸಭೆ ಜರುಗಲಿದ್ದು, ಸದರಿ ಸಭೆಗೆ ಪರಿಶಿಷ್ಟ ಪಂಗಡದ ಎಲ್ಲ ಧುರೀಣರು, ಪದಾಧಿಕಾರಿಗಳು ಹಾಗೂ ಇತರೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡು ಸಲಹೆಗಳನ್ನು ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಸೆ.25 ರಂದು ಪಾಲಿಕೆಯ ಪರಿಷತ್ ಸಭೆ

**ಬೆಳಗಾವಿ:** ಸೆ.25, 2025 ರಂದು ಬೆಳಿಗ್ಗೆ 11 ಗಂಟೆಗೆ ಮಹಾನಗರ ಪಾಲಿಕೆ ಪರಿಷತ್ ಸಭಾಗೃಹದಲ್ಲಿ ಮಹಾನಗರ ಪಾಲಿಕೆಯ ಪರಿಷತ್ ಸಭೆ ಜರುಗಲಿದೆ ಎಂದು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಶೋಧನಾ ವಿಧಾನ, ದತ್ತಾಂಶ ವಿಶ್ಲೇಷಣೆ ಕಾರ್ಯಾಗಾರ

**ಬೆಳಗಾವಿ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ ಸಂಶೋಧನಾ ವಿಧಾನ ಮತ್ತು ದತ್ತಾಂಶ ವಿಶ್ಲೇಷಣೆ ವಿಷಯದ ಮೇಲೆ ಅಕ್ಟೋಬರ್, 14 ರಿಂದ 18 ರ ವರೆಗೆ ಐದು ದಿನಗಳ ಕಾಲ ಕಾರ್ಯಾಗಾರವನ್ನು ಅಕಾಡೆಮಿಯ ಕಛೇರಿಯಲ್ಲಿ ಆಯೋಜಿಸಲಾಗುತ್ತಿದೆ.

ಆಸಕ್ತ ಅಭ್ಯರ್ಥಿಗಳು ಅಕ್ಟೋಬರ್, 13, 2025 ರ ಒಳಗಾಗಿ https://forms.gle/UNrBq9wiBzgQBMVD6 ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಇಂಜಿನಿಯರಿಂಗ್ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು/ಪ್ರಾಧ್ಯಾಪಕರು ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9620767819 ಗೆ ಅಥವಾ ಅಕಾಡೆಮಿಯ ವೆಬ್ ಸೈಟ್ https://kstacademy.in ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋಚರಿ: ಹೆಚ್ಚುವರಿ ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಕೋಚರಿ ಗ್ರಾಮದಲ್ಲಿ ಪ್ರಸ್ತುತ ಮೂರು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ದಿನಾಂಕ: 17–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಹುಕ್ಕೇರಿ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ಹುಕ್ಕೇರಿ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ರಾಹ್ಮಣ ಸಮುದಾಯದವರಿಂದ ಅರ್ಜಿ ಆಹ್ವಾನ

**ವಿಜಯಪುರ:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ನೇರವಾಗಿ ಸಾಲ–ಸಹಾಯಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೊಟೆಲ್ ಉದ್ಯಮ, ಟ್ಯಾಕ್ಸಿ ಇತ್ಯಾದಿ ವ್ಯಾಪಾರ ವಹಿವಾಟುಗಳನ್ನು ಕೈಗೊಳ್ಳಲು ಕನಿಷ್ಠ 1 ಲಕ್ಷ ಹಾಗೂ ಗರಿಷ್ಟ 2 ಲಕ್ಷ ರೂ. ಆರ್ಥಿಕ ನೆರವು ಒದಗಿಸಲಾಗುವುದು.

ಅರ್ಜಿಯನ್ನು ವೆಬ್‌ಸೈಟ್ ksbdb.karnataka.gov.in ಮೂಲಕ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ದಿನಾಂಕ : 31–10–2025 ಕೊನೆಯ ದಿನವಾಗಿದೆ. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ : 8762249230 ಸಂಖ್ಯೆ ಸಂಪರ್ಕಿಸುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಶುಕ್ಷು ತರಬೇತಿಗೆ ಅರ್ಜಿ

**ಬಾಗಲಕೋಟೆ:** ಬೆಂಗಳೂರಿನ ಹಿಂದೂಸ್ತಾನ ಏರೋನೆಟಿಕ್ಸ್ ಲಿಮಿಟೆಡ್‌ನವರು ಪ್ರಸಕ್ತ ಸಾಲಿಗೆ ಅಕ್ಟೋಬರ ತಿಂಗಳಲ್ಲಿ ಪ್ರಾರಂಭವಾಗುವ ಒಂದು ವರ್ಷದ ಶಿಶಿಕ್ಷು ತರಬೇತಿಗಾಗಿ ಫಿಟ್ಟರ, ಟರ್ನರ್, ಮಷಿನಿಸ್ಟ್, ಇಲೆಕ್ಟ್ರಿಷಿಯನ್, ವೆಲ್ಡರ, ಕೋಪಾ, ಕಾರ್ಪೆಂಟರ, ಫೌಂಡ್ರಿಮನ್, ಶೀಟ್ ಮೆಟಲ್ ವರ್ಕರ್, ಟೂಲ್ & ಡೈ ಮೇಕರ್, ಸಿಎನ್‌ಸಿ ಪ್ರೋಗ್ರಾಮರ್ ಕಂ ಆಪರೇಟರ್, ಮೆಕ್ಯಾನಿಕ್ ಟ್ರೇಡಗಳಲ್ಲಿ ಐಟಿಐ ಪಾಸಾದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಅವಧಿಯಲ್ಲಿ ಸ್ಟೈಪಂಡ್ ಮತ್ತು ಇತರ ಸೌಲಭ್ಯಗಳನ್ನು ನೀಡಲಾಗುತ್ತದೆ. ಆಸಕ್ತರು ಎಸ್.ಎಸ್.ಎಲ್.ಸಿ, ಐಟಿಐ ಅಂಕಪಟ್ಟಿ, ಎನ್‌ಟಿಸಿ ಸರ್ಟಿಫಿಕೇಟ್, ಜಾತಿ ಪ್ರಮಾಣ ಪತ್ರ, ಅಂಗವಿಕಲರಿದ್ದಲ್ಲಿ ಅಂಗವಿಕಲರ ಪ್ರಮಾಣ ಪತ್ರ, ಆಧಾರ ಕಾರ್ಡ ಮತ್ತು ಪಾನ್ ಕಾರ್ಡಗಳ ಝುರಾಕ್ಸ್ ಪ್ರತಿಗಳನ್ನು ಸೆಪ್ಟೆಂಬರ 26 ರೊಳಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಖುದ್ದಾಗಿ ಭೇಟಿ ನೀಡಿ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಪ್ರಾಣಿ ಸಂತಾನ ನಿಯಂತ್ರಣ, ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ

# ಬೀದಿನಾಯಿಗಳ ಸಂತಾನ ನಿಯಂತ್ರಣಕ್ಕೆ ಕಾರ್ಯನಿರ್ವಹಿಸಿ

**ಹಾವೇರಿ:** ಜಿಲ್ಲೆಯಲ್ಲಿ ಬೀದಿ ನಾಯಿಗಳ ಸಂತಾನ ನಿಯಂತ್ರಣಕ್ಕಾಗಿ ಸಂಬಂಧಪಟ್ಟ ಸ್ಥಳೀಯ ನಗರ ಹಾಗೂ ಗ್ರಾಮೀಣ ಸಂಸ್ಥೆಯ ಅಧಿಕಾರಿಗಳು ಮತ್ತು ಪಶುಪಾಲನಾ ಇಲಾಖೆಯ ಪಶುವೈದ್ಯಾಧಿಕಾರಿಗಳು ಜಂಟಿಯಾಗಿ ಕಾರ್ಯೋನ್ಮುಖರಾಗಿ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದ ಪ್ರಾಣಿ ಸಂತಾನ ನಿಯಂತ್ರಣ ಮತ್ತು ಮೇಲ್ವಿಚಾರಣಾ ಸಮಿತಿ ಸಭೆ ಹಾಗೂ ಸಂಚಾರಿ ಪಶು ಚಿಕಿತ್ಸಾ ಘಟಕದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಬೀದಿ ನಾಯಿಗಳ ಸಂತಾನ ನಿಯಂತ್ರಣ:** ಅನಿಯಂತ್ರಿತ ನಾಯಿಗಳ ಸಂತಾನ ಉತ್ಪತ್ತಿಯಿಂದ ಜಿಲ್ಲೆಯಲ್ಲಿ ನಾಯಿಗಳ ಸಂಖ್ಯೆ ಹೆಚ್ಚಾಗಿದ್ದು, ಇದರಿಂದ ಜನರು ಮನೆಯಿಂದ ಹೊರ ಬರುವುದಕ್ಕೂ ಭಯಪಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸಾಮಾಜಿಕವಾಗಿ ಇದು ತುಂಬಾ ಅಪಾಯಕಾರಿ ಬೆಳವಣೆಯಾಗಿದ್ದು, ಈ ಪರಿಸ್ಥಿತಿ ನಿಯಂತ್ರಿಸುವುದು ಅತೀ ಅವಶ್ಯಕವಾಗಿದೆ. ಸ್ಥಳೀಯ ನಗರ ಹಾಗೂ ಗ್ರಾಮೀಣ ಸಂಸ್ಥೆಗಳು ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಯೋಗದಲ್ಲಿ ತುರ್ತಾಗಿ ಬೀದಿ ನಾಯಿಗಳ ಸಂತಾನ ನಿಯಂತ್ರಣ (ಎಬಿಸಿ) ಕಾರ್ಯಕ್ರಮ ಅನುಷ್ಠಾನಗೊಳಿಸಬೇಕು ಎಂದು ಸೂಚಿಸಿದರು.

ಬರುವ ದಿನಗಳಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಾಯಿ ಕಚ್ಚುವಿಕೆ ಪ್ರಕರಣಗಳು ಕಂಡು ಬಂದಲ್ಲಿ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹಾಗೂ ಆಯಾ ವ್ಯಾಪ್ತಿಯ ಸಂಬಂಧಿಸಿದ ಅಧಿಕಾರಿಗಳ ಮೇಲೆ ಪ್ರಕರಣ ದಾಖಲಿಸುವಂತೆ ಪೋಲಿಸ್ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪಶು ಪಾಲನೆ ಇಲಾಖೆ ಉಪನಿರ್ದೇಶಕ ಡಾ. ಶಿವಯೋಗಿ ಬ.ಯಲಿ ಅವರು ಮಾತನಾಡಿ, ಸಂತಾನ ನಿಯಂತ್ರಣ ಕಾರ್ಯಕ್ರಮದಡಿ ಬೀದಿ ನಾಯಿಗಳನ್ನು ಹಿಡಿದು ಅವುಗಳಿಗೆ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಕೈಗೊಂಡು, ಶಸ್ತ್ರ ಚಿಕಿತ್ಸೆಯ ನಂತರದಲ್ಲಿ ಮೂರು ದಿನಗಳವರೆಗೆ ಸೂಕ್ತ ಚಿಕಿತ್ಸೆ ನೀಡಿ, ರೇಬಿಸ್ ಲಸಿಕೆ ಹಾಕಿ ಅವುಗಳು ಮೊದಲಿದ್ದ ಜಾಗದಲ್ಲಿ ಬಿಟ್ಟು ಬರುವುದರ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

**ರೇಬಿಸ್ ಲಸಿಕಾ ಕಾರ್ಯಕ್ರಮ:** ವಿಶ್ವ ರೇಬಿಸ್ ದಿನದ ಅಂಗವಾಗಿ ಸೆಪ್ಟಂಬರ್ 28 ರಂದು ಜಿಲ್ಲೆಯಾದ್ಯಂತ ರೇಬಿಸ್ ಲಸಿಕಾ ಕಾರ್ಯಕ್ರಮ ಹಾಗೂ ರೇಬಿಸ್ ಜಾಗೃತಿ ಶಿಬಿರಗಳನ್ನು ಶಾಲೆಗಳಲ್ಲಿ ಮತ್ತು ಸಾರ್ವಜನಿಕರಿಗೆ ಹಮ್ಮಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ, ಪ್ರತಿ ವಾರ್ಡ, ಪಂಚಾಯತ್ ವ್ಯಾಪ್ತಿಯ ಬೀದಿ ನಾಯಿಗಳ ಸಾಂದ್ರತೆ ಅನುಗುಣವಾಗಿ ಸಾರ್ವಜನಿಕ ಸ್ಥಳಗಳನ್ನು ಹೊರತುಪಡಿಸಿ ಇತರೆ ನಿರ್ದಿಷ್ಟ ಸ್ಥಳವನ್ನು ಆಹಾರ ವಿತರಣೆಗಾಗಿ ಗುರುತಿಸಿಕೊಂಡು ಸಾರ್ವಜನಿಕರಿಗೆ ಪ್ರಚಾರ ಪಡಿಸಿ ಪೋಷಿಸಲು ಅನುವು ಮಾಡಿಕೊಡುವುದು ಎಂದು ತಿಳಿಸಿದರು.

ಪಶು ಸಂಜೀವಿನಿ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಒಟ್ಟು 09 ಸಂಚಾರಿ ಪಶು ಚಿಕಿತ್ಸಾ ಘಟಕಗಳಿದ್ದು, ಈ ಯೋಜನೆಯು ರೈತರಿಗೆ ತುಂಬ ಅನುಕೂಲಕರವಾದ ಯೋಜನೆಯಾಗಿದೆ. ಇದರಿಂದಾಗಿ ಜಾನುವಾರುಗಳಲ್ಲಿ ರೋಗೋದ್ರೇಕ/ಚಿಕಿತ್ಸೆ ಕಂಡು ಬಂದಲ್ಲಿ ರೈತರ ಮನೆ ಬಾಗಿಲಿಗೆ ಹೋಗಿ ಚಿಕಿತ್ಸೆ ನೀಡುತ್ತಿರುವುದು ಶ್ಲಾಘನೀಯವಾಗಿದೆ. ಪ್ರಸ್ತುತ ಸಾಲಿನಲ್ಲಿ 4019 ಜಾನುವಾರುಗಳಿಗೆ ಚಿಕಿತ್ಸೆ ಒದಗಿಸಲಾಗಿರುತ್ತದೆ. ಈ ಯೋಜನೆಯನ್ನು ರೈತ ಬಾಂಧವರು ಬೆಳಿಗ್ಗೆ 09 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಸಹಾಯವಾಣಿ ಸಂಖ್ಯೆ 1962 ಕರೆ ಮಾಡುವ ಮುಖಾಂತರ ಇನ್ನೂ ಹೆಚ್ಚಿನ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

**ಕರಪತ್ರ ಬಿಡುಗಡೆ:** ಇದೇ ಸಂದರ್ಭದಲ್ಲಿ ಸಾರ್ವಜನಿಕರಿಗೆ ಮಂಜಾಗ್ರತ ಕ್ರಮವಾಗಿ ಗಿ ಶ್ವಾನಗಳ ಗುಣ ಲಕ್ಷಣಗಳ ಪರಿಚಯ ಹಾಗೂ ರೇಬಿಸ್ ರೋಗದ ಮುಂಜಾಗೃತ ಕ್ರಮ ಕುರಿತು ಕರ ಪತ್ರಗಳ ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ಶಿರಕೋಳ, ಜಿಲ್ಲಾ ಯೋಜನಾ ನಿರ್ದೇಶಕರು, ನಗರಾಭಿವೃದ್ಧಿ ಕೋಶ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಜಿಲ್ಲಾ ಪಂಚಾಯತಿಯ ಅಧಿಕಾರಿಗಳು, ಎಲ್ಲ ಮುಖ್ಯ ಪಶುವೈದ್ಯಾಧಿಕಾರಿಗಳು, ಆರೋಗ್ಯ ಇಲಾಖೆಯ ಅಧಿಕಾರಿಗಳು, ನಗರ/ಪುರಸಭೆ/ಪಟ್ಟಣ ಪಂಚಾಯತಿಯ ಆಯುಕ್ತರು, ಮುಖ್ಯಾಧಿಕಾರಿಗಳು, ಜಿಲ್ಲಾ ಪ್ರಾಣಿ ದಯಾ ಸಂಘದ ಸದಸ್ಯರುಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಗೋಶಾಲೆಗಳಿಗೆ ಭೇಟಿ ನೀಡಿ

ಜಿಲ್ಲೆಯಲ್ಲಿ ಒಂದು ಸರ್ಕಾರಿ ಗೋಶಾಲೆ ಹಾಗೂ ಮೂರು ಖಾಸಗಿ ಗೋಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಗೋಶಾಲೆಯಲ್ಲಿನ ಜಾನುವಾರುಗಳನ್ನು ಮಾರ್ಗ ಸೂಚಿಗಳನ್ವಯ ಮಾನವೀಯ ದೃಷ್ಠಿಯಿಂದ ಸೂಕ್ತವಾಗಿ ನಿರ್ವಹಣೆ ಮಾಡಬೇಕೆಂದು ಸಂಬಂಧಿಸಿದವರಿಗೆ ಸೂಚಿಸಿದರು. ಈ ಗೋಶಾಲೆಗಳ ಕಾರ್ಯನಿರ್ವಹಣೆ ಬಗ್ಗೆ ಸಂಬಂಧಪಟ್ಟ ಪಶುವೈದ್ಯಾಧಿಕಾರಿ ಹಾಗೂ ಪ್ರಾಣಿ ದಯಾ ಸಂಘದ ಒಬ್ಬ ಸದಸ್ಯರು ಪ್ರತಿ 15 ದಿನಕ್ಕೊಮ್ಮೆ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿ ವರದಿಯನ್ನು ನೀಡುವಂತೆ ಸೂಚಿಸಿದರು.

## ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸಂಘದ ಪಾತ್ರ ಹಿರಿದು



**ರಬಕವಿ–ಬನಹಟ್ಟಿ:** ನಗರದ ಅಲ್ಪಸಂಖ್ಯಾತ ಸಮುದಾಯದ ಏಳ್ಗೆಗೆ 27 ವರ್ಷಗಳಿಂದ ಅವಿರತ ಸೇವೆಯ ಮೂಲಕ ಆರ್ಥಿಕ ಸಬಲೀಕರಣಕ್ಕೆ ಬನಹಟ್ಟಿ ಅಲ್ಪಸಂಖ್ಯಾತ ಸೊಸೈಟಿ ಪ್ರಾಧಾನ್ಯತೆ ನೀಡುವಲ್ಲಿ ಯಶಸ್ವಿಯಾಗಿದೆಯೆಂದು ಸಂಘದ ಅಧ್ಯಕ್ಷ ಇರ್ಷಾದ ಮೋಮಿನ್ ಹೇಳಿದರು.

ಬನಹಟ್ಟಿಯ ಸಂಘದ ಕಾರ್ಯಾಲಯದಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರಸಕ್ತ ವರ್ಷ 8.32 ಕೋಟಿ ರೂ.ಗಳಷ್ಟು ಠೇವುದೊಂದಿಗೆ 7.28 ಕೋಟಿ ರೂ.ಗಳಷ್ಟು ಸಾಲ ವಿತರಿಸಲಾಗಿದೆ. ಒಟ್ಟು 25.71 ಲಕ್ಷ ರೂ.ಗಳಷ್ಟು ಲಾಭದೊಂದಿಗೆ ಶೇರುದಾರರಿಗೆ ಶೇ.15 ರಷ್ಟು ಲಾಭಾಂಶ ವಿತರಿಸಲಾಗುವದೆಂದು ಮೋಮಿನ್ ತಿಳಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಯೂನಸ್ ನಿಪ್ಪಾಣಿ ಮಾತನಾಡಿ, ಪ್ರತಿಯೊಬ್ಬರೂ ಸಹಕಾರಿ ಸಂಘದೊಂದಿಗೆ ಕಾರ್ಯಚಟುವಟಿಕೆ ನಿರ್ವಹಿಸುವದರೊಂದಿಗೆ ಆರ್ಥಿಕ ಸಬಲೀಕರಣ ಹಾಗು ವಾಣಿಜ್ಯ ಮಾಹಿತಿ ಪಡೆಯುವದರೊಂದಿಗೆ ಅಭಿವೃದ್ಧಿ ಹೊಂದಬೇಕೆಂದರು.

ಸಭೆಯ ಉಪಾಧ್ಯಕ್ಷ ಮುಜಫ್ಫರ್ ಆಲಮೇಲ, ಬುಡಾನಸಾಬ ಜಮಾದಾರ, ಹಾರೂನ್ ಬೇವೂರ, ನಶೀಂ ಮೊಕಾಶಿ, ರಾಜೇಸಾಬ ಸಂತಿ, ಜಾಕೀರ ಬಾರಿಗಡ್ಡಿ, ಸುಲ್ತಾನ ಆಲಮೇಲ್, ಗುಲಾಬ ಯಾದವಾಡ, ಆಶರಫ್ ಮಹಾಲಿಂಗಪೂರ, ತೌಫೀಕ ಮುಲ್ಲಾ, ಸಲೀಂ ಬಾರಿಗಡ್ಡಿ, ಅಬೂಬಕರ ಗಾಡಬೋಲೆ, ಸಿರಾಜಸಾಬ ಬನಹಟ್ಟಿ, ಆಯೇಶಾ ರಾಜೇಸಾಬ ಬಾರಿಗಡ್ಡಿ, ರುಬೀನಾ ರಫೀಕ್ ಡಾಂಗೆ, ಪ್ರಕಾಶ ಬೆಲ್ಲಮ, ರಾಮಪ್ಪ ದಳವಾಯಿ, ಕಾರ್ಯದರ್ಶಿ ತಾರಿಪುರರಹೆಮಾನ ಬಾಗಲಕೋಟ, ಆಶ್ಪಾಕ ಸೌದಾಗರ, ಅಬುಬಕರ ಮೋಮಿನ, ಶಮಸುದ್ದೀನ ಗುರಾಡಿ ಸೇರಿದಂತೆ ಅನೇಕರಿದ್ದರು.

## ಏಡ್ಸ್ ಜಾಗೃತಿಗಾಗಿ ವಿದ್ಯಾರ್ಥಿಗಳಿಗೆ ಮ್ಯಾರಥಾನ್ ಸ್ಪರ್ಧೆ

**ಬಾಗಲಕೋಟೆ:** ಎಚ್.ಐವಿ, ಏಡ್ಸ್ ಜಾಗೃತಿಗಾಗಿ ಕಾಲೇಜು ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ 5 ಕಿ.ಮೀ ಮ್ಯಾರಥಾನ್ ಸ್ಪರ್ಧೆಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಶನಿವಾರ ಚಾಲನೆ ನೀಡಿದರು.

ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಜ್ಯ ಏಡ್ಸ್ ಪ್ರವೆನ್‌ಷನ್ ಸೊಸೈಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಮ ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ ಹಾಗೂ ಜಿಲ್ಲಾ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಮ್ಯಾರಥಾನ್ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದ ಅವರು ಎಚ್.ಐ.ವಿ ತಡೆಗಟ್ಟಲು ತೀವ್ರಗೊಳಿಸಿದ ಐಇಸಿ ಪ್ರಚಾರಾಂದೋಲನ–2025ರ ಅಂಗವಾಗಿ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಮುಖ್ಯವಾಗಿ ಎಚ್.ಐ.ವಿ, ಏಡ್ಸ್ ಬಗ್ಗೆ ಅರಿವು, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ಮತ್ತು ತಾರತಮ್ಯವನ್ನು ತಡೆಗಟ್ಟುವುದು, ಎಚ್.ಐ.ವಿ, ಏಡ್ಸ್ ತಡೆ ಕಾಯ್ದೆ–2017, ನ್ಯಾಕೋ ಏಡ್ಸ್ ಆಪ್, ಉಚಿತ ರಾಷ್ಟ್ರೀಯ ಸಹಾಯವಾಣಿ–1097 ಸೇರಿದಂತೆ ಇತರೆ ಮಾಹಿತಿಗಳ ಬಗ್ಗೆ ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಉದ್ದೇಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ, ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿ ಡಾ.ಸುವರ್ಣ ಕುಲಕರ್ಣಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಶಿಕಲಾ ಶಿನ್ನೂರ, ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಡಿ.ಜಿ.ಹೊಸಳ್ಳಿ ಸೇರಿದಂತೆ ಏಡ್ಸ್ ನಿಯಂತ್ರಣ ಘಟಕ ಸಿಬ್ಬಂದಿ ವರ್ಗದವರು ಇದ್ದರು. 5ಕಿ.ಮೀ ಮ್ಯಾರಥಾನ್ ಸ್ಪರ್ಧೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ಎ.ಪಿ.ಎಂ.ಸಿ, ಬಜಾಜ್ ಶೋರೂಮ್ ಮೂಲಕ ಮರಳಿ ಜಿಲ್ಲಾಡಳಿತ ಭವನಕ್ಕೆ ಮುಕ್ತಾಯಗೊಂಡಿತು. ಮ್ಯಾರಥಾನ್ ಸ್ಪರ್ಧೆಯಲ್ಲಿ 220ಕ್ಕೂ ಹೆಚ್ಚು ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪುರುಷರ ವಿಭಾಗದಲ್ಲಿ ಸಂಗಮೇಶ ಹಳ್ಳಿ (ಪ್ರಥಮ), ದರ್ಶನ ಗೌಡರ (ದ್ವಿತೀಯ), ಮಂಜುನಾಥ ಬೇಲೂರಪ್ಪನವರ (ತೃತೀಯ) ಸ್ಥಾನ ಪಡೆದುಕೊಂಡರೆ, ಮಹಿಳಾ ವಿಭಾಗದಲ್ಲಿ ಮಹಾಲಕ್ಷ್ಮೀ ಬಸಕಾಳಿ (ಪ್ರಥಮ), ಮೀನಾಕ್ಷಿ ಚಲವನ್ನವರ (ದ್ವಿತೀಯ), ದೀಪಾ ಸನದಿ (ತೃತೀಯ) ಸ್ಥಾನ ಪಡೆದುಕೊಂಡರು. ವಿಜೇತರಾದವರಿಗೆ ತಲಾ ಪ್ರಥಮ 5 ಸಾವಿರ ರೂ, ದ್ವಿತೀಯ 3500 ರೂ, ತೃತೀಯ 2500 ರೂ.ಗಳ ನಗದು, ಪ್ರಶಸ್ತಿ ಪತ್ರ ಹಾಗೂ ಮೆಡಲ್ ನೀಡಲಾಯಿತು.



## ಕ್ರೀಡೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ: ಪಟ್ಟಣಶೆಟ್ಟಿ

**ಬಸವನಬಾಗೇವಾಡಿ:** ಸಂಘಟಿತ ಕಾರ್ಯ ಹಾಗೂ ಸಹಕಾರದಿಂದ ಕಾರ್ಯಕ್ರಮಗಳು ಯಶಸ್ವಿಯಾಗುತ್ತವೆ. ಅಂತಹ ಯಶಸ್ವಿ ಕಾರ್ಯಕ್ರಮಗಳನ್ನು ಆದರ್ಶ ಶಿಕ್ಷಕರ ವೇದಿಕೆ ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ ಎಂದು ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಹೇಳಿದರು.



ಪಟ್ಟಣದ ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಶಿಕ್ಷಕರ ದಿನಾಚರಣೆ ಹಾಗೂ ದಸರಾ ಹಬ್ಬದಂಗವಾಗಿ ಶನಿವಾರ ಆದರ್ಶ ಶಿಕ್ಷಕರ ವೇದಿಕೆಯ ಜಿಲ್ಲಾ ಹಾಗೂ ತಾಲೂಕು ಘಟಕ ಎರಡು ದಿನಗಳ ಕಾಲ ಹಮ್ಮಿಕೊಂಡಿರುವ ಬಸವನಬಾಗೇವಾಡಿ, ನಿಡಗುಂದಿ, ಕೊಲ್ಹಾರ ತಾಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ಕ್ರಿಕೆಟ್ ಹಾಗೂ ಥ್ರೋಬಾಲ್ ಟೂರ್ನಾಮೆಂಟ್ ಅನ್ನು ಸಸಿ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ. ಕ್ರೀಡೆ ಉತ್ಸಾಹವನ್ನು ಇಮ್ಮಡಿಗೊಳಿಸುತ್ತದೆ. ಶಿಕ್ಷಕರು ಮಕ್ಕಳಿಗೆ ಆಟಗಳನ್ನು ಆಡಿಸುವುದರೊಂದಿಗೆ ತಾವು ಕೂಡ ಕ್ರೀಡಾಕೂಟಗಳಲ್ಲಿ ಭಾಗವಹಿಸುತ್ತಿರುವುದು ಇತರರಿಗೆ ಕ್ರೀಡಾಸಕ್ತಿ ಹೆಚ್ಚಿಸಲು ಪ್ರೇರಣೆಯಾಗಲಿದೆ.ಈ ವರ್ಷ ಶಿಕ್ಷಕಿಯರಿಗೆ ಥ್ರೋಬಾಲ್ ಹಮ್ಮಿಕೊಂಡಿರುವದು ಶ್ಲಾಘನೀಯ. ಆದರ್ಶ ಶಿಕ್ಷಕರ ವೇದಿಕೆಗೆ ಶಿಕ್ಷಕರು ಹೆಚ್ಚು ದೇಣಿಗೆ ಕೊಡುವ ಮೂಲಕ ವೇದಿಕೆಯಿಂದ ನಿರಂತರ ಕಾರ್ಯಕ್ರಮಗಳು ನಡೆಯಲು ಪೂರಕವಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಆದರ್ಶ ವೇದಿಕೆಯ ಅಧ್ಯಕ್ಷ ಉಮೇಶ ಕವಲಗಿ ಮಾತನಾಡಿ, ಶಿಕ್ಷಕರು ತಮ್ಮ ಕರ್ತವ್ಯದ ಒತ್ತಡದ ಮಧ್ಯೆ ಇಂತಹ ಕ್ರೀಡಾಕೂಟಗಳಲ್ಲಿ ಉತ್ಸಾಹದಿಂದ ಪಾಲ್ಗೊಳ್ಳುತ್ತಿರುವುದು ಹೆಮ್ಮೆಯ ಸಂಗತಿ.ಕ್ರೀಡೆಗಳು ಆರೋಗ್ಯ ವೃದ್ಧಿಸುವುದರೊಂದಿಗೆ ಚೈತನ್ಯ ಹೆಚ್ಚಿಸುತ್ತದೆ. ಕಳೆದ 2014 ರಿಂದ ನಿರಂತರವಾಗಿ ನಮ್ಮ ವೇದಿಕೆಯಿಂದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬರಲಾಗುತ್ತಿದೆ. ನಮ್ಮ ವೇದಿಕೆಯ ಎಲ್ಲಾ ಕಾರ್ಯಕ್ರಮಗಳಿಗೆ ಎಲ್ಲ ಶಿಕ್ಷಕರ ಸಹಕಾರ ಮರೆಯುವಂತಿಲ್ಲ. ಈ ವರ್ಷ ಶಿಕ್ಷಕಿಯರಿಗೂ ಥ್ರೋಬಾಲ್ ಹಮ್ಮಿಕೊಳ್ಳಲಾಗಿದೆ. ಎರಡು ದಿನಗಳ ಕಾಲ ಈ ಟೂರ್ನಾಮೆಂಟ್ ನಡೆಯಲಿದೆ ಎಂದರು.

ಪ್ರಾಸ್ತವಿಕವಾಗಿ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಎಚ್.ಬಿ.ಬಾರಿಕಾಯ ಮಾತನಾಡಿದರು. ಸಂಗಯ್ಯ ಕಾಳಹಸ್ತೇಶ್ವರಮಠ ಸಾನಿಧ್ಯ ವಹಿಸಿದ್ದರು. ವೇದಿಕೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ, ಎಪಿಎಂಸಿ ಮಾಜಿ ಅಧ್ಯಕ್ಷ ಶೇಖರ ಗೊಳಸಂಗಿ, ಜೆಡಿಎಸ್ ತಾಲೂಕಾಧ್ಯಕ್ಷ ಜಗದೀಶ ಕೊಟ್ರಶೆಟ್ಟಿ, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಮುಖಂಡರಾದ ರವಿಗೌಡ ಚಿಕ್ಕೊಂಡ, ಬಬಲು ಅಗರವಾಲ, ಎಂ.ಜಿ.ಆದಿಗೊಂಡ, ರವಿ ರಾಠೋಡ, ಶಂಕರಗೌಡ ಬಿರಾದಾರ, ಶಿವಲಿಂಗಯ್ಯ ತೆಗ್ಗಿನಮಠ, ಮತಾಬ ಬಮ್ಮನಳ್ಳಿ, ಅರವಿಂದ ಸಾಲವಾಡಗಿ,ಬಸಣ್ಣ ದೇಸಾಯಿ, ಬಿಇಓ ವಸಂತ ರಾಠೋಡ, ವಿವಿಧ ಶಿಕ್ಷಕರ ಸಂಘಟನೆಗಳ ಮುಖಂಡರಾದ ಹೊನ್ನಪ್ಪ ಗೊಳಸಂಗಿ, ಸುರೇಶ ಬಿರಾದಾರ, ಬಿ.ಪಿ.ನಾಗಾವಿ, ಸಿದ್ದು ಉಕ್ಕಲಿ, ರಮೇಶ ಪೂಜಾರಿ,ಅಜುಘನ ಲಮಾಣಿ, ಡಿ.ಎ.ಪಾಟೀಲ, ಪಿ.ಎಸ್.ಹೊಸಮಠ, ಎಸ್.ಕೆ.ಕವಿಶೆಟ್ಟಿ, ಎಂ.ಬಿ.ತೋಟದ, ಸಲೀಂ ದಡೇದ, ಎಂ.ಎನ್.ಯಾಳವಾರ, ಅಶೋಕ ಗಿಡ್ಡಪ್ಪಗೋಳ, ಟಿ.ಪಿ.ದಳವಾಯಿ ಇತರರು ಇದ್ದರು.

## ಹಿರಿಯ ನಾಗರಿಕರಿಗೆ ಸಾಂಸ್ಕೃತಿಕ ಸ್ಪರ್ಧೆ

**ಬಾಗಲಕೋಟೆ:** ಪ್ರಸಕ್ತ ಸಾಲಿನ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಸೆಪ್ಟೆಂಬರ 24 ರಂದು ಬೆಳಿಗ್ಗೆ 10 ಗಂಟೆಗೆ ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಜಿಲ್ಲಾ ಮಟ್ಟದಲ್ಲಿ ಹಿರಿಯ ನಾಗರಿಕರಿಗೆ ಕ್ರೀಡೆ ಹಾಗೂ ವಿವಿಧ ಸಾಂಸ್ಕೃತಿ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ. ಮ್ಯೂಜಿಕಲ್ ಚೇರ್ (60 ರಇಂದ 70 ವರ್ಷ), ಬಿರುಸಿನ ನಡಿಗೆ (60 ರಿಂದ 69), ಬಕೇಟ್‌ನಲ್ಲಿ ಬಾಲ್ ಎಸೆಯುವ ಸ್ಪರ್ಧೆ (60 ರಿಂದ 69, 70 ವರ್ಷ ಹಾಗೂ ಮೇಲ್ಪಟ್ಟ)ಗಳನ್ನು ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಹಮ್ಮಿಕೊಳ್ಳಲಾಗುತ್ತಿದೆ. ಗಾಯನ ಸ್ಪರ್ಧೆ, ಏಕ ಪಾತ್ರ ಅಭಿನಯ ಸ್ಪರ್ಧೆ (60–69, 70 ವರ್ಷ ಹಾಗೂ ಮೇಲ್ಪಟ್ಟವರಿಗೆ) ಗಳು ನಡೆಯಲಿವೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಗಿರಿಜಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ತಾಲೂಕಾ ಎಂ.ಆರ್.ಡಬ್ಲೂ ಬಾಗಲಕೋಟೆ (9538714441), ಬಾದಾಮಿ, ಗುಳೇದಗುಡ್ಡ (9945408215), ಹುನಗುಂದ, ಇಲಕಲ್ಲ (8970565869), ಬೀಳಗಿ (7676980002), ಮುಧೋಳ (9008173773), ಜಮಖಂಡಿ (9900417764) ಹಾಗೂ ರಬಕವಿ–ಬನಹಟ್ಟಿ (9739936205)ಗೆ ಸಮಪರ್ಕಿಸಬಹುದಾಗಿದೆ.

## ಮನ್ನಿಕೇರಿ, ಹೊನ್ನಿಹಾಳ ಗ್ರಾಮಗಳಿಗೆ ಸಿಇಓ ಭೇಟಿ

**ಬಾಗಲಕೋಟೆ:** ಬೀಳಗಿ ತಾಲೂಕಿನ ಮನ್ನಿಕೇರಿ, ಹೊನ್ನಿಹಾಳ ಗ್ರಾಮಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಶನಿವಾರ ಭೇಟಿ ನೀಡಿ, ಜಲಜೀವನ್ ಮಿಷನ್ ಹಾಗೂ ಇತರ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.



ಬೀಳಗಿ ತಾಲ್ಲೂಕಿನ ಮನ್ನಿಕೇರಿ ಗ್ರಾಮಕ್ಕೆ ಭೇಟಿ ನೀಡಿದ ಅವರು, ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಶುದ್ಧ ಕುಡಿಯುವ ನೀರಿನ ಸಂಸ್ಕರಣಾ ಘಟಕದ ಕಾಮಗಾರಿಯನ್ನು ಪರಿಶೀಲಿಸಿದರು. ಘಟಕ ನಿರ್ಮಾಣದ ವಿನ್ಯಾಸ, ಬಳಸುತ್ತಿರುವ ಸಾಮಗ್ರಿಗಳ ಗುಣಮಟ್ಟ ಮತ್ತು ಕಾಮಗಾರಿಯ ವೇಗದ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ, ಗ್ರಾಮಸ್ಥರ ಬಳಕೆಗೆ ಲಭ್ಯವಾಗುವಂತೆ ಕ್ರಮಕೈಗೊಳ್ಳುವಂತೆ ಗುತ್ತಿಗೆದಾರರು ಮತ್ತು ಇಂಜಿನಿಯರ್‌ಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಲ ಜೀವನ್ ಮಿಷನ್ ಯೋಜನೆಯಡಿ ಗ್ರಾಮದ ಪ್ರತಿ ಮನೆಗೆ ನಲ್ಲಿ ಸಂಪರ್ಕ ಕಲ್ಪಿಸುವ ಪೈಪ್‌ಲೈನ್ ಅಳವಡಿಕೆ ಕಾಮಗಾರಿಯನ್ನು ವೀಕ್ಷಣೆ ಮಾಡಿ ಕಾಮಗಾರಿಯಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಂಡು ಗುಣಮಟ್ಟವನ್ನು ಕಾಯ್ದುಕೊಳ್ಳುವಂತೆ ತಾಕೀತು ಮಾಡಿದರು. ನಂತರ ಹೊನ್ನಿಹಾಳ ಗ್ರಾಮಕ್ಕೆ ಭೇಟಿ ನೀಡಿದ ಅವರು, ಅಲ್ಲಿ ನಡೆಯುತ್ತಿರುವ ಜಲ ಜೀವನ್ ಮಿಷನ್ ಯೋಜನೆಯಡಿ ಮನೆ ಮನೆಗೆ ನಲ್ಲಿ ಸಂಪರ್ಕ ಕಲ್ಪಿಸುವ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು. ಕೆಲವು ಮನೆಗಳಿಗೆ ಭೇಟಿ ನೀಡಿ, ಕಾಮಗಾರಿಯ ಬಗ್ಗೆ ಸ್ಥಳೀಯರೊಂದಿಗೆ ಚರ್ಚೆ ನಡೆಸಿದರು. ಪ್ರತಿಯೊಂದು ಮನೆಗೂ ಶುದ್ಧ ಮತ್ತು ಸುರಕ್ಷಿತ ಕುಡಿಯುವ ನೀರನ್ನು ತಲುಪಿಸುವುದು ಸರ್ಕಾರದ ಮುಖ್ಯ ಗುರಿಯಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಬದ್ಧತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಗ್ರಾಮ ಪಂಚಾಯತ ಕಚೇರಿಗೆ ಭೇಟಿ ನೀಡಿ, ಅಲ್ಲಿನ ಆಡಳಿತಾತ್ಮಕ ಕಾರ್ಯವೈಖರಿಯನ್ನು ಪರಿಶೀಲಿಸಿದರು. ಸಿಬ್ಬಂದಿಯ ಹಾಜರಾತಿ, ಸಾರ್ವಜನಿಕರಿಗೆ ನೀಡುತ್ತಿರುವ ಸೇವೆಗಳು, ನೈರ್ಮಲ್ಯ ನಿರ್ವಹಣೆ ಹಾಗೂ ಸರ್ಕಾರದ ಇತರ ಯೋಜನೆಗಳ ಅನುಷ್ಠಾನದ ಕುರಿತು ದಾಖಲೆಗಳನ್ನು ಪರಿಶೀಲಿಸಿ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಿದರು.

ಭೇಟಿ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ ಪಾಟೀಲ್ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರಾದ ಆಕಾಶ್ ವಂದೆ ಸೇರಿದಂತೆ ಇತರರು ಇದ್ದರು.

## ಮದ್ಯಮಾರಾಟ ನಿಷೇಧ ಪರಿಷ್ಕೃತ ಆದೇಶ

**ಹಾವೇರಿ:** ಗಣೇಶ ಹಬ್ಬದ ಸಮಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಹಾನಗಲ್ ಪಟ್ಟಣದಲ್ಲಿ ಸೆ.22ರ ಬೆಳಿಗ್ಗೆ 6ರಿಂದ ಸೆ.23ರ ಬೆಳಿಗ್ಗೆ 6 ಗಂಟೆವರೆಗೆ ರವರೆಗೆ ಮದ್ಯಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಆದೇಶ ಹೊರಡಿಸಿದ್ದಾರೆ.

ರಾಣೇಬೆನ್ನೂರ ಶಹರದಲ್ಲಿ ಈ ಮೊದಲು ಸೆ.22ರ ಬೆಳಿಗ್ಗೆ 6 ರಿಂದ ಸೆ.23ರ ಬೆಳಿಗ್ಗೆ 6 ಗಂಟೆವರೆಗೆ, ಸೆ.24ರ ಬೆಳಿಗ್ಗೆ 6 ರಿಂದ ಸೆ.25ರ ಬೆಳಿಗ್ಗೆ 6 ಗಂಟೆವರೆಗೆ ಹಾಗೂ ಸೆ.26ರ ಬೆಳಿಗ್ಗೆ 6 ರಿಂದ ಸೆ.27ರ ಬೆಳಿಗ್ಗೆ 6 ಗಂಟೆವರೆಗೆ, ಹೊರಡಿಸಿದ್ದ ಮದ್ಯ ಮಾರಾಟ ನಿಷೇಧ ರದ್ದುಪಡಿಸಿ ಆದೇಶ ಹೊಡಿಸಲಾಗಿದೆ.



ಮಹಾಲಿಂಗಪುರ: ಕೆಎಲ್‌ಇ ಸಂಸ್ಥೆ ಪ್ರತಿ ತಿಂಗಳು ನಡೆಸುವ ದೇಶ್ ಅಪ್ನಾಯೆ ಆ್ಯಕ್ಟಿಜೆನ್ ಕ್ಲಬ್ ಚಟುವಟಿಕೆಗಳ ಸ್ಪರ್ಧೆಯಲ್ಲಿ ಮಹಾಲಿಂಗಪುರದ ಎಸ್‌ಸಿಪಿ ಪ್ರಾಥಮಿಕ ಶಾಲೆಯ ತಂಡ ಚಾಂಪಿಯನ್ ಆಗಿದೆ. ತಂಡದ ರೂವಾರಿ ರೇಷ್ಮಾ ರಾಠೋಡ್, ಮೀನಾಕ್ಷಿ ಜಂಗಮಶೆಟ್ಟಿ, ಎಸ್.ಆರ್. ಕುಲಕರ್ಣಿ ಅವರಿಗೆ ಕೆಎಲ್‌ಇ ಶಿಕ್ಷಣ ಸಂಸ್ಥೆಯ ನಿರ್ದೇಶಕರು ಹಾಗೂ ಸ್ಥಾನಿಕ ಆಡಳಿತ ಮಂಡಳಿ ಚೇರಮನ್‌ರಾದ ಜಯಾನಂದ ಮುನವಳ್ಳಿ ಅವರು ಅಭಿನಂದಿಸಿದರು.

**ಡೆಂಗಿ ಲಾರ್ವಾ ಉತ್ಪತ್ತಿ ಸ್ಥಳಗಳು ಕಂಡುಬಂದಲ್ಲಿ ಸಂಬಂಧಿಸಿದವರಿಗೆ ನೋಟೀಸ್: ಜಿಲ್ಲಾಧಿಕಾರಿ**

# ಗರ್ಭಿಣಿಯರ ನೋಂದಣಿ ವಿಳಂಬವಾಗದಂತೆ ಎಚ್ಚರಿಕೆ ವಹಿಸಿ

**ಹಾವೇರಿ:** ಜಿಲ್ಲೆಯಲ್ಲಿ ಗರ್ಭಿಣಿಯರ ನೋಂದಣಿ ವಿಳಂಬವಾಗದಂತೆ ಎಚ್ಚರಿಕೆ ವಹಿಸಬೇಕು ಹಾಗೂ ಅವಧಿಗೆ ಮುನ್ನ ಹೆರಿಗೆಯಾಗುತ್ತಿರುವ ಬಗ್ಗೆ ಕಾರಣಗಳನ್ನು ತಿಳಿದುಕೊಳ್ಳಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಖಡಕ್ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಆರೋಗ್ಯ ಅಭಿಯಾನದ ಪ್ರಗತಿ ಪರಿಶೀಲನಾ ಸಭೆ ಹಾಗೂ ಜಿಲ್ಲಾ ಕಣ್ಗಾವಲು ಸಮಿತಿ ಸಭೆಯಲ್ಲಿ ಗರ್ಭಿಣಿಯರ ನೋಂದಣಿ, ಅವಧಿಗೆ ಮುನ್ನ ಹೆರಿಗೆ ಪ್ರಮಾಣ ಸೇರಿದಂತೆ ವಿವಿಧ ವಿಷಯಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಗ್ರಾಮೀಣ ಪ್ರದೇಶದಲ್ಲಿ ಗರ್ಭಿಣಿಯರ ನೋಂದಣಿಗೆ ಆದ್ಯತೆ ನೀಡುವಂತೆ ಹಾಗೂ ಆರೋಗ್ಯ ಇಲಾಖೆ ಸೌಲಭ್ಯಗಳ ಕುರಿತು ಮಾಹಿತಿ ನೀಡುವಂತೆ ಆಶಾ ಕಾರ್ಯಕರ್ತರಿಗೆ ಸೂಚನೆ ನೀಡಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕಾ ಆರೋಗ್ಯಾಧಿಕಾರಿಗಳು ಗ್ರಾಮೀಣ ಪ್ರದೇಶಗಳಿಗೆ ಭೇಟಿ ನೀಡಿ, ಗರ್ಭಿಣಿಯರು, ಬಾಣಂತಿಯರು, ಶಿಶುಗಳ ಆರೋಗ್ಯದ ಬಗ್ಗೆ ವಿಚಾರಣೆ ಮಾಡಬೇಕು. ಯಾರಿಗೂ ಕೆಲಸದಲ್ಲಿ ಆಸಕ್ತಿ ಕಾಣುತ್ತಿಲ್ಲ, ಬರುವ ದಿನಗಳಲ್ಲಿ ಅತ್ಯಂತ ಜವಾಬ್ದಾರಿಯಿಂದ ಕೆಲಸಮಾಡಬೇಕು. ಸರ್ಕಾರದ ಆರೋಗ್ಯ ಯೋಜನೆಗಳು ಎಲ್ಲರಿಗೂ ತಲುಪಿಸಬೇಕು. ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಆರೋಗ್ಯ ಇಲಾಖೆ ಪಾತ್ರ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಅತ್ಯಂತ ಕಾಳಜಿಯಿಂದ ಹಾಗೂ ಮುತುವರ್ಜಿಯಿಂದ ಕೆಲಸಮಾಡಬೇಕು ಎಂದು ಸೂಚಿಸಿದರು. ಗರ್ಭಿಣಿಯರು, ಬಾಣಂತಿಯರು ಹಾಗೂ ಶಿಶುಗಳ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ಅವರಿಗೆ ಕಾಲಕಾಲಕ್ಕೆ ಅಗತ್ಯ ಚುಚ್ಚುಮದ್ದು ಹಾಗೂ ಮಾತ್ರೆಗಳನ್ನು ನೀಡುವ ಜೊತೆಗೆ ಆರೋಗ್ಯ ಶಿಕ್ಷಣ ನೀಡಬೇಕು. ತುರ್ತು ಚಿಕಿತ್ಸೆಗೆ ಸಾರ್ವಜನಿಕ ಆಸ್ಪತ್ರೆಗೆ ಬರುವ ರೋಗಿಗಳಿಗೆ ಬೇರೆ ಆಸ್ಪತ್ರೆಗೆ ಕಳುಹಿಸುವ ಮೊದಲು ಅಗತ್ಯ ಪ್ರಥಮ ಚಿಕಿತ್ಸೆ ನೀಡಬೇಕು ಎಂದು ಎಚ್ಚರಿಕೆ ನೀಡಿದರು. ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ತಾಲೂಕಾ ಆಸ್ಪತ್ರೆಗಳಲ್ಲಿ ಅಗತ್ಯ ಚುಚ್ಚುಮದ್ದು, ಔಷಧಿಗಳು ಹಾಗೂ ಮಾತ್ರೆಗಳು, ನಾಯಿಕಡಿತ ಹಾಗೂ ಹಾವು ಕಡಿತಕ್ಕೆ ನೀಡುವ ಚುಚ್ಚುಮದ್ದುಗಳ ದಾಸ್ತಾನು ಮಾಡಿಕೊಳ್ಳಬೇಕು. ಬಡವರಿಗೆ ಅಗತ್ಯ ಆರೋಗ್ಯ ಸೇವೆ ಸಿಗುವಂತಾಗಬೇಕು ಎಂದರು.

**ನೋಟೀಸ್ ನೀಡಿ:** ಸಾರ್ವಜನಿಕ ವಲಯದಲ್ಲಿ ಡೆಂಗೀ ಲಾರ್ವಾ ಉತ್ಪತ್ತಿ ಸ್ಥಾನಗಳು ಕಂಡುಬಂದಲ್ಲಿ ಗ್ರಾಮೀಣ ಭಾಗದಲ್ಲಿ ಪಂಚಾಯತ್ ಅಧಿಕಾರಿಗಳಿಗೆ ಹಾಗೂ ನಗರ ಪ್ರದೇಶದಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ನೋಟೀಸ್ ನೀಡುವಂತೆ ತಾಲೂಕಾ ಆರೋಗ್ಯಾಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಯಾನಂದ, ಡಾ.ನೀಲೇಶ, ಡಾ.ಜಗದೀಶ ಪಾಟೀಲ, ಡಾ.ಚನ್ನವೀರಯ್ಯ ವಿರಕ್ತಮಠ, ಹಾವೇರಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರಭಾಕರ ಕುಂದೂರ ಸೇರಿದಂತೆ ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಜನಪದರ ಸಂಸ್ಕೃತಿಯೇ ಜಾನಪದ

**ರಬಕವಿ-ಬನಹಟ್ಟಿ:** ಜಾನಪದ ಸಂಸ್ಕೃತಿ ಉಳಿಯಬೇಕು. ಜನಪದರ ಸಂಸ್ಕೃತಿಯೇ ಜಾನಪದ. ಸಂಗೀತ ಕಲೆಗಳು ಜೀವಂತವಾಗಿರಬೇಕು. ಜನಪದ ಸತ್ವದಲ್ಲಿ, ಕಲಾತ್ಮಕ ಅರಿವಿನಲ್ಲಿ ಸಂಪತ್ತು ಅಡಗಿದೆಯೆಂದು ಹಿರಿಯ ಸಾಹಿತಿ ಸಿದ್ಧರಾಜ ಪೂಜಾರಿ ಹೇಳಿದರು.

ಬನಹಟ್ಟಿಯಲ್ಲಿ ಜನಪದ ತಪಸ್ವಿ, ಕವಿ, ಗಂಗಾತನಯ ಲಿಂ. ಅಪ್ಪಣ್ಣಪ್ಪ ಜಂಬಗಿಯವರ ಗಂಗಾತನಯ ನಿಲಯದಲ್ಲಿ ಕಸಾಪದಿಂದ ನಡೆದ ದತ್ತಿನಿಧಿ ಉಪನ್ಯಾಸ ಹಾಗೂ ಜನಪದ ರಸೋತ್ಸವದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬನಹಟ್ಟಿ ಮಕ್ಕಳ ಸಂಗಮ ಅಧ್ಯಕ್ಷ ಜಯವಂತ ಕಾಡದೇವರ ಸಸಿಗೆ ನೀರುಣಿಸಿದತ್ತಿನಿಧಿ ಕಾರ್ಯಕ್ರಮ ಉದ್ಘಾಟಿಸಿ ಜಾನಪದದಲ್ಲಿ ಅಪಾರ ಶಕ್ತಿಯಿದೆ. ಅಪ್ಪಣ್ಣಪ್ಪ ಜಂಬಗಿಯವರು ಸಾಹಿತ್ಯ ಕೃಷಿಯಲ್ಲಿ ಸದಾ ತೊಡಗಿಕೊಂಡಿದ್ದರು ಎಂದರು. ರಾಮಪುರ ಹಿರಿಯ ಸಾಹಿತಿ ಜಿ. ಎಸ್. ವಡಗಾಂವಿ ಜನಪದ ರಸೋತ್ಸವ



ಉದ್ಘಾಟಿಸಿ ನಿಗರ್ವಿಗಳಾಗಿದ್ದ ಅಪ್ಪಣ್ಣಪ್ಪನವರು ವಿನಯವಂತರಾಗಿದ್ದರೆಂದರು. ಜಮಖಂಡಿ ನಿವೃತ್ತ ಕನ್ನಡ ಉಪನ್ಯಾಸಕ ಡಾ. ಎಸ್.ಬಿ. ಮಟೋಳಿ, ತಾಲೂಕಾಧ್ಯಕ್ಷ ಮ.ಕೃ. ಮೇಗಾಡಿ ಮಾತನಾಡಿದರು. ಕಲಾವಿದ ಬನಹಟ್ಟಿಯ ಸಿದಮಾಳಪ್ಪ ಜಿಡ್ಡಿಮನಿ ಪ್ರಾರ್ಥಿಸಿದರು. ದತ್ತಿ ದಾನಿಶರತ್ ಜಂಬಗಿ ಸ್ವಾಗತಿಸಿದರು. ನಾವಲಗಿ ಗ್ರಾಮ ಪಂಚಾಯಿತಿ ಸದಸ್ಯ ದಾನಪ್ಪ ಆಸಂಗಿ ನಿರೂಪಿಸಿದರು. ಡಾ. ಬಂಕೀಮಚಂದ್ರ ಜಂಬಗಿ ವಂದಿಸಿದರು. ಜಮಖಂಡಿ ಕಸಾಪ ಮಾಜಿ ಅಧ್ಯಕ್ಷ ಮಧುಕೇಶ ಬೆಳಗಲಿ, ಎಸ್.ಬಿ. ಹಾವಿನಾಳ,ಮುತ್ತಪ್ಪ ಅಂಗಡಿ, ಉಮಾಶಂಕರ್ ಚನಾಳ, ಮಹಾದೇವ ಕವಿಶೆಟ್ಟಿ, ಡಿ.ಬಿ. ಜಾಯಗೊಂಡ, ಬಸವರಾಜ ದುಂಬಾಳೆ, ಮಹಾಶಾಂತ ಶೆಟ್ಟಿ, ಮುತ್ತಪ್ಪ ಮೂಸಿ ಇನ್ನಿತರರು ಪಾಲ್ಗೊಂಡಿದ್ದರು.

# ಆಯುರ್ವೇದ ಜಾಗೃತಿ ಜಾಥಾಕ್ಕೆ ಚಾಲನೆ



**ಬಾಗಲಕೋಟೆ:** ಧನ್ವಂತರಿ ದಿನಾಚರಣೆ ಹಾಗೂ 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಆಯುರ್ವೇದ ಜಾಗೃತಿ ಜಾಥಾಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಶನಿವಾರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಆಯುಷ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಆಯುರ್ವೇದ ಜಾಗೃತಿ ಜಾಥಾ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನಗರದ ನಾನಾ ಕಡೆ ಸಂಚರಿಸಿ ಕೊನೆಗೆ ಸರ್ಕಾರಿ ಆಯುರ್ವೇದ ಆಸ್ಪತ್ರೆಗೆ ಮುಕ್ತಾಯಗೊಂಡಿತು. ಜಾಥಾದುದ್ದಕ್ಕೂ ಸಾರ್ವಜನಿಕರ ಆರೋಗ್ಯಕ್ಕಾಗಿ ಆಯುರ್ವೇದ ಮದ್ದು, ಸಮತೋಲನ ಆಹಾರ ಆಯುರ್ವೇದ ಆಧಾರ, ಹತ್‌ಬುಕ್ ಮಿನಬುಕ್, ಜನರಿಗಾಗಿ ಜಗತ್ತಿಗಾಗಿ ಆಯುರ್ವೇದ ಸೇರಿದಂತೆ ಅನೇಕ ಘೋಷವಾಕ್ಯಗಳನ್ನು ಕೂಗಲಾಯಿತು.


ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ, ಜಿಲ್ಲಾ ಆಯುಷ ಅಧಿಕಾರಿ ಎಸ್.ಜಿ.ಮಠ ಸೇರಿದಂತೆ ಇತರರು ಇದ್ದರು.

## ಐಟಿಐ ಪ್ರವೇಶಾತಿ

**ಕಾರವಾರ:** ಪ್ರಸಕ್ತ ಸಾಲಿನಲ್ಲಿ ಕಾರವಾರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಬಾಕಿ ಉಳಿದಿರುವ ಸಿಟ್‌ಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು. ಅರ್ಜಿಯನ್ನು ಕಾಲೇಜಿನಿಂದ ಪಡೆದು ಭರ್ತಿಮಾಡಿ ಸೆ.30 ರೊಳಗಾಗಿ ಪ್ರವೇಶ ಪಡೆಯಬಹುದು. ಪ್ರವೇಶಾತಿ ಪಡೆಯುವ ಸಮಯದಲ್ಲಿ ಆಧಾರ್ ನಂಬರ್, ರೇಷನ್ ಕಾರ್ಡ್ ನಂಬರ್ ಇ- ಮೇಲ್, ಮೊಬೈಲ್ ನಂಬರ್ ಕಡ್ಡಾಯವಾಗಿ ನಮೂದಿಸಬೇಕು, ಇ-ಮೇಲ್ ಮತ್ತು ಮೊಬೈಲ್ ನಂಬರ್ ತರಬೇತಿ ಮುಗಿಸಿ ಪರೀಕ್ಷೆಗೆ ಹಾಜರಾಗುವರೆಗೂ ಬದಲಾಯಿಸದಿರಲು ತಿಳಿಸಲಾಗಿದೆ. ಮಾಹಿತಿಗಾಗಿ ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆ, ಬಾಡ ನಂದನಗದ್ದಾ ಕಾರವಾರ ದೂ.ಸಂ: 9448635044, 7676993526, 8861930372 ನ್ನು ಸಂಪರ್ಕಿಸುವಂತೆ ತಿಳಿಸಿದ್ದಾರೆ.

# ರಾಣಿ ಚನ್ನಮ್ಮ ಸಹಕಾರಿ ಸಂಘದ ವಾರ್ಷಿಕ ಮಹಾಸಭೆ

**ಮುದ್ದೆಬಿಹಾಳ:** ಪಟ್ಟಣದ ಕಿತ್ತೂರ ರಾಣಿ ಚನ್ನಮ್ಮ ಪತ್ತಿನ ಸಹಕಾರಿ ಸಂಘದ 15 ನೇ ವರ್ಷದ ವಾರ್ಷಿಕ ಮಹಾಸಭೆ ಶನಿವಾರರಂದು ಜರುಗಿತು.




ಸಂಘದ ನೂತನ ಸಭಾಭವನದಲ್ಲಿ ಜರುಗಿದ ಈ ಮಹಾಸಭೆಯಲ್ಲಿ ಅಧ್ಯಕ್ಷರಾದ ರಮೇಶ ಕಮತ ಅವರು ಮಾತನಾಡಿ ಕಳೆದ 15 ವರ್ಷಗಳಿಂದ ಸಂಘದ ಆರ್ಥಿಕ ಪ್ರಗತಿಗೆ ಸಂಘ ಸ್ಥಾಪಿಸಿದ ಸಮಾಜದ ಹಿರಿಯರ ಮತ್ತು ಸರ್ವ ಸದಸ್ಯರ ಶ್ರಮವಿದ್ದು ಸಂಘದ ಉನ್ನತ ಪ್ರಗತಿಗೆ ಸದಸ್ಯರು ಇನ್ನೂ ಹೆಚ್ಚಿನ ಶೇರುದಾರರನ್ನಾಗಿ ಮಾಡಬೇಕು ಮತ್ತು ಹೆಚ್ಚು ಸದಸ್ಯತ್ವವನ್ನು ಮಾಡಲು ಶ್ರಮಿಸಬೇಕಿದೆ ಎಂದ ಅವರು ಸಂಘದಲ್ಲಿ ಒಟ್ಟು 1566 ಸದಸ್ಯರಿದ್ದು ಪ್ರಸಕ್ತ 2024-25 ನೇ ಸಾಲಿನಲ್ಲಿ ಸಂಘ 9 ಲಕ್ಷ ರೂ ನಿವ್ವಳ ಲಾಭ ಗಳಿಸಿದೆ ಎಂದು ಹೇಳಿದರು.

ನಿರ್ದೇಶಕರಾದ ಪ್ರಭುಗೌಡ ಪಾಟೀಲ ಅವರು ಮಾತನಾಡಿ ವಾರ್ಷಿಕ ವರದಿ ಅಡಾವೆ ಪತ್ರಿಕೆ ಲಾಭ ಹಾನಿ ಆಯ್ಯವ್ಯಯ ಶೇರು ಭಂಡವಾಳ ಕಾಯ್ದಿಟ್ಟ ನಿಧಿ ಠೇವು, ಸಾಲಮುಂಗಡ ವಿವರಿಸಿ ಸಂಘದಿಂದ ವಾಹನ ಯಂತ್ರೋಪಕರಣಕ್ಕೆ ಸಣ್ಣ ವ್ಯಾಪಾರಸ್ಥರಿಗೆ ಅನುಕೂಲವಾಗುವ ವಯಕ್ತಿಕ ಸಾಲ ನೀಡಲಾಗುತ್ತಿದೆ ಎಂದರು.

ಸಮಾಜದ ಮುಖಂಡರು ಹಾಗೂ ಪಂಚಗ್ಯಾರಂಟಿ ಅನುಷ್ಠಾನ ತಾಲೂಕಾ ಅಧ್ಯಕ್ಷರಾದ ಶಿವಶಂಕರ ಹಿರೇಗೌಡರ ಹಾಗೂ ಸಂಘದ ನಿಕಟಪೂರ್ವ ವ್ಯವಸ್ಥಾಪಕರಾದ ಬಿ.ಎಂ. ರಾಂಪೂರ ಅವರು ಮಾತನಾಡಿ ಸಂಘ ಆರ್ಥಿಕ ಪ್ರಗತಿಯತ್ತ ಸಾಗಿದೆ ಇದಕ್ಕೆ ಶ್ರಮಿಸಿದ ಸಂಘದ ಅಧ್ಯಕ್ಷರು ಹಾಗೂ ಸದಸ್ಯರಿಗೆ ಅಭಿನಂದನೆ ಸಲ್ಲಿಸಿದರಲ್ಲದೇ ಪುಟ್ಟ ಹೆಜ್ಜೆಯೊಂದಿಗೆ ಆರಂಭವಾದ ಈ ಸಂಘ ಏಳ್ಗೆ ಯಶಸ್ಸಿನತ್ತ ಸಾಗಲು ಸಂಘದ ಹಿರಿಯರ ಪ್ರಾಮಾಣಿಕತೆ ಹಾಗೂ ದಕ್ಷತೆ ಕಾರಣವಾಗಿದೆ ಎಂದರು.

ಶರಣಗೌಡ ಪಾಟೀಲ 2023-24 ಸಭೆಯ ನಡುವಳಿಯನ್ನು ಓದಿದರು. ವ್ಯವಸ್ಥಾಪಕ ವಿರೇಶ ಹುನಗುಂದ ವಿಷಯ ಮಂಡನೆ ಮಾಡಿದರು. ಇದೇ ಸಮಯದಲ್ಲಿ ಸಂಘದಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ನೀಡಿ ಸನ್ಮಾನಿಸಿ ಗೌರವಿಸಲಾಯಿತಲ್ಲದೇ ನಿವೃತ್ತ ಪ್ರಾಚಾರ್ಯರಿಗೆ ಮತ್ತು ಸಂಘದ ಉತ್ತಮ ಗ್ರಾಹಕರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಈ ಸಭೆಯಲ್ಲಿ ಉಪಾಧ್ಯಕ್ಷರಾದ ಬಸವರಾಜ ಗೋನಾಳ, ನಿರ್ದೇಶಕರಾದ ಶರಣಪ್ಪ ಹೊಳಿ, ಪರಶುರಾಮ ಢವಳಗಿ, ಸುಭಾಸ ಬಿದರಕುಂದಿ, ಅಶೋಕ ಕ್ವಾಟಿ, ಮಹಾಂತೇಶ ನಿಡಗುಂದಿ, ಬೋರಮ್ಮ ಸಾಲವಾಡಗಿ, ಗುರುಬಾಯಿ ಹೊಸಮನಿ, ಹಣಮಂತ್ರಾಯ ಬಿರಾದಾರ, ಮುಖಂಡರಾದ ಕಾಮರಾಜ ಬಿರಾದಾರ, ಅಮರೇಶ ಗೂಳಿ, ಶರಣಗೌಡ ಬೂದಿಹಾಳ, ಮಲ್ಲಣ್ಣ ಹತ್ತಿ, ಜೆ.ಸಿ. ಅಂಗಡಿ, ವಿರೇಶ ಢವಳಗಿ, ವಿರೇಶ ಹಡಲಗೇರಿ, ಹಾಗೂ ಸಂಘದ ಸದಸ್ಯರು ಭಾಗವಹಿಸಿದ್ದರು.

ನಿರ್ದೇಶಕರಾದ ಅನೀಲ್ ಪಾಟೀಲ ಸ್ವಾಗತಿಸಿದರು. ಬಿ.ಎಂ. ಪಾಟೀಲ ಪ್ರಾರ್ಥಿಸಿದರು. ಸಿ.ಜಿ. ನಾಗರಾಳ ಹಾಗೂ ಎಂ.ಬಿ. ಪಾಟೀಲ ನಿರೂಪಿಸಿದರು. ಶಿವಾನಂದ ಕೂಡಗಿ ವಂದಿಸಿದರು.

# ಅಂತರಾಷ್ಟ್ರೀಯ ಹಾವು ಕಡಿತದ ಜಾಗೃತಿ ದಿನ

**ಧಾರವಾಡ:** ಜಿಲ್ಲಾಡಳಿತ, ಜಿಲ್ಲಾ ಪಂಚಾ ಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ, ಜಿಲ್ಲಾ ಮಾಹಿತಿ ಶಿಕ್ಷಣ ಸಂವಹನ ವಿಭಾಗ, ಸರ್ಕಾರಿ ಪ್ರಥಮ ದರ್ಜೆ ಕಾಲೇಜ್, ಯುವ ರೆಡ್‌ಕ್ರಾಸ್ ಘಟಕ, ಎನ್.ಎಸ್.ಎಸ್ ಘಟಕಗಳು ಇವುಗಳ ಸಂಯುಕ್ತ ಆಶ್ರಯದಲ್ಲಿ "ಅಂತರಾಷ್ಟ್ರೀಯ ಹಾವು ಕಡಿತ ದಿನ"ದ ಅಂಗವಾಗಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.



ಧಾರವಾಡ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಎಸ್.ಎಮ್ ಹೊನಕೇರಿ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಹಾವು ಕಡಿತದ ಸಂದರ್ಭದಲ್ಲಿ ಜನರು ಸಾಮಾನ್ಯವಾಗಿ ಮಾಡುವ ಕೆಲ ತಪ್ಪುಗಳು ಜೀವಕ್ಕೆ ಅಪಾಯಕಾರಿಯಾಗುತ್ತವೆ. ಕಡಿದ ಭಾಗವನ್ನು ಬಲವಾಗಿ ಕಟ್ಟಿ ರಕ್ತ ಹರಿವನ್ನು ನಿಲ್ಲಿಸುವುದು, ಕತ್ತರಿಸಿ ವಿಷವನ್ನು ಹೊರ ತೆಗೆದು ಹಾಕಲು ಯತ್ನಿಸುವುದು ಅಥವಾ ಮಂತ್ರ - ತಂತ್ರಗಳಿಂದ ಚಿಕಿತ್ಸೆ ಪಡೆಯುವುದು ಸುರಕ್ಷಿತವಲ್ಲ, ತಕ್ಷಣವೇ ಬಾಧಿತ ವ್ಯಕ್ತಿಯನ್ನು ಆಸ್ಪತ್ರೆಗೆ ಕರೆ ತರಬೇಕೆಂದು ಹೇಳುತ್ತಾ ವಿಶ್ವ ಆರೋಗ್ಯ ಸಂಸ್ಥೆ ವರದಿ ಅನುಸಾರ ವಿಶ್ವದಾದ್ಯಂತ ಪ್ರತಿ ವರ್ಷ ಸುಮಾರು 54 ಲಕ್ಷ ಜನರು ಹಾವು ಕಡಿತಕ್ಕೆ ಒಳಗಾಗುತ್ತಾರೆ. 80 ಸಾವಿರಕ್ಕೂ ಹೆಚ್ಚು ಜನರು ಪ್ರಾಣ ಕಳೆದುಕೊಳ್ಳುತ್ತಾರೆ ಮತ್ತು ಬದುಕುಳಿದ ಅನೇಕರು ಜೀವನ ಪರ್ಯಂತ ಸವಾಲುಗಳನ್ನು ಎದುರಿಸುತ್ತಾರೆ ಎಂದು ತಿಳಿಸಿದರು.

ಡಾ. ಕಿರಣ ಕುಲಕರ್ಣಿ ಎಸ್.ಬಿ.ಸಿ.ಸಿ ನೂಡಲ್ ಅಧಿಕಾರಿಗಳು ಜಿಲ್ಲಾ ಆಸ್ಪತ್ರೆ, ಧಾರವಾಡ ಇವರು ಮಾತನಾಡಿ ಹಾವು ಕಡಿದಾಗ ಮೊದಲಿಗೆ ಮಾಡಬೇಕಾದದ್ದು - ಬಾಧಿತನನ್ನು ಸಮಾಧಾನ ಪಡಿಸಿ, ಅವನ ಚಲನೆ ಕಡಿಮೆ ಮಾಡಿ, ಕಡಿತದ ಭಾಗವನ್ನು ಸ್ವಚ್ಛ ಬಟ್ಟೆಯಿಂದ ಸಡಿಲವಾಗಿ ಕಟ್ಟಿ, ತಕ್ಷಣವೇ ಸಮೀಪದ ಆಸ್ಪತ್ರೆಗೆ ಸಾಗಿಸುವುದಾಗಿದೆ. ಮುಖ್ಯವಾಗಿ ಹಾವುಗಳ ಬಗ್ಗೆ ಇರುವ ಅನೇಕ ಅಂಧಶ್ರದ್ದೆಗಳನ್ನು ದೂರವಿಡಬೇಕು, ಮಂತ್ರೋಪಚಾರಣೆ ಮಾಡುವುದು, ಧಾರ್ಮಿಕ ಸ್ಥಳಗಳಿಗೆ ಕರೆದೊಯ್ಯುವುದು ಇತ್ಯಾದಿ ಕ್ರಮಗಳು ಯಾವುದೇ ಪ್ರಯೋಜನಕಾರಿಯಾಗುವುದಿಲ್ಲ. ಹಾವು ಕಡಿತಕ್ಕೆ ಪರಿಣಾಮಕಾರಿ ಚಿಕಿತ್ಸೆ ಎಂದರೆ, ಆಂಟಿವೆನಮ್ (ವಿಷ ನಿರೋಧಕ) ಮಾತ್ರ. ಇದು ಸರಿಯಾದ ಸಮಯದಲ್ಲಿ ದೊರಕಿದರೆ ಜೀವ ಉಳಿಯುವುದು ಖಚಿತ. ಆದ್ದರಿಂದ ಎಲ್ಲರೂ ಜಾಗೃತರಾಗಿರಬೇಕು, ಅಂಧ ನಂಬಿಕೆಗಳನ್ನು ಬಿಟ್ಟು ಸರಿಯಾದ ವೈದ್ಯಕೀಯ ಚಿಕಿತ್ಸೆಯ ಕಡೆಗೆ ಒತ್ತು ಕೊಡಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ, ಪ್ರಾಂಶುಪಾಲರಾದ ಡಾ. ಜಿ.ಕೆ. ಬಡಿಗೇರ ಮಾತನಾಡಿ ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡುವ ಚಿಕಿತ್ಸೆಯ ಸದುಪಯೋಗಪಡಿಸಿಕೊಳ್ಳಬೇಕು. ಹಾವು ಕಚ್ಚಿದಾಗ ಏನೆಲ್ಲಾ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎನ್ನುವ ಕುರಿತು ವೈದ್ಯಾಧಿಕಾರಿಗಳು ನೀಡಿದ ಮಾಹಿತಿಯನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾರ್ಯಕ್ರಮದ ಮಹತ್ವ ಕುರಿತು ಕಾರ್ಯಕ್ರಮ ಅಧಿಕಾರಿ ಡಾ. ಡಿ.ಜಿ.ತಾಪಸ್, ಪ್ರಾಸ್ತಾವಿಕ ಮಾತುಗಳನ್ನು ಆಡಿದರು.

ಯುವ ರೆಡ್ ಕ್ರಾಸ್ ಘಟಕದ ಸಂಚಾಲಕರಾದ ಡಾ. ಲತಾ ಎನ್. ಕಿಲ್ಲೆದಾರ ಸ್ವಾಗತಿಸಿದರು. ಎನ್.ಎಸ್.ಎಸ್. ಘಟಕ-02 ರ ಕಾರ್ಯಕ್ರಮ ಅಧಿಕಾರಿ ಡಾ. ಜಯಾನಂದ ವ್ಹಿ. ಹಟ್ಟಿ ನಿರೂಪಿಸಿದರು. ಎನ್.ಎಸ್.ಎಸ್. ಘಟಕ-03 ರ ಕಾರ್ಯಕ್ರಮ ಅಧಿಕಾರಿ ಡಾ. ವಿಜಯಲಕ್ಷ್ಮೀ ದಾನರೆಡ್ಡಿ ವಂದಿಸಿದರು. ಅಕ್ಷತಾ ಮಡಿವಾಳ ಪ್ರಾರ್ಥನೆ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ. ಮಂಜುನಾಥ ಎಸ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಆರ್. ಪಾತ್ರೋಟ, ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಎಮ್.ಎನ್ ಅಗಡಿ, ಡಾ. ಇಬ್ರಾಹಿಮ್ ಸೌದಾಗರ, ಡಾ. ಸರಸ್ವತಿ ಪಾಟೀಲ, ರೇಖಾ ಬಾಡಗಿ, ಡಾ. ಶ್ವೇತಾ ಚುಳಕಿ, ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ನಮೂನೆ-VII**

**ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರದ ಹಕ್ಕು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ-2013 ಕಲಂ.19(1) ಮೇರೆಗೆ.**

**ಸಂ. ಆರ್‌ಡಿ 83 ಎಕ್ಯೂಎಲ್- 2025** **ದಿನಾಂಕ:-09-06-2025**

ಸಾರ್ವಜನಿಕ ಉದ್ದೇಶದ **ಶ್ರೀ ರಾಮೇಶ್ವರ ಏತ ನೀರಾವರಿ ಯೋಜನೆಯಡಿಯಲ್ಲಿ ಬರುವ ಕಿ.ಮೀ.2+000 ರಿಂದ 4+000 ರ** ವರೆಗಿನ ನಿರ್ಮಾಣಕ್ಕಾಗಿ ಬೆಳಗಾವಿ ಜಿಲ್ಲೆಯ ಗೋಕಾಕ ತಾಲೂಕಿನ ಕಳ್ಳಿಗುದ್ದಿ ಗ್ರಾಮದ ಈ ಕೆಳಗಿನ ಅನುಸೂಚಿಯಲ್ಲಿ ಕಾಣಿಸಿರುವ ಜಮೀನುಗಳ ಸ್ವಾಧೀನತೆಯ ಅವಶ್ಯಕತೆ ಕಂಡು ಬಂದಿದ್ದರಿಂದ ಹಾಗೂ ಈ ಯೋಜನೆಗೆ **ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರದ ಹಕ್ಕು, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕಾಯ್ದೆ-2013** (2013 ರ ಕೇಂದ್ರ ಅಧಿನಿಯಮ ಸಂಖ್ಯೆ:30 ಕ್ಕೆ ) ಅನುಗುಣವಾಗಿ ಕರ್ನಾಟಕ ರಾಜ್ಯಕ್ಕೆ ಅನ್ವಯಿಸುವಂತೆ ದಿನಾಂಕ:23-07-2019 ರಿಂದ ಜಾರಿಗೆ ಬಂದಿರುವ **ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರದ ಹಕ್ಕು, ಪುನರ್ ವಸತಿ ಮತ್ತು ಪುನರ್ ನಿರ್ಮಾಣ (ಕರ್ನಾಟಕ ತಿದ್ದುಪಡಿ) ಕಾಯ್ದೆ-2019** (2019 ರ ಕರ್ನಾಟಕ ಅಧಿನಿಯಮ ಸಂಖ್ಯೆ:16) ರ ಕಲಂ.10(ಎ) ರಡಿ ಮೂಲ ಕಾಯ್ದೆಯ ಅಧ್ಯಾಯ-II & III ರಲ್ಲಿನ ಉಪಬಂಧಗಳನ್ನು ಅನ್ವಯಿಸುವದರಿಂದ ವಿನಾಯಿತಿ ನೀಡಿ ಸಂಖ್ಯೆ:16/2019 ದಿನಾಂಕ:16-07-2019 ರ ಸರ್ಕಾರದ ಅಧಿಸೂಚನೆಯನ್ನು ಹೊರಡಿಸಿದ್ದು ಈ ಅಧಿಸೂಚನೆಗೆ ರಾಜ್ಯಪತ್ರದಲ್ಲಿ ದಿನಾಂಕ:12-05-2023 ರಂದು ಪ್ರಕಟಗೊಂಡಿದ್ದರ ಮೇರೆಗೆ 2013 ರ ಮೂಲ ಕಾಯ್ದೆಯ ಕಲಂ.11(1) ರಡಿ ಕ್ರಮಾಂಕ: ಭೂಸ್ವಾ/ರಾಯೋ/ಸಿಆರ್-19/2017-18 ದಿನಾಂಕ:17-10-2023 ರಲ್ಲಿ ಅಧಿಸೂಚಿಸಿ ಪ್ರಕಟಿಸಿದಂತೆ ಕಲಂ.15(1) ರನ್ವಯ ಆಕ್ಷೇಪಣೆಗಳು ಸ್ವೀಕೃತವಾಗದೇ ಇರುವದರಿಂದ ವಿಚಾರಣಾ ವರದಿಯನ್ನು ಸರ್ಕಾರದ ಪತ್ರ ಸಂಖ್ಯೆ: ಕಂಇ/ಭೂಸ್ವಾ-2ಅ/ಸಿಆರ್-46/2023-24/79 ದಿನಾಂಕ:04-04-2024 ರಲ್ಲಿ ಒಪ್ಪಿ ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರೆಸಲು ನಿರ್ದೇಶನ ನೀಡಲಾಗಿದೆ.

ಸದರಿ ಅಧಿನಿಯಮ ಕಲಂ.18 ರನ್ವಯ ಪುನರ್‌ವಸತಿ ಹಾಗೂ ಪುನರ್‌ನಿರ್ಮಾನ ಸಾರಾಂಶದ ಅನುಮೋದಿತ ಕರಡು ಯಾದಿಯನ್ನು ಕಲಂ.19(2) ರನ್ವಯ ಘೋಷಿಸಲಾಗಿದೆ.

**ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರದ ಹಕ್ಕು, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕಾಯ್ದೆ-2013 ರ** ಕಲಂ.19(1) ರಡಿ ಕೆಳಗೆ ಸೂಚಿಸಿರುವ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳುವುದು ಅಗತ್ಯವಿದೆಯೆಂದು ಕರ್ನಾಟಕ ಸರ್ಕಾರಕ್ಕೆ ಮನದಟ್ಟಾಗಿರುವದರಿಂದ ಮೇಲೆ ತಿಳಿಸಿರುವ ಉದ್ದೇಶಕ್ಕೆ ಜಮೀನುಗಳು ಅಗತ್ಯವಾಗಿವೆಯಂದು ಸದರಿ ಅಧಿನಿಯಮದ 19(1) ನೇ ಪ್ರಕರಣದ ಮೇರೆಗೆ ಈ ಮೂಲಕ ಘೋಷಿಸಲಾಗಿದೆ.

ಅದರಂತೆ ಸದರಿ ಭೂಸ್ವಾಧೀನ ಅಧಿನಿಯಮ 3 ನೇ ಪ್ರಕರಣದ (ಜಿ) ಖಂಡದ ಮೇರೆಗೆ ವಿಶೇಷ ಭೂಸ್ವಾಧೀನಾಧಿಕಾರಿಗಳು, ಹಿಡಕಲ್ ಡ್ಯಾಮ್ ಇವರನ್ನು ಸದರಿ ಜಮೀನುಗಳ ಸ್ವಾಧೀನತೆಯ ಮುಂದಿನ ಎಲ್ಲಾ ಕಾನೂನು ಕ್ರಮ ಮತ್ತು ಪ್ರಕ್ರಿಯೆಗಳ ಕುರಿತಂತೆ ಜಿಲ್ಲಾಧಿಕಾರಿಯವರ ಪ್ರಕಾರ್ಯವನ್ನು ನಿರ್ವಹಿಸುವ ಸಲುವಾಗಿ ಈ ಮೂಲಕ ನೇಮಕ ಮಾಡಲಾಗಿದೆ

ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂ.ಇ.04ಎಕ್ಯೂಬಿ.2020 ದಿನಾಂಕ:28-03-2022 ರನ್ವಯ ಸದರಿ ಯೋಜನೆಗೆ 2013 ರ ಮೂಲ ಕಾಯ್ದೆಯ ಅಧ್ಯಾಯ- II & III ರಲ್ಲಿನ ಉಪಬಂಧಗಳನ್ನು ಅನ್ವಯಿಸುವದರಿಂದ ವಿನಾಯಿತಿ ನೀಡಲಾಗಿರುವುದರಿಂದ 2013 ರ ಮೂಲ ಕಾಯ್ದೆಯ ಅಧ್ಯಾಯ II & III ರಲ್ಲಿನ ಪುನರ್ವಸತಿ ಮತ್ತು ಪುನರ್‌ನಿರ್ಮಾಣದ ಅವಕಾಶಗಳ ಬದಲಾಗಿ ನೀಡಲಾಗಿರುವ ಒಂದು ಇಡಿಗಂಟು ಮೊತ್ತವನ್ನು ' ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರದ ಹಕ್ಕು, ಪುನರ್‌ವಸತಿ ಮತ್ತು ಪುನರ್‌ನಿರ್ಮಾನ (ಕರ್ನಾಟಕ ತಿದ್ದುಪಡಿ) ನಿಯಮಗಳು-2020 ರ ನಿಯಮ 29(5) ರಂತೆ ನಿಗಧಿಪಡಿಸಲು ತೀರ್ಮಾನಿಸಲಾಗಿದೆ.

ಸದರಿ ಅಧಿಸೂಚನೆಯಲ್ಲಿ ಒಳಪಡುವ ಜಮೀನುಗಳ ವಿವರಗಳನ್ನು ಸೂಚಿಸುವ ಒಂದು ನಕ್ಷೆಯನ್ನು ಸಾರ್ವಜನಿಕ ಹಿತಾಸಕ್ತಿಗಾಗಿ ಹಾಗೂ ಸಂಬಂಧಿಸಿದ ಎಲ್ಲಾ ಹಿತಾಸಕ್ತಿದಾರರ ಅವಗಾಹನೆಗಾಗಿ ವಿಶೇಷ ಭೂಸ್ವಾಧೀನಾಧಿಕಾರಿಗಳು, ಹಿಡಕಲ್ ಡ್ಯಾಮ್ ಇವರ ಕಾರ್ಯಾಲಯದಲ್ಲಿ ಇಡಲಾಗಿದೆ.

**: : ಅನೂಸೂಚಿ : :**

**ಜಿಲ್ಲಾ : ಬೆಳಗಾವಿ** **ತಾಲೂಕ : ಗೋಕಾಕ** **ಹೋಬಳಿ : ಕೌಜಲಗಿ** **ಗ್ರಾಮ ಕಳ್ಳಿಗುದ್ದಿ**

**ನಂ.ಎಲ್.ಎಕ್ಯೂ.ಜೆ.ಎಸ್.ಆರ್. 09/17-18**

| ಅ. ನಂ | ಖಾತೆದಾರರು/ಅನುಭವದಾರರ ಹೆಸರುಗಳು | ಸರ್ವೆ ನಂಬರ | ಹಿಸ್ಸಾ ನಂ. | ಜಮೀನಿನ ತರಹೆ | ಭೂಸ್ವಾಧೀನತೆಗೆ ಅವಶ್ಯವಿದ್ದ ಕ್ಷೇತ್ರ ಎ-ಗುಂ-ಆ |
|---|---|---|---|---|---|
| 1 | 2 | 3 | 4 | 5 | 6 |
| 1 | ಬಾಡಗಿ ಬಸವರಾಜ ತಂ ಯಲ್ಲಪ್ಪ<br>ಬಾಡಗಿ ಸುಮಿತ್ರಾ ಬಸವರಾಜ<br>ಕರ್ನಾಟಕ ನೀರಾವರಿ ನಿಗಮ | 99 | 1 | ಖುಷ್ಕಿ | 00-10-00 |
| 2 | ಮಹಾರೆಡ್ಡಿ ಸುಜಾತಾ ಕೊಂ ರಾಮಣ್ಣ<br>ಕರ್ನಾಟಕ ನೀರಾವರಿ ನಿಗಮ | 99 | 2 | ಖುಷ್ಕಿ | 00-10-00 |
| 3 | ಕಮಲದಿನ್ನಿ ಕೃಷ್ಣಪ್ಪ ಲಕ್ಷ್ಮಪ್ಪ | 99 | 5 | ಖುಷ್ಕಿ | 00-11-08 |
| 4 | ಚನ್ನಾಳ ಅವಿನಾಶ ಅಶೋಕ | 100 | 4 | ಖುಷ್ಕಿ | 00-01-00 |
| 5 | ಸಂಕ್ರಿ ಅನೀಲ ಅಪ್ಪಣ್ಣ<br>ಸಂಕ್ರಿ ಅಜೀತ ಅಪ್ಪಣ್ಣ<br>ಸಂಕ್ರಿ ಕಿರಣ ಅಪ್ಪಣ್ಣ | 105 | 1 | ಖುಷ್ಕಿ | 00-06-08 |
| | ಒಟ್ಟು ಕ್ಷೇತ್ರ | | | | 00-39-00 |

**ವಿಶೇಷ ಭೂಸ್ವಾಧೀನಾಧಿಕಾರಿ**
**ಹಿಡಕಲ್ ಡ್ಯಾಂ**

**ಸಹಿ/-**
**ವಿಶೇಷ ಜಿಲ್ಲಾಧಿಕಾರಿಗಳು,**
**(ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ ನಿರ್ಮಾಣ)**
**ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ**

## ಅರ್ಜಿ ಆಹ್ವಾನ

**ಕೊಪ್ಪಳ:** ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ. ನಿಗಮದಿಂದ ನೇರ ಸಾಲ ಯೋಜನೆ, ಡಾ. ಬಾಬು ಜಗಜೀವನ ರಾಂ ಚರ್ಮಕಾರರ ವಸತಿ ಯೋಜನೆ, ಚರ್ಮ ಕುಶಲಕರ್ಮಿಗಳ ಕುಟುಂಬಗಳ ಯುವಜನರಿಗೆ ಹೊಸ ತಂತ್ರಜ್ಞಾನ ವಿನ್ಯಾಸಗಳು ಹಾಗೂ ಮಾರುಕಟ್ಟೆ ಬೇಡಿಕೆಗಳ ಬಗ್ಗೆ ದೆಹಲಿ, ತಮಿಳುನಾಡು, ಮಹಾರಾಷ್ಟ್ರ, ಉತ್ತರಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ತರಬೇತಿ ಪಡೆಯಲು ಅಧ್ಯಯನ ಪ್ರವಾಸ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದ್ದು, ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯಬಹುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 8 ಕೊನೆಯ ದಿನವಾಗಿದ್ದು, ಆನ್‌ಲೈನ್ ಅರ್ಜಿಗಳನ್ನು https://sevasindhu.karnataka.gov.in ಮೂಲಕ ಸಲ್ಲಿಸಬೇಕು. ನಂತರ ಅರ್ಜಿಯ ಪ್ರತಿಯನ್ನು ಜಿಲ್ಲಾ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08392–271741, 9844667691 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಾಯುಕ್ತರಿಂದ ತಾಲ್ಲೂಕು ಭೇಟಿ ಕಾರ್ಯಕ್ರಮ

**ಕಾರವಾರ:** ಲೋಕಾಯುಕ್ತ ಅಧಿಕಾರಿಗಳ ತಾಲ್ಲೂಕು ಭೇಟಿ ಕಾರ್ಯಕ್ರಮವು ಸೆ.30 ರಂದು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಯಲ್ಲಾಪುರ ತಹಶೀಲ್ದಾರ ಕಚೇರಿ ಸಭಾ ಭವನದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆಯಡಿ ಭರ್ತಿ ಮಾಡಿದ ದೂರುಗಳನ್ನು ಸ್ವೀಕಾರ ಮಾಡಿ, ವಿಚಾರಣೆ ನಡೆಸುವರು. ಸರ್ಕಾರಿ ಕಚೇರಿಯಲ್ಲಿ ಸಾರ್ವಜನಿಕ ಕೆಲಸಗಳನ್ನು ನಿರ್ವಹಿಸಲು ಲಂಚಕ್ಕೆ ಬೇಡಿಕೆ ಮತ್ತು ಅರ್ಜಿಗಳ ವಿಲೇವಾರಿ ಮಾಡುವಲ್ಲಿ ಅನಗತ್ಯ ವಿಳಂಬ, ಸರ್ಕಾರಿ ಹಣ ದುರುಪಯೋಗ, ಕರ್ತವ್ಯ ಲೋಪ, ಕಳಪೆ ಕಾಮಗಾರಿ ಮಾಡುವ ಸರ್ಕಾರಿ ಅಧಿಕಾರಿ ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನಿಗಧಿತ ನಮೂನೆ–1 ಮತ್ತು 2 ರಲ್ಲಿ ಭರ್ತಿ ಮಾಡಿ ನೀಡಬಹುದು. ಸಾರ್ವಜನಿಕರು ತಮ್ಮ ದೂರುಗಳು ಇದ್ದಲ್ಲಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪರಿಹಾರ ಕಂಡುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂರವಾಣಿ ಸಂಖ್ಯೆ 08382–295293, 220198, 222250, 222022, 229988 ಗೆ ಸಂಪರ್ಕಿಸಬಹುದು ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದತ್ತಾಂಶ ವಿಶ್ಲೇಷಣೆ ಕುರಿತು ಕಾರ್ಯಾಗಾರ

**ಬಾಗಲಕೋಟೆ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ ಸಂಶೋಧನಾ ವಿಧಾನ ಮತ್ತು ದತ್ತಾಂಶ ವಿಶ್ಲೇಷಣೆ ವಿಷಯದ ಮೇಲೆ ಅಕ್ಟೋಬರ 14 ರಿಂದ 18 ವರೆಗೆ ಐದು ದಿನಗಳ ಕಾಲ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಆಸಕ್ತ ಸ್ನಾತಕೋತ್ತರ ವಿಜ್ಞಾನ, ಸಂಶೋಧನಾ, ಇಂಜಿನೀಯರಿಂಗ್ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು, ಪ್ರಾಧ್ಯಾಪಕರು ಭಾಗವಹಿಸಬಹುದಾಗಿದೆ. ಆಸಕ್ತ ಪ್ರತಿನಿಧಿಗಳು ಅಕ್ಟೋಬರ 13 ರೊಳಗಾಗಿ ಗೂಗಲ್ ಪಾರ್ಮ http://form.gle/UNrBg9wiBzgQBMVD6 ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊನಂ.9620767819ಗೆ ಸಂಪರ್ಕಿಸುವಂತೆ ಅಕಾಡೆಮಿಯ ಸಿಇಓ ಡಾ.ಆನಂದ ಆರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧಡೆ ಆಧಾರ ಸೇವಾ ಕೇಂದ್ರ ಆರಂಭ

**ಗದಗ:** ಪ್ರಧಾನ ಅಂಚೆ ಕಚೇರಿ ಸೇರಿದಂತೆ ಗದಗ–ಬೆಟಗೇರಿ, ಗದಗ ನಗರ, ನರಗುಂದ, ರೋಣ, ಹೊಳೆಆಲೂರ, ಗಜೇಂದ್ರಗಡ, ಶಿರಹಟ್ಟಿ, ಮುಂಡರಗಿ, ಲಕ್ಷ್ಮೇಶ್ವರ, ಬೆಳ್ಳಟ್ಟಿ ಅಂಚೆ ಕಚೇರಿಗಳಲ್ಲಿ ಆಧಾರ ಸೇವಾ ಕೇಂದ್ರ ಆರಂಭಿಸಲಾಗಿದೆ. ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ಹಿನ್ನಲೆಯಲ್ಲಿ ಆಧಾರ ಕಾರ್ಡ್ ತಿದ್ದುಪಡಿ ಸಲುವಾಗಿ ಆಧಾರ ಸೇವಾ ಕೇಂದ್ರ ವಿಶೇಷ ಕೌಂಟರ್ ಸಹ ಆರಂಭಿಸಲಾಗಿದೆ. ಅಂಚೆ ಕಚೇರಿ ಸೇವಾ ಅವಧಿಯಲ್ಲಿ ಆಧಾರ ಸೇವಾ ಕೇಂದ್ರ ಕಾರ್ಯ ನಿರ್ವಹಿಸುತ್ತದೆ. ಹಾಗಾಗಿ ಜನರು ಈ ಸೇವಾ ಕೇಂದ್ರದಗಳ ಸದುಪಯೋಗ ಪದುಕೊಳ್ಳಬೇಕು ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಪ್ರಕಟಣಣೆ ಮೂಲಕ ತಿಳಿಸಿದ್ದಾರೆ.

# ಅಂತರಾಷ್ಟ್ರೀಯ ಹಾವು ಕಡಿತ ಜಾಗೃತಿ ದಿನ

**ಕೊಪ್ಪಳ:** ಮನೆಯ ಸುತ್ತ ಹಾಗೂ ಹೊಲಗಳಲ್ಲಿ ಅನವಶ್ಯಕ ಕಸ ಬೆಳೆಯದಂತೆ, ಇಲಿ ಮತ್ತು ಹೆಗ್ಗಣಗಳಂತಹ ಹಾವಿನ ಆಹಾರವಾಗಬಲ್ಲ ಜೀವಿಗಳ ಓಡಾಟವಿಲ್ಲದಂತೆ ಎಚ್ಚರ ವಹಿಸುವುದರಿಂದ ಹಾವುಗಳ ಸಂಚಾರ ಹಾಗೂ ಕಡಿತದಿಂದ ಪಾರಾಗಬಹುದು ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಕೊಪ್ಪಳ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಗ್ರಾಮ ಮಂಚಾಯತ್ ಕಾರ್ಯಾಲಯ ಹಿರೇವಂಕಲಕುಂಟಾ ಇವರ ಸಂಯುಕ್ತಾಶ್ರಯದಲ್ಲಿ ಸೆ.19 ರಂದು ಉಚ್ಚಲಕುಂಟಾ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತರಾಷ್ಟ್ರೀಯ ಹಾವು ಕಡಿತ ಜಾಗೃತಿ ದಿನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪ್ರತಿ ವರ್ಷ ಸೆಪ್ಟೆಂಬರ್ 19 ರಂದು ಅಂತರಾಷ್ಟ್ರೀಯ ಹಾವು ಕಡಿತ ಜಾಗೃತಿ ದಿನ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಈ ಕಾರ್ಯಕ್ರಮದ ಉದ್ದೇಶ ಹಾವು ಕಡಿತದಿಂದ ಉಂಟಾಗುವ ಮರಣವನ್ನು ನಿಯಂತ್ರಿಸುವ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ. ಭಾರತ ಹಳ್ಳಿಗಳ ದೇಶ ಶೇ.70 ಕ್ಕಿಂತಲೂ ಹೆಚ್ಚು ಜನರು ಕೃಷಿಯಲ್ಲಿ ಅವಲಂಬಿತರಾಗಿದ್ದಾರೆ. ಭಾರತದಲ್ಲಿ ಪ್ರಮುಖ 4 ವಿಷಕಾರಿ ಹಾವುಗಳಾದ ನಾಗರಹಾವು, ಕಟ್ಟಾವು, ಕೊಳಕುಮಂಡಲ ಹಾವು ಹಾಗೂ ಗರಗಸ ಮಂಡಲ ಹಾವು ಕಡಿತದಿಂದ ಸಾವುಗಳಲ್ಲಿ ಶೇ.90 ರಷ್ಟು ಅಧಿಕ ಸಾವುಗಳು ಸಂಭವಿಸುತ್ತವೆ. ಹಾಗಾಗಿ



ಈ 4 ಹಾವುಗಳ ಬಗ್ಗೆ ಎಚ್ಚರಿಗೆ ವಹಿಸಬೇಕು. ಮನೆಯ ಸುತ್ತ ಹಾಗೂ ಹೊಲಗಳಲ್ಲಿ ಅನವಶ್ಯಕ ಕಸ ಬೆಳೆಯದಂತೆ, ಇಲಿ ಮತ್ತು ಹೆಗ್ಗಣಗಳಂತಹ ಹಾವಿನ ಆಹಾರವಾಗಬಲ್ಲ ಜೀವಿಗಳ ಓಡಾಟವಿಲ್ಲದಂತೆ ಎಚ್ಚರ ವಹಿಸುವುದರಿಂದ ಹಾವುಗಳ ಸಂಚಾರ ಹಾಗೂ ಕಡಿತದಿಂದ ಪಾರಾಗಬಹುದು ಎಂದು ಅವರು ಹೇಳಿದರು.

ಹಾವುಗಳಿರುವ ಸಾಧ್ಯತೆ ಹೆಚ್ಚಿರುವ ಸ್ಥಳಗಳಲ್ಲಿ ಕೆಲಸ ಮಾಡುವಾಗ ಶೂಗಳನ್ನು ಬಳಸಬೇಕು. ರಾತ್ರಿ ಮನೆಯ ಹೊರಗೆ ಹಾಗೂ ಹೊಲಗದ್ದೆಗಳಲ್ಲಿ ಮಲಗಬೇಕಾದಾಗ ನೆಲದಲ್ಲಿ ಮಲಗದೆ ಎತ್ತರ ಪ್ರದೇಶದ ಮಂಚ ಬಳಸಬೇಕು. ನೆಲದಲ್ಲಿ ಮಲಗಲೇಬೇಕೆಂದರೆ ಕಡ್ಡಾಯವಾಗಿ ಸೊಳ್ಳೆಪರದೆ ಬಳಸಬೇಕು ಎಂದು ತಿಳಿಸಿದರು. ಹಾವು ಕಡೆದ ವ್ಯಕ್ತಿಯನ್ನು ಗಾಬರಿ ಪಡಿಸದೆ, ಸಮಾಧಾನ ಪಡಿಸಬೇಕು. ಹಾವಿನಿಂದ ನಿಧಾನವಾಗಿ ದೂರ ಸರಿಯಬೇಕು. ರಕ್ತಬಂಧಕಪಟ್ಟಿ ಕಟ್ಟಬಾರದು. ಹಾವು ಕಡಿತಕ್ಕೊಳಗಾದ ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ ಕಚ್ಚಿದ ಭಾಗವನ್ನು ಅಲುಗಾಡದಂತೆ ನೋಡಿಕೊಳ್ಳಬೇಕು. ಗಾಯವನ್ನು ಕತ್ತರಿಸಬಾರದು ಹಾಗೂ ಏನನ್ನೂ ಹಚ್ಚಬಾರದು. ಹಾವು ಕಚ್ಚಿದ ವ್ಯಕ್ತಿಗೆ ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ಕೊಡಿಸಬೇಕು. ನಾಟಿ ಔಷಧ ಅಥವಾ ಅಸುರಕ್ಷಿತ ಚಿಕಿತ್ಸಾ ಪದ್ದತ್ತಿಯನ್ನು ಅವಲಂಬಿಸಬೇಡಿ. ಒಟ್ಟಾರೆಯಾಗಿ ಪ್ರತಿಯೊಬ್ಬರೂ ತಮ್ಮ ತಮ್ಮ ಮನೆಯ ಸುತ್ತ–ಮುತ್ತಲಿನ ಪ್ರದೇಶ ಸ್ವಚ್ಛತೆಯಿಂದ ಇಟ್ಟುಕೊಂಡು ಇದರ ಬಗ್ಗೆ ಇತರರಿಗೂ ಮಾಹಿತಿ ನೀಡಿ, ಜಾಗೃತರಾಗಬೇಕೆಂದು ತಿಳಿಸಿದರು.

ಆರೋಗ್ಯ ನಿರೀಕ್ಷಣಾಧಿಕಾರಿ ಮನಿಷ್ ಇವರು ಆರ್.ಸಿ.ಹೆಚ್, ಕುಟುಂಬ ಕಲ್ಯಾಣ ಕಾರ್ಯಕ್ರಮ, ಮಾನಸಿಕ ಆರೋಗ್ಯ ಕಾರ್ಯಕ್ರಮ ಹಾಗೂ ಸಾಂಕ್ರಾಮಿಕ ರೋಗಗಳ ಕುರಿತು ವಿವರವಾಗಿ ಮಾತನಾಡಿದರು. ಸಿ.ಹೆಚ್.ಓ ರೆಡ್ಡಿ ಇವರು ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ಮಾತನಾಡಿದರು. ಐ.ಟಿ.ಸಿ.ಟಿ ಆಪ್ತಸಮಾಲೋಚಕರಾದ ಬಾಳಪ್ಪ ಹೆಚ್.ಐ.ವಿ, ಏಡ್ಸ್ ನಿಯಂತ್ರಣ ಕುರಿತು ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ರಾಮಪಂಚಾಯತ್ ಸದಸ್ಯರಾದ ಶಾರದ, ಗ್ರಾಮ ಆರೋಗ್ಯ ನೈರ್ಮಲ್ಯ ಸಮಿತಿಯ ಸದಸ್ಯರಾದ ಹನುಮಂತಪ್ಪ, ಆಶಾ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

## ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಹುಕ್ಕೇರಿ ತಾಲೂಕಿನ ಹಂಚನಾಳ ಗ್ರಾಮದಲ್ಲಿ ಪ್ರಸ್ತುತ ಒಂದು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ದಿನಾಂಕ: 18–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಹುಕ್ಕೇರಿ ತಹಶೀಲ್ದಾರ ಕಚೇರಿ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಕರು ಸಾಧಕರಿಗೆ ಮೆಟ್ಟಿಲು, ಸಂಸ್ಕಾರದ ತೊಟ್ಟಿಲು



**ಮಹಾಲಿಂಗಪುರ:** ಶಿಕ್ಷಕರಾದವರು ಹತ್ತುವವರಿಗೆ ಏಣಿಯಾಗಿ, ಸಾಧಕರಿಗೆ ಮೆಟ್ಟಿಲಾಗಿ, ಸಂಸ್ಕಾರದ ತೊಟ್ಟಿಲಾಗಿ ಸೇವೆ ಸಲ್ಲಿಸುವ ಸಾರ್ಥಕ ಜೀವಿಗಳು ಎಂದು ಮಹಾಲಿಂಗಪುರ ಕೆಎಲ್‌ಇ ಕಾಲೇಜಿನ ಉಪನ್ಯಾಸಕ ಶಿವಲಿಂಗ ಸಿದ್ನಾಳ ಹೇಳಿದರು.

ಸಮೀಪದ ನಾಗರಾಳ ಗ್ರಾಮದ ವೀರಭದ್ರೇಶ್ವರ ಗುಡಿ ತೋಟ ನಂ–1 ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಪ್ರಶಸ್ತಿ ಪುರಸ್ಕೃತ ಶಿಕ್ಷಕರ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು.

ಸರಕಾರಿ ಶಾಲೆಗಳು ಉಳಿಯಬೇಕು, ಬೆಳೆಯಬೇಕು. ಕಿರಿಯ ಪ್ರಾಥಮಿಕ ಶಾಲೆಯಾದರೂ ನಾಗರಾಳ ತೋಟ ನಂ–1 ಶಾಲೆಯ ಸಾಧನೆ ಹಿರಿದಾದುದು. ಇಲ್ಲಿ ಕಲಿತ ಮಕ್ಕಳೆಲ್ಲಾ ಜಿಲ್ಲೆ ಮತ್ತು ರಾಜ್ಯಮಟ್ಟದಲ್ಲಿ ಪ್ರತಿಭಾವಂತರಾಗಿ ಸಮಾಜ ಬೆಳಗುತ್ತಿದ್ದಾರೆ. ಈ ಶಾಲೆಯ ಹೆಗ್ಗಳಿಕೆ ಉಳಿಸಲು ಎಸ್‌ಡಿಎಂಸಿ ಮತ್ತು ಊರ ಜನ ಶಾಲಾ ವಾಹನ ವ್ಯವಸ್ಥೆ ಮಾಡಿ ಮಕ್ಕಳ ಸಂಖ್ಯೆ ಹೆಚ್ಚಿಸಬೇಕು ಎಂದರು.

ನಾಗರಾಳ ಗ್ರಾಪಂ ಪಿಡಿಓ ರಂಜಿತಾ ಹತ್ತಿ ಮಾತನಾಡಿ, ಈ ತೋಟದ ಶಾಲೆಯ ಅಭಿವೃದ್ದಿಗೆ ಪೂರಕವಾಗಿ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಭರವಸೆ ನೀಡಿದರು.

ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಶಿಕ್ಷಕರಾದ ರಮೇಶ ಕಂಕಣವಾಡಿ, ಮಹಮದರಫೀಕ್ ನದಾಫ, ಲಕ್ಷ್ಮಣ ಚನ್ನಾಪೂರ, ಮಂಜು ಅಮೋಜಿ ಅವರನ್ನು ಸನ್ಮಾನಿಸಲಾಯಿತು. ಸನ್ಮಾನಿತ ಶಿಕ್ಷಕರು ಮಾತನಾಡಿ, ನಮ್ಮ ಸಮರ್ಪಣಾ ಮನೋಭಾವದ ಸೇವೆ ಗುರುತಿಸಿ ಪ್ರಶಸ್ತಿ ನೀಡಿದ್ದು ಖುಷಿ ತಂದಿದೆ. ಈ ಅಭಿನಂದನಾ ಸಮಾರಂಭದಿಂದ ನಮ್ಮ ಜವಾಬ್ದಾರಿ ಮತ್ತಷ್ಟು ಹೆಚ್ಚಿದೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಬಾಳೇಶ ಮಾಯಪ್ಪಗೋಳ ಅಧ್ಯಕ್ಷತೆ ವಹಿಸಿದ್ದರು. ಎಸ್‌ಡಿಎಂಸಿ ಉಪಾಧ್ಯಕ್ಷ ದುಂಡಪ್ಪ ಜಾಧವ, ಎಸ್‌ಡಿಎಂಸಿ ನಿಕಟಪೂರ್ವ ಅದ್ಯಕ್ಷ ಶ್ರೀಶೈಲ ತೇಲಿ, ಗ್ರಾಪಂ ಸದಸ್ಯ ಮಲ್ಲು ಜಗದಾಳ, ಎಸ್‌ಡಿಎಂಸಿ ಮಾಜಿ ಅಧ್ಯಕ್ಷ ದುಂಡಪ್ಪ ಜಾಧವ, ಶಿಕ್ಷಣಪ್ರೇಮಿ ಮಹಾದೇವ ನ್ಯಾಮಗೌಡರ, ಬೆಳಗಲಿ ಮಾಜಿ ಸಿಆರ್‌ಪಿ ಮಲ್ಲಿಕಾರ್ಜುನ್ ಅರಬಿ, ಜಯಪ್ರಕಾಶ ಆನೂರ, ಶೈಲಾ ನೂಲಿ, ಮಾಲಾಶ್ರೀ ಜಗದಾಳ, ಸಹನಾ ತೇಲಿ ಮತ್ತು ಪಾಲಕರು ಇದ್ದರು.

# ಸಹಕಾರಿ ಸಂಘದ ಚುನಾವಣೆಗೆ ಸಕಲ ಸಿದ್ದತೆ

**ಹುಕ್ಕೇರಿ:** ಸಹಕಾರ ತತ್ವದಡಿ ನಡೆಯುತ್ತಿರುವ ದೇಶದ ಏಕೈಕ್ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಆಡಳಿತ ಮಂಡಳಿಗೆ ಸಪ್ಟಂಬರ 28 ರಂದು ನಡೆಯುವ ಚುನಾವಣೆಗೆ ಸರ್ವಸಿದ್ದತೆ ಮಾಡಿಕೊಳ್ಳಲಾಗಿದೆ ಎಂದು ಚುನಾವಣಾಧಿಕಾರಿ ಹಾಗೂ ಚಿಕ್ಕೋಡಿ ಉಪವಿಭಾಗಧಿಕಾರಿ ಸುಬಾಷ ಸಂಪಗಾವಿ ಹೇಳಿದರು.



ಅವರು ಸಂಘದ ಕಚೇರಿಯಲ್ಲಿ ಪತ್ರಿಕಾಗೋಷ್ಟಿಯಲ್ಲಿ ಮಾಹಿತಿ ನೀಡಿ ಸಪ್ಟಂಬರ 28 ರಂದು 15 ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು ಸಾಮನ್ಯ ಕ್ಷೇತ್ರದಿಂದ , 9 ಜನ, ಮಹಿಳೆ ಕ್ಷೇತ್ರದಿಂದ 2 , ಹಿಂದುಳಿದ ಅ. ವರ್ಗ 1 ಮತ್ತು ಬ ವರ್ಗ 1 ಮತ್ತು ಎಸ್ ಟಿ 1 ಹಾಗೂ ಎಸ್ಸಿ. 1, ಸ್ಥಾನಗಳ ಆಯ್ಕೆ ನಡೆಯಲಿದೆ.

ಹುಕ್ಕೇರಿ ತಾಲೂಕಿನ ವ್ಯಾಪ್ತಿಯಲ್ಲಿ 60 ಸಾವಿರ 46 ಜನ ಮತದಾರಿದ್ದು , 122 ಮತಗಟ್ಟೆಗಳಿವೆ. ಕೊನೆಯ ಹಂತದಲ್ಲಿ ಮತದಾರ ಸಂಖ್ಯೆ ಹೆಚ್ಚಳವಾಗುವ ಸಾದ್ಯತೆಯಿದ್ದು 20 ಮತಗಟ್ಟೆಗಳನ್ನು ಹೆಚ್ಚುವರಿಯಾಗಿ ಮಾಡಿಕೊಳ್ಳಲಾಗಿದೆ.

ಎಲಿಮುನ್ನೋಳಿ ಕ್ರಾಸದಲ್ಲಿರುವ ಬಾಪೂಜಿ ಶಿಕ್ಷಣ ಸಂಸ್ಥೆಯಲ್ಲಿ 1 ರಿಂದ 67 ರವರೆಗೆ (67) ಮತಗಟ್ಟೆ, ಹಾಗೂ ಹುಕ್ಕೇರಿಯ ಎಸ್ ಕೆ ಶಿಕ್ಷಣ ಸಂಸ್ಥೆಯ 68 ರಂದ 122 ವರೆಗೆ ( 55) ಮತಗಟ್ಟೆಗಳಿವೆ. ಮತದಾರ ಸಂಖ್ಯೆಯ ಹೆಚ್ಚಾದಲ್ಲಿ 20 ಹೆಚ್ಚುವರಿ ಮತಗಟ್ಟೆಗಳನ್ನು ವ್ಯವಸ್ಥೆಮಾಡಿಕೊಳ್ಳಲಾಗಿದೆಂದರು. ಸುವ್ಯವಸ್ಥೆ ಹಾಗೂ ಶಾಂತಿಯುತವಾಗಿ ಚುನಾವಣೆ ನಡೆಸುವ ನಿಟ್ಟಿನಲ್ಲಿ 812 ಸಿಬ್ಬಂದಿಯವರು ಕಾರ್ಯ ನಿರ್ವಹಿಸಲಿದ್ದಾರೆ. ಪೋಲಿಸ, ಸಹಾಯವಾಣಿ ಕುಡಿಯುವ ನೀರು, , ಶೌಚಾಲಯ, ವಿದ್ಯುತ್ ಕ್ಯಾಮರಾ ವಿಲಚೇತನರಿಗೆ ಮತ್ತು ವೃದ್ದರಿಗೆ ವೀಲ್ ಚೇಯರ್ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಮತದಾರರ ಮನೆಗೆ ಸಿಬ್ಬಂದಿಯವರು ಮತ ವಿವರಣೆ ಚೀಟಿಯನ್ನು ತಲುಪಿಸಲಿದ್ದಾರೆ. ಸೆಪ್ಟಂಬರ 28 ರಂದು ಮುಂಜಾನೆ 9ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಲಿದೆ. ನಂತರ ಬಾಪೂಜಿ ಶಿಕ್ಷಣ ಸಂಸ್ಥೆಯಲ್ಲಿ ಮತ ಏಣಿಕೆ ನಡೆಯಲಿದೆ. ಒಬ್ಬ ಮತದಾರ 15 ಮತಗಳನ್ನು ಚಲಾವಣೆ ಮಾಡತಕ್ಕದ್ದು, ಅದರಲ್ಲಿ 6 ಕಲರಿನ ಬ್ಯಾಲೇಟ್, ಪೇಪರಗಳಲ್ಲಿ ಕೊಡಲಾಗುವದು. ಬಿಳಿ ಬಣ್ಣದ ಪೇಪರದಲ್ಲಿ ಸಾಮನ್ಯ ಕ್ಷೇತ್ರದ 9 ಮತ, ಪಿಂಕ್ ಕಲರ ಹಾಳೆಯಲ್ಲಿ ಮಹಿಳೆ ಕ್ಷೇತ್ರ 2 ಮತ, ಹಳದಿ ಪೇಪರದಲ್ಲಿ ಹಿಂದುಳಿದ ಅ ವರ್ಗ, 1 ಮತ, ಹಾಗೂ ತಿಳಿಹಸಿರು ಬ ವರ್ಗಕ್ಕೆ 1 ಮತ, ಪರಿಶಿಷ್ಟ ವರ್ಗ, ನೀಲಿ ಬಣ್ಣ, 1 ಮತ, ಹಾಗೂ ಪರಿಶಿಷ್ಟ ಪಂಗಡಕ್ಕೆ ಹಸಿರು ಬಣ್ಣದ ಪೇಪರ 1 ಮತ ಹಾಕುವದು ಕಡ್ಡಾಯವಾಗಿದೆ. ಸಾಮನ್ಯ ಕ್ಷೇತ್ರದಲ್ಲಿ 9 ಮತದ ಬದಲಾಗಿ 10 ಮತ ಹಾಕಿದರೆ ಮತ ಅಸಿಂಧುವಾಗುತ್ತದೆ.ಕಾರಣ ಗ್ರಾಮಗಳಲ್ಲಿ ಅಭ್ಯರ್ಥಿಗಳು ಮತದಾರರಿಗೆ ಜಾಗೃತಿ ಮೂಡಿಸಬೇಕು,

ಚುನಾವಣೆಯ ಆಯೋಗ ನಿಗದಿಪಡಿಸಿದ ಭಾವಚಿತ್ರ ವಿರುವ 11 ಗುರುತಿನ ಚೀಟಿಗಳಲ್ಲಿ ಒಂದನು ಮತಗಟ್ಟೆ ಅಧಿಕಾರಿಗೆ ತೋರಿಸಬೇಕು, ಮತದಾರರಿಗೆ ತಮ್ಮ ಸ್ವಂತ ವಾಹನದಲ್ಲಿ ಬಂದು ಮತ ಚಲಾಯಿಸಬೇಕು, ಸಂಸ್ಥೆಯಿಂದ ಸಾರಿಗೆ ವ್ಯವಸ್ಥೆ ಇರುವದಿಲ್ಲ.

ಸಹಾಯಕ ಚುನಾವಣೆಧಿಕಾರಿ ಹಾಗೂ ವ್ಯವಸ್ಥಾಪಕ ನಿರ್ದೇಶಕ ರವೀಂದ್ರ ಪಾಟೀಲ ಉಪಸ್ಥಿತರಿದ್ದರು.

# ಜಾಬ್‌ಕಾರ್ಡ್ ಹೊಂದಿದ ಕೂಲಿಕಾರರಿಗೆ ಇ-ಕೆವೈಸಿ ಕಡ್ಡಾಯ

**ಕೊಪ್ಪಳ:** ತಾಲ್ಲೂಕಿನ 38 ಗ್ರಾಮ ಪಂಚಾಯಿತಿಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನೋಂದಾಯಿತ ಸಕ್ರಿಯ ಕುಟುಂಬಗಳ ಜಾಬ್ ಕಾರ್ಡಗಳಲ್ಲಿರುವ ಎಲ್ಲಾ ಸದಸ್ಯರು ಸೆಪ್ಟೆಂಬರ್ 30 ರೊಳಗಾಗಿ ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ.

ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿರುವ ಸಿಬ್ಬಂದಿಗಳು, ಬೇರ್‌ಫೂಟ್ ಟೆಕ್ನಿಷಿಯನ್‌ಗಳು, ಜಿಕೆಎಂಗಳಿಗೆ ತರಬೇತಿ ನೀಡುವ ಮೂಲಕ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಮೊದಲನೇ ಹಂತದಲ್ಲಿ ಪ್ರಾಯೋಗಿಕವಾಗಿ ತುಮಕೂರು, ಕೊಪ್ಪಳ, ಕೋಲಾರ, ಹಾಸನ ಹಾಗೂ ಹಾವೇರಿ ಜಿಲ್ಲೆಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತಾಲಯದಿಂದ ಆಯ್ಕೆ ಮಾಡಿಕೊಳ್ಳಲಾಗಿದ್ದು, ನರೇಗಾ ಯೋಜನೆಯಡಿ ಅನುಷ್ಠಾನಗೊಳ್ಳುವ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ ಕೂಲಿಕಾರರ ಪ್ರತಿಯೊಬ್ಬರ ಎಣಿಕೆ ಮೂಲಕ ಎನ್.ಎಂ.ಎಂ. ಎಸ್ ಹಾಜರಾತಿ ಸಂಖ್ಯೆ ಆನ್‌ಲೈನ್‌ನಲ್ಲಿ ತೆಗೆದುಕೊಳ್ಳುತ್ತಿದ್ದು, ಇ–ಕೆವೈಸಿ ಹೊಂದಿರುವವರು ಅವರ ಹಾಜರಾತಿ ತೆಗೆದುಕೊಳ್ಳುವಾಗ ಅವರ ಆಧಾರ್ ನಂಬರ್ ಮತ್ತು ಸ್ಥಳದಲ್ಲಿ ಹಾಜರಿದ್ದವರ ಮುಖ ಹೊಂದಾಣಿಕೆಯಾಗಿದ್ದಲ್ಲಿ ಮಾತ್ರ ಅವರ ಎನ್.ಎಂ.ಎಂ.ಎಸ್ ಪರಿಗಣಿಸಲಾಗುತ್ತದೆ. ಕೊಪ್ಪಳ ತಾಲೂಕಿನಲ್ಲಿ ಒಟ್ಟು 1,11,030 ಸಕ್ರಿಯ ಕೂಲಿಕಾರರಿದ್ದು, ಇಲ್ಲಿಯವರೆಗೆ 43,849 ಕೂಲಿಕಾರರು ಇ–ಕೆವೈಸಿ ಹೊಂದಿದ್ದು, 67,181 ಕೂಲಿಕಾರರು ಇ–ಕೆವೈಸಿ ಹೊಂದುವುದು ಬಾಕಿ ಇರುತ್ತದೆ. ಈಗಾಗಲೇ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಐಇಸಿ ಕಾರ್ಯಕ್ರಮಗಳಾದ ಮೈಕ್ ಮೂಲಕ, ಸ್ವಚ್ಛ ವಾಹಿನಿಯ ಮೂಲಕ ಪ್ರಚಾರ ಕೈಗೊಂಡಿದ್ದು, ತಾಲೂಕಿನಲ್ಲಿ ಬಾಕಿ ಇರುವ ನರೇಗಾ ಕೂಲಿಕಾರರು ತಪ್ಪದೇ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಇ–ಕೆವೈಸಿ ಮಾಡಿಸಬೇಕು.

ಇ–ಕೆವೈಸಿ ಮಾಡಿಸದೇ ಇರುವಂತಹ ಕೂಲಿಕಾರರ ಎನ್.ಎಂ.ಎಂ.ಎಸ್ ನ ಹಾಜರಾತಿಯನ್ನು ಅಕ್ಟೋಬರ್ 1 ರಿಂದ ತೆಗೆದುಕೊಳ್ಳುವದಿಲ್ಲ. ಆದ್ದರಿಂದ ತುರ್ತಾಗಿ ಮಹಾತ್ಮಾ ಗಾಂಧಿ ನರೇಗಾ ಯೋಜನೆಯ ಎಲ್ಲಾ ಕೂಲಿಕಾರರು ನಿಮ್ಮ ಆಧಾರ್ ಕಾರ್ಡ್ ಹಾಗೂ ಜಾಬ್‌ಕಾರ್ಡ್‌ನೊಂದಿಗೆ ನಿಮ್ಮ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಇ–ಕೆವೈಸಿ ಹೊಂದಬೇಕು ಎಂದು ಕೊಪ್ಪಳ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಾಂಧೀಜಿ ಜಯಂತಿ ಅರ್ಥಪೂರ್ಣವಾಗಿ ಆಚರಿಸಿ

**ಕೊಪ್ಪಳ:** ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಯವರ 156ನೇ ಜಯಂತಿಯನ್ನು ಅಕ್ಟೋಬರ್ 2 ರಂದು ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಮಹಾತ್ಮ ಗಾಂಧೀಜಿ ಜಯಂತಿ ಆಚರಣೆ ಹಿನ್ನೆಲೆಯಲ್ಲಿ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಅ. 2 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಯೋಜನೆ ಮಾಡಬೇಕು. ಈ ಕಾರ್ಯಕ್ರಮದಲ್ಲಿ ಗಾಂಧೀಜಿಯವರ ಪ್ರಿಯ ಭಜನೆಗಳು ಹಾಗೂ ಗಾಂಧೀಜಿಯವರ ಕುರಿತು ವಿಶೇಷ ಉಪನ್ಯಾಸ, ವಿವಿಧ ಶಾಲಾ ಕಾಲೇಜುಗಳಲ್ಲಿ ಹಮ್ಮಿಕೊಂಡ ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತ ಮಕ್ಕಳಿಗೆ ಬಹುಮಾನ ವಿತರಣೆ ಸೇರಿದಂತೆ ಇತರೆ ಎಲ್ಲಾ ಕಾರ್ಯಕ್ರಮಗಳಿಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕೆಂದು ಹೇಳಿದರು.

ಅಂದು ಮಾಜಿ ಪ್ರಧಾನಿಗಳಾಗಿದ್ದ ಲಾಲ್ ಬಹದ್ದೂರ್ ಶಾಸ್ತ್ರೀಜಿಯವರ ಜನ್ಮದಿನವೂ ಇದ್ದು, ಕಾರ್ಯಕ್ರಮದಲ್ಲಿ ಗಾಂಧೀಜಿ ಮತ್ತು ಶಾಸ್ತ್ರೀಜಿ ಯವರ ಭಾವಚಿತ್ರಗಳಿಗೆ ಪೂಜೆ, ಪುಷ್ಪಾರ್ಚನೆ ಸಲ್ಲಿಸಬೇಕು. ಗಾಂಧೀಜಿ ಜಯಂತಿ ಪ್ರಯುಕ್ತ ಜಿಲ್ಲಾಡಳಿತ ಭವನದ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮವನ್ನು ಸೆಪ್ಟೆಂಬರ್ 25 ರಂದು ಬೆಳಿಗ್ಗೆ 8 ಗಂಟೆಗೆ ಹಮ್ಮಿಕೊಳ್ಳಲಾಗುತ್ತಿದ್ದು, ಎಲ್ಲಾ ಅಧಿಕಾರಿಗಳು ತಮ್ಮ ಅಧೀನ ಸಿಬ್ಬಂದಿಗಳೊಂದಿಗೆ ಕಡ್ಡಾಯವಾಗಿ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು. ಅ. 2ರಂದು ಗಾಂಧೀ ಜಯಂತಿ ದಿನದಂದು ತಮ್ಮ ಕಛೇರಿಗಳಲ್ಲಿ ಸ್ವಚ್ಛತಾ ಕಾರ್ಯವನ್ನು ಹಮ್ಮಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಮಾತನಾಡಿ, ಅಕ್ಟೋಬರ್ 2ರಂದು ನಡೆಯುವ ಮಹಾತ್ಮ ಗಾಂಧೀಜಿ ಜಯಂತ್ಯೋತ್ಸವ ಕಾರ್ಯಕ್ರಮಕ್ಕಾಗಿ ವಹಿಸಿದ ಜವಾಬ್ದಾರಿಯನ್ನು ಆಯಾ ಇಲಾಖೆಗಳ ಅಧಿಕಾರಿಗಳು ಮುತುವರ್ಜಿ ವಹಿಸಿ ನಿರ್ವಹಣೆ ಮಾಡಬೇಕು. ವೇದಿಕೆಯ ಕಾರ್ಯಕ್ರಮವು ಶಿಸ್ತುಬದ್ಧವಾಗಿ ನಡೆಯಬೇಕು. ಮಹಾತ್ಮ ಗಾಂಧೀಜಿಯವರು ಖಾದಿ ಮತ್ತು ಸ್ವದೇಶಿ ವಸ್ತುಗಳ ಬಳಕೆಯ ಕುರಿತು ವಿಶೇಷ ಸಂದೇಶ ನೀಡಿದ್ದಾರೆ. ಎಲ್ಲಾ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಅ.2 ರಂದು ಜಿಲ್ಲಾಡಳಿತ ಭವನದಲ್ಲಿ ಆಡಿಟೋರಿಯಂ ಹಾಲ್‌ನಲ್ಲಿ ನಡೆಯುವ ವೇದಿಕೆ ಕಾರ್ಯಕ್ರಮದಲ್ಲಿ ಎಲ್ಲರೂ ಕಡ್ಡಾಯವಾಗಿ ಹಾಜರಿರಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ನಿರ್ಮಲಾ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತ ಕುಮಾರ್, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಡಿ.ಮಂಜುನಾಥ, ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುರೇಶ್ ಜಿ., ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ್ ಸೇರಿದಂತೆ ಜಿಲ್ಲಾ ಮಟ್ಟದ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಗೋದಾವರಿ ಸಕ್ಕರೆ ಕಾರ್ಖಾನೆಗೆ ಪ್ಲಾಟಿನಂ ಅವಾರ್ಡ್




**ಸಮೀಪದ ಸಮೀರವಾಡಿಯ ಗೋದಾವರಿ ಸಕ್ಕರೆ ಕಾರ್ಖಾನೆಗೆ ಕರ್ನಾಟಕದ ಅತ್ಯುತ್ತಮ ಕಬ್ಬು ಅಭಿವೃದ್ದಿಯ ಪ್ಲಾಟಿನಂ ಅವಾರ್ಡ್ ಲಭಿಸಿದೆ.**

**ಮಹಾಲಿಂಗಪುರ:** ಸಮೀಪದ ಸಮೀರವಾಡಿಯ ಗೋದಾವರಿ ಬಯೋರಿಫೈನರೀಜ್ ಸಕ್ಕರೆ ಕಾರ್ಖಾನೆಗೆ 2024–25ನೇ ಸಾಲಿನ ಕರ್ನಾಟಕದ ಅತ್ಯುತ್ತಮ ಕಬ್ಬು ಅಭಿವೃದ್ದಿಯ ಪ್ಲಾಟಿನಂ ಅವಾರ್ಡ್ ಲಭಿಸಿದೆ. ದಕ್ಷಿಣ ಭಾರತದ ಕಬ್ಬು ಮತ್ತು ಸಕ್ಕರೆ ತಂತ್ರಜ್ಞರ ಸಂಸ್ಥೆ (ಸಿಸ್ಟಾ) ಸೆ.19 ಮತ್ತು 20ರಂದು ಆಯೋಜಿಸಿದ್ದ 54ನೇ ವಾರ್ಷಿಕ ಸಮಾವೇಶದಲ್ಲಿ ಈ ಪ್ರಶಸ್ತಿ ನೀಡಿ ಗೌರವಿಸಿತು.

ಗೋದಾವರಿ ಬಯೋರಿಫೈನರೀಜ್ ಸಕ್ಕರೆ ಕಾರ್ಖಾನೆಯ ಕಾರ್ಯನಿರ್ವಾಹಕ ನಿರ್ದೇಶಕ ಬಿ.ಆರ್.ಭಕ್ಷಿ, ಮುಖ್ಯ ತಾಂತ್ರಿಕ ಅಧಿಕಾರಿ ದಿನೇಶ ಶರ್ಮಾ, ಕಬ್ಬು ಅಭಿವೃದ್ಧಿ ವಿಭಾಗದ ವ್ಯವಸ್ಥಾಪಕರಾದ ವಿ.ಎಸ್.ಕಣಬೂರ, ಎಸ್.ಎಂ.ಪೇಟಿಮನಿ, ವಿ.ಎಸ್.ಭುಜನ್ನವರ ಸಿಸ್ಟಾ ಕರ್ಯಕ್ರಮದಲ್ಲಿ ಹಾಜರಿದ್ದು ಪ್ರಶಸ್ತಿ ಸ್ವೀಕರಿಸಿದರು.

**ದಾನದ ಭೂಮಿ, ಶಾಲೆಯ ಕಟ್ಟಡ ವ್ಯರ್ಥ: ನಿರ್ಲಕ್ಷ್ಯಕ್ಕೆ ಆಕ್ರೋಶಗೊಂಡ ಭೂದಾನಿ: ಒತ್ತುವರಿ ವಿರುದ್ಧ ಕ್ರಮಕ್ಕೆ ಆಗ್ರಹ**

# ಶಿಕ್ಷಣ ಇಲಾಖೆ ಬೇಜವಾಬ್ದಾರಿ ಸರಕಾರಿ ಶಾಲೆ ಅನಾಥ

ವರದಿ ಶಿವಲಿಂಗ ಸಿದ್ನಾಳ

**ಮಹಾಲಿಂಗಪುರ:** ಪುಕ್ಕಟೆ ಸಿಕ್ಕ ಕುದುರೆಗೆ ಲಾಲ್ ಬಡಿಸಿಕೊಂಡವನೇ ಜಾಣ ಎಂಬ ಮಾತಿದೆ. ಉಚಿತವಾಗಿ ಸಿಕ್ಕ ವಸ್ತುವನ್ನು ಜತನದಿಂದ ಕಾಯ್ದುಕೊಳ್ಳುವುದು ಕರ್ತವ್ಯವಾಗಬೇಕು. ಆದರೆ ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಬೇಜವಾಬ್ದಾರಿ ತೋರುತ್ತಿದೆ ಎಂಬ ಆರೋಪ ಕೇಳಿಬಂದಿದೆ.

ಹದಿಮೂರು ವರ್ಷಗಳ ಹಿಂದೆ ಶಾಲೆಗೆಂದು ದಾನ ಮಾಡಿದ ಜಾಗದಲ್ಲಿ ಕಟ್ಟಿದ ಸರಕಾರಿ ಶಾಲೆಯ ಕಟ್ಟಡ ಈಗ ಅನಾಥವಾಗಿದೆ. ಕಟ್ಟಡ ಬಳಕೆಯಾಗದೇ ಪಾಳುಬಿದ್ದಿದೆ. ಪಕ್ಕದ ರೈತರಿಂದ ಒತ್ತುವರಿಯಾಗಿ ಬೇಕಾಬಿಟ್ಟಿ ಬಳಕೆಯಾಗುತ್ತಿದೆ. ಅದು ಸಾರ್ವಜನಿಕರ ಉಪಯೋಗಕ್ಕೆ ಬಳಕೆಯಾಗಬೇಕು ಎಂಬುದು ಭೂದಾನಿಗಳ ಕಳಕಳಿಯಾಗಿದೆ.

**ಕಂಪೌಂಡ್ ಇಲ್ಲದೇ ಒತ್ತುವರಿಗೆ ಅವಕಾಶ:**

ಮುಧೋಳ–ನಿಪ್ಪಾಣಿ ಹೆದ್ದಾರಿ ಪಕ್ಕದಲ್ಲೇ ನಾಗಪ್ಪನ ಗುಡಿ ಹತ್ತಿರ ಪಿ.ಡಿ.ಬುದ್ನಿ ತೋಟದ ಶಾಲೆಗೆ 2012ರಲ್ಲಿ ಡಾ.ಬಿ.ಬಿ.ಹುದ್ದಾರ ಅವರು 10 ಗುಂಟೆ ಜಾಗ ದಾನ ಮಾಡಿದ್ದರು. ಸರಕಾರ ಆ ಜಾಗದಲ್ಲಿ 3 ಕೊಠಡಿ, 1 ಅಡಿಗೆ ಕೋಣೆ. ಕುಡಿವ ನೀರಿನ ತೊಟ್ಟಿ ನಿರ್ಮಿಸಿದೆ. ಹೆದ್ದಾರಿ ಕಾಮಗಾರಿ ನಡೆದಾಗ ಕೆಶಿಪ್‌ನವರು ಶಾಲೆಯ ದಕ್ಷಿಣ ಭಾಗಕ್ಕೆ ಕಂಪೌಂಡ್ ನಿರ್ಮಿಸಿದ್ದಾರೆ. ಆದರೆ ಉಳಿದ ಮೂರು ದಿಕ್ಕಿನಲ್ಲಿ ಕಂಪೌಂಡ್ ಇಲ್ಲದ್ದರಿಂದ ಒತ್ತುವರಿಗೆ ಅವಕಾಶವಾಗಿದೆ.

**ಮಕ್ಕಳಿಲ್ಲದ ಶಾಲೆ ಭೂತದ ಮನೆ:** ಮಕ್ಕಳ ಸಂಖ್ಯೆ ಕಡಿಮೆಯಾಗಿದ್ದರಿಂದ ಸದರಿ ಶಾಲೆಯ ಮಕ್ಕಳನ್ನು ಮಹಾಲಿಂಗಪುರ ಪಟ್ಟಣದ ಬುದ್ನಿ ಪಿಡಿ ಬಡಾವಣೆಯ ಶಾಲೆಗೆ ಸ್ಥಳಾಂತರಿಸಲಾಗಿದೆ. ಆದರೆ ಅಂದಿನಿಂದ ಇಲ್ಲಿನ ಕಟ್ಟಡ ಅನಾಥವಾಗಿ ನಿರ್ಜನ ಭೂತ ಬಂಗಲೆ ಥರಾ ಬಿಕೋ ಎನ್ನುತ್ತಿದೆ. ಕ್ರಮೇಣ ಪಕ್ಕದವರು ಒತ್ತುವರಿ ಮಾಡಿ, ಶಾಲೆಯ ಆವರಣದಲ್ಲಿ ಕಣಿಕೆ ಗೂಡು, ಕಸ, ಕಳೆ, ಬೆಳೆ, ತ್ಯಾಜ್ಯ ಚೆಲ್ಲಿದ್ದರಿಂದ ಇಡೀ ಆವರಣ ಗಬ್ಬೆದ್ದಿದೆ.




### ಶಾಲೆಯ ಜಾಗ ಒತ್ತುವರಿ

ಶಾಲೆಗೆಂದು ಡಾ.ಬಿ.ಬಿ.ಹುದ್ದಾರ ಅವರು ಉಚಿತವಾಗಿ ನೀಡಿದ ಜಾಗೆಗೆ ಇಲಾಖೆ ತಂತಿಬೇಲಿ, ಕಂಪೌಂಡ್ ನಿರ್ಮಿಸುವ ಜವಾಬ್ದಾರಿ ತೋರಿಲ್ಲ. ಇದೇ ಅವಕಾಶವೆಂದು ಪಕ್ಕದ ರೈತರು ಮೂರ್ನಾಲ್ಕು ಅಡಿ ಜಾಗೆ ಒತ್ತುವರಿ ಮಾಡಿ ಸೀಮೆಕಲ್ಲು ನೆಟ್ಟಿದ್ದಾರೆ. ಇದರ ಬಗ್ಗೆ ಇಲಾಖೆ ನಿರ್ಲಕ್ಷ್ಯ ವಹಿಸಿದೆ. ಸಂಬಂಧಪಟ್ಟವರು ಶಾಲೆಯ ಜಾಗೆಯನ್ನು ಅಳೆದು ಬೌಂಡರಿ ನಿರ್ಮಿಸಬೇಕು ಎಂಬುದು ಭೂದಾನಿಗಳ ಒತ್ತಾಯವಾಗಿದೆ.

ಭೂಮಿಯ ಬೆಲೆ 80 ಲಕ್ಷ, ಅಧಿಕಾರಿಗಳ ನಿರ್ಲಕ್ಷ್ಯ, ನಮ್ಮ ತಂದೆ ಉಚಿತ ಭೂಮಿ ನೀಡಿದ್ದು ಶಿಕ್ಷಣಕ್ಕಾಗಿ ಹೊರತು, ಬೇಕಾಬಿಟ್ಟಿ ಯಾರದೋ ಬಳಕೆಗೆ ಅಲ್ಲ. ಮಕ್ಕಳನ್ನು ಬೇರೆಡೆ ವರ್ಗಾಯಿಸಿದಾಗ ಕಟ್ಟಡ ಖಾಲಿ ಬಿದ್ದು ಒತ್ತುವರಿಯಾಗಿದೆ. ಸಧ್ಯಕ್ಕೆ 80 ಲಕ್ಷ ರೂ. ಬೆಲೆ ಬಾಳುವ ಈ ಜಾಗದ ದಾನ ವ್ಯರ್ಥವಾಗಬಾರದು. ಒತ್ತುವರಿ ತಡೆದು ಜಾಗ ರಕ್ಷಿಸಿರಿ ಎಂದು ಬಿಇಓ, ಸಿಆರ್‌ಪಿ ಸೇರಿದಂತೆ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಕೂಡ ಯಾರೊಬ್ಬರೂ ಈ ಶಾಲೆಗೆ ಭೇಟಿ ನೀಡಿಲ್ಲ. ಕಟ್ಟಡ ನಿರ್ವಹಣೆ, ಸಂರಕ್ಷಣೆ ಮಾಡುವ ಯೋಗ್ಯತೆ ಇಲಾಖೆಗೆ ಇಲ್ಲವೇ?

**ಸಂತೋಷ ಹುದ್ದಾರ**
**ಭೂದಾನಿ, ಮಹಾಲಿಂಗಪುರ**

## ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಬೈಲಹೊಂಗಲ ತಾಲೂಕಿನ ವಕ್ಕುಂದ ಗ್ರಾಮದಲ್ಲಿ ಪ್ರಸ್ತುತ ಒಂದು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ದಿನಾಂಕ: 18–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಬೈಲಹೊಂಗಲ ತಹಶೀಲ್ದಾರ ಕಚೇರಿ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

